RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 103 ಪುಟ: 06 ಬುಧವಾರ 19–03–2025

₹ 3 Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh

ಸುದ್ದಿ, ಜಾಹೀರಾತು ಹಾಗೂ ಪತ್ರಿಕೆಗೆ ಚಂದಾದಾರರಾಗಲು ಸಂಪರ್ಕಿಸಿ: 9448074878



ಕಿಸ್ಸಿಂಗ್ ಸೀನ್‌ಗೆ ಹೆದರಿ ಎಷ್ಟು ದಿನ ಓಡಲಿ

ಒಲಿಂಪಿಕ್ಸ್‌ಗೆ ಕ್ರಿಕೆಟ್ ಸೇರ್ಪಡೆ; ಐಪಿಎಲ್ ಮಹತ್ವದ ಪಾತ್ರ

ವಿಮರ್ಶಕನಿಗೆ ಬೆದರಿಕೆ; ಆರೋಪ ↘ ಪುಟ 6

## ಗಗನಯಾತ್ರಿಗಳನ್ನು ಸುರಕ್ಷಿತವಾಗಿ ಕರೆತಂದ ನಾಸಾ; ಮೋದಿ ಸಂತಸ

# ಭೂಮಿಗೆ ಮರಳಿದ ಸುನೀತಾ

**ವಾಷಿಂಗ್ಟನ್:** ಕಳೆದ ಒಂಭತ್ತು ತಿಂಗಳಿನಿಂದ ಭೂಮಿಗೆ ಮರಳಲಾಗದೇ ಬಾಹ್ಯಕಾಶದಲ್ಲೇ ಇದ್ದ ಗಗನಯಾತ್ರಿಗಳನ್ನು ಭೂಮಿಗೆ ಕರೆತರುವಲ್ಲಿ ನಾಸಾ ಯಶಸ್ವಿಯಾಗಿದೆ.

ವಿಶೇಷವಾಗಿ ತಯಾರಿಸಲಾಗಿದ್ದ ಸ್ಪೇಸ್‌ಎಕ್ಸ್‌ನ ಡ್ರಾಗನ್ ಕ್ರಾಫ್ಟ್ ಬಾಹ್ಯಾಕಾಶ ನೌಕೆಯಲ್ಲಿ ಭಾರತೀಯ ಕಾಲಮಾನ ಬುಧವಾರ ಬೆಳಗ್ಗೆ 3:27ಕ್ಕೆ ನಾಸಾ ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಸುರಕ್ಷಿತವಾಗಿ ಭೂಮಿಗೆ ಬಂದಿಳಿದಿದ್ದಾರೆ.

ಭಾರತೀಯ ಮೂಲದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಜೂನ್ 5, 2024ರಂದು ಪರೀಕ್ಷಾ ವಾಹನ ಸ್ಟಾರ್‌ಲೈನರ್‌ನಲ್ಲಿ ಐಎಸ್‌ಎಸ್‌ಗೆ ಪಯಣ ಬೆಳೆಸಿದ್ದರು. ಎಂಟು ದಿನಗಳನ್ನು ಅಲ್ಲಿ ಕಳೆದ ನಂತರವೇ ಹಿಂತಿರುಗಬೇಕಿತ್ತು. ಕೆಲವೇ ದಿನಗಳ ಈ ಕಾರ್ಯಾಚರಣೆ ಒಂಬತ್ತು ತಿಂಗಳಿಗೆ ವಿಸ್ತರಣೆಗೊಂಡಿತ್ತು.

59 ವರ್ಷದ ಸುನೀತಾ ವಿಲಿಯಮ್ಸ್ ಮತ್ತು 62 ವರ್ಷದ ಬುಚ್ ವಿಲ್ಮೋರ್ ಭೂಮಿಗೆ ಮರಳುವುದನ್ನು ಕಾಯಲಾಗುತ್ತಿತ್ತು. ಈ ಕಾಯುವಿಕೆ ಇದೀಗ ಇಬ್ಬರೂ ಸುರಕ್ಷಿತವಾಗಿ ಮರಳುವುದರೊಂದಿಗೆ ಕೊನೆಗೊಂಡಿದೆ.

ಇವರೊಂದಿಗೆ ನಿಕ್ ಹೇಗ್ ಮತ್ತು ಅಲೆಕ್ಸಾಂಡರ್ ಗೋರ್ಬುನೋವ್ ಕೂಡಾ ಮರಳಿದ್ದಾರೆ. ಐಎಸ್‌ಎಸ್ ಕ್ರೂ–9 ಸದಸ್ಯರನ್ನು ಹೊತ್ತ ಸ್ಪೇಸ್‌ಎಕ್ಸ್ ಡ್ರ್ಯಾಗನ್ ನೌಕೆ ಫ್ಲೋರಿಡಾದ ಸಮುದ್ರದಲ್ಲಿ ಸುರಕ್ಷಿತವಾಗಿ ಇಳಿದಿದೆ.

ಸ್ಪೇಸ್‌ಎಕ್ಸ್‌ನ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಭೂಮಿಗೆ ಮರಳಲು ವಿಶೇಷ ವಿಧಾನ ಅಳವಡಿಸಿಕೊಂಡು. ನೌಕೆ ಭೂಮಿಯ ವಾತಾವರಣವನ್ನು ಸುರಕ್ಷಿತವಾಗಿ ಪ್ರವೇಶಿಸಿ, ಗೊತ್ತುಪಡಿಸಿದ ಸ್ಥಳದಲ್ಲಿಳಿಯಲು ಸಾಧ್ಯವಾಯಿತು.

ಸುನೀತಾ ವಿಲಿಯಮ್ಸ್ ಮತ್ತು ಅವರ ಸಹ ಗಗನಯಾತ್ರಿಗಳ ಬಾಹ್ಯಾಕಾಶ ನೌಕೆಯನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು. ಈಗ ಅವರು ಹ್ಯೂಸ್ಟನ್‌ನಲ್ಲಿರುವ ನಾಸಾದ ಮಾನವ ಬಾಹ್ಯಾಕಾಶ ಹಾರಾಟ ಕಾರ್ಯಾಚರಣೆಗಳ ಪ್ರಧಾನ ಕಚೇರಿಯಾದ ಜಾನ್ಸನ್ ಬಾಹ್ಯಾಕಾಶ ಕೇಂದ್ರದಲ್ಲಿದ್ದಾರೆ.

ಸುನೀತಾ ತಮ್ಮ ವೃತ್ತಿಜೀವನದಲ್ಲಿ 9 ವಿಭಿನ್ನ ಬಾಹ್ಯಾಕಾಶ ನಡಿಗೆ ಒಳಗೊಂಡಂತೆ 62 ಗಂಟೆಗಳ ಕಾಲ ಬಾಹ್ಯಾಕಾಶ ನಡಿಗೆ ಮಾಡಿದ್ದಾರೆ. ಅನುಭವಿ ಗಗನಯಾತ್ರಿಯಾಗಿದ್ದ ಸುನೀತಾ ಅವರನ್ನು ಐಎಸ್‌ಎಸ್‌ನಲ್ಲಿ ಮೂರು ತಿಂಗಳು ಕಳೆದ ನಂತರ ನಿಲ್ದಾಣದ ಕಮಾಂಡರ್ ಆಗಿ ನೇಮಿಸಲಾಯಿತು. ಮತ್ತು ಈ ತಿಂಗಳ ಆರಂಭದವರೆಗೂ ಅವರು ಹುದ್ದೆಯಲ್ಲಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿದ್ದಾರೆ.

ಈ ಸಂಬಂಧ ಪ್ರಧಾನಿ ನರೇಂದ್ರ ಮೋದಿ ಅವರು ಸೇರಿದಂತೆ ಸಂಸದರು, ವಿಜ್ಞಾನಿಗಳು, ನಾಸಾದ ಅಧಿಕಾರಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.



**ಗಗನಯಾತ್ರಿಗಳು ನಾಸಾ ಆಸ್ಪತ್ರೆಗೆ ದಾಖಲು**

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಕ್ಷೇಮವಾಗಿ ವಾಪಸ್ ಆಗಿರುವ ನಾಲ್ವರು ಗಗನಯಾತ್ರಿಗಳನ್ನು ನಾಸಾ ಆಸ್ಪತ್ರೆಗೆ ದಾಖಲಿಸಲಾಗಿದೆ. ನಾಲ್ವರು ಗಗನಯಾತ್ರಿಗಳನ್ನು ಅವರು ಧರಿಸಿದ್ದ ವಿಶೇಷ ಸ್ಪೇಸ್ ಸೂಟ್‌ನಲ್ಲೇ ಹೆಲಿಕಾಪ್ಟರ್ ಮೂಲಕ ಅವರನ್ನು ನಾಸಾ ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಇಷ್ಟು ದಿನ ಬಾಹ್ಯಾಕಾಶದಲ್ಲಿದ್ದ ಕಾರಣ ಇಲ್ಲಿನ ವಾತಾವರಣಕ್ಕೆ ಗಗನಯಾತ್ರಿಗಳು ಹೊಂದಿಕೊಳ್ಳಬೇಕಿದೆ. ಅವರ ಆರೋಗ್ಯ ಸ್ಥಿತಿ ಸ್ಪಂದಿಸಬೇಕಿದೆ. ಹೀಗಾಗಿ ಆಸ್ಪತ್ರೆಗೆ ದಾಖಲಿಸಿ ಅಗತ್ಯ ಚಿಕಿತ್ಸೆ ನೀಡಲಾಗುತ್ತೆ. ಸಮಗ್ರವಾಗಿ ತಪಾಸಣೆಗೆ ಒಳಪಡಿಸಲಾಗುತ್ತದೆ ಎಂದು ನಾಸಾ ತಿಳಿಸಿದೆ.

ಕಡಲ ತೀರದ ಮೇಲೆ ಇಳಿದ ನೌಕೆಯಿಂದ ಮೊದಲಿಗೆ ನಾಸಾ ಗಗನಯಾತ್ರಿ ಹೇಗ್‌ರನ್ನು ಹೊರಗೆ ತರಲಾಯಿತು. ನಂತರ ರಷ್ಯಾದ ಗಗನನಯಾತ್ರಿ ಅಲೆಕ್ಸಾಂಡರ್ ಗೋರ್ಬುನೋವ್ ಅವರನ್ನು ಹೊರಗೆ ತರಲಾಯಿತು. ಇವರಿಬ್ಬರೂ ಬಾಹ್ಯಾಕಾಶ ಕೇಂದ್ರದಲ್ಲಿ ಸಿಲುಕಿದ್ದ ಸುನೀತಾ ಮತ್ತು ವಿಲ್ಲೋರ್ ಅವರನ್ನು ಕರೆತರಲು 8 ದಿನಗಳ ಹಿಂದಷ್ಟೇ ಬಾಹ್ಯಾಕಾಶಕ್ಕೆ ತೆರಳಿದ್ದರು.

ತಕ್ಷಣ ಎದ್ದು ನಿಲ್ಲಲು ಆಗದಿದ್ದರೂ ಇವರಿಬ್ಬರ ದೇಹಸ್ಥಿತಿಯಲ್ಲಿ ಅಷ್ಟಾಗಿ ಬದಲಾವಣೆ ಕಂಡುಬಂದಂತೆ ಕಾಣಲಿಲ್ಲ. ಇನ್ನು ಮೂರನೆಯದಾಗಿ ಸುನೀತಾ ವಿಲಿಯಮ್ ಅವರನ್ನು ಹೊರಗೆ ಕರೆತರಲಾಯಿತು. ಬರೋಬ್ಬರಿ 9 ತಿಂಗಳ ಬಳಿಕ ಭೂಮಿಗೆ ಬಂದ ಸುನೀತಾರ ಸಂತಸಕ್ಕೆ ಪಾರವೇ ಇರಲಿಲ್ಲ. ಪುಟ 2



ಚಿಕ್ಕಮಗಳೂರು ಜಿಲ್ಲೆಯ ಆಡಳಿತ ಪಕ್ಷದ ಶಾಸಕರು ತಮ್ಮ ಬೇಡಿಕೆಗಳು ಹಾಗೂ ಮಲೆನಾಡಿನ ಸಮಸ್ಯೆಗಳಿಗೆ ಪರಿಹಾರ ಒದಗಿಸುವಂತೆ ಒತ್ತಾಯಿಸಿ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಸಭೆ ನಡೆಸಿ, ಚರ್ಚಿಸಿ ಮನವಿ ಅರ್ಪಿಸಿದರು.

## ಶಿರಾದಲ್ಲಿ ಶೀಘ್ರದಲ್ಲೇ ಆತ್ಯಾಧುನಿಕ ಕುರಿ/ಮೇಕೆ ವಧಾಗಾರ ಉದ್ಘಾಟನೆ

ಬೆಂಗಳೂರು : ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ರಾಜ್ಯದಲ್ಲೇ ಮೊದಲ ಬಾರಿಗೆ ತುಮಕೂರಿನ ಶಿರಾದಲ್ಲಿ ಸುಸಜ್ಜಿತ ಆತ್ಯಾಧುನಿಕ ವಧಾಗಾರ ಕಾಮಗಾರಿ ಪೂರ್ಣಗೊಂಡಿದೆ. ಶೀಘ್ರದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದಾರೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ಬುಧವಾರ ವಿಧಾನಪರಿಷತ್‌ನಲ್ಲಿ ಮಾತನಾಡಿದ ಸಚಿವರು, ಶಿರಾ ತಾಲೂಕಿನ ಚೀಲನಹಳ್ಳಿ ಬಳಿ 20 ಎಕರೆಯಲ್ಲಿ ನಿರ್ಮಾಣಗೊಂಡಿರುವ ಆಧುನಿಕ ಸಂಸ್ಕರಣಾ ಕೇಂದ್ರ (ವಧಾಗಾರ) ಶೀಘ್ರದಲ್ಲಿ ಕಾರ್ಯಾರಂಭಗೊಳ್ಳಲಿದೆ. ಇದರ ನಿರ್ಮಾಣಕ್ಕಾಗಿ ಮೀಸಲಿರಿಸಿದ್ದ ಅಂದಾಜು ಮೊತ್ತದಲ್ಲಿ 44.63 ಕೋಟಿ ಪೈಕಿ 26,56 ಕೋಟಿ ರೂ. ಸಿವಿಲ್ ಕಾಮಗಾರಿ ಪೂರ್ಣಗೊಳಿಸಲಾಗಿದೆ. ಪಿಪಿಪಿ ಮಾದರಿಯಲ್ಲಿ



16 ಕೋಟಿ ರೂ. ವೆಚ್ಚದಲ್ಲಿ ಯಂತ್ರೋಪಕರಣ ಅಳವಡಿಸಲಾಗಿದೆ. ಒಮ್ಮೆ ಕಾರ್ಯಾರಂಭಗೊಂಡರೆ ವೈಜ್ಞಾನಿಕ ಹಾಗೂ ಗುಣಮಟ್ಟ ರೀತಿ ವಧೆಕಾರ್ಯ ಮಾಡಬಹುದಾಗಿದೆ ಎಂದು ಬಿಜೆಪಿ ಸದಸ್ಯ ಚಿದಾನಂದ್ ಎಂ. ಗೌಡ ಅವರ ಪ್ರಶ್ನೆಗೆ ಪಶುಸಂಗೋಪನೆ ಸಚಿವರ ಪರವಾಗಿ ಕಂದಾಯ ಸಚಿವರು ಉತ್ತರಿಸಿದರು. ಪುಟ 2

## ಸ್ಯಾಂಕಿ ಟ್ಯಾಂಕ್‌ನಲ್ಲಿ 'ಕಾವೇರಿ ಆರತಿ' ಆಯೋಜನೆ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ



**ಬೆಂಗಳೂರು:** ನಗರದ ಸ್ಯಾಂಕಿ ಟ್ಯಾಂಕ್‌ನ ಬಫರ್ ಝೋನ್‌ನಲ್ಲಿ ರಾಜ್ಯ ಸರ್ಕಾರ ಮಾರ್ಚ್ 21ರಂದು ಗಂಗಾರತಿ ಮಾದರಿಯಲ್ಲಿ ಹಮ್ಮಿಕೊಂಡ ಕಾವೇರಿ ಆರತಿ ಕಾರ್ಯಕ್ರಮವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಮಧ್ಯಂತರ ಅರ್ಜಿ ಸಲ್ಲಿಕೆಯಾಗಿದೆ. ನಗರದ ಕೆರೆಗಳ ಸಂರಕ್ಷಣೆ ಮತ್ತು ಕುರಿತಂತೆ ಗೀತಾ ಮಿಶ್ರಾ ಎಂಬವರು 2019ರಲ್ಲಿ ಸಲ್ಲಿಸಿರುವ ಅರ್ಜಿಯೊಂದಿಗೆ, ಮನವಿಯನ್ನು ವಿಚಾರಣೆ ನಡೆಸಬೇಕು ಎಂದು ವಕೀಲ ಜಿ.ಆರ್.ಮೋಹನ್ ವಿಷಯ ಪ್ರಸ್ತಾಪಿಸಿದರು. ಪುಟ 2

### ಹೊತ್ತಿ ಉರಿದ ಕೆಎಸ್‌ಆರ್‌ಟಿಸಿ ಬಸ್; ತಪ್ಪಿದ ಅನಾಹುತ

**ಬೀದರ್ :** ಕಲ್ಯಾಣ ಕರ್ನಾಟಕ ಸಾರಿಗೆ ಬಸ್‌ವೊಂದು ಮಾರ್ಗದ ಮಧ್ಯದಲ್ಲೇ ದಿಢೀರ್ ಬೆಂಕಿ ಹೊತ್ತಿ ಉರಿದ ಘಟನೆ ಜಿಲ್ಲೆಯ ಕಪ್ಪಿಕೆರೆ ಗ್ರಾಮದ ಕ್ರಾಸ್ ಬಳಿ ಬುಧವಾರ ಬೆಳಗ್ಗೆ ಸಂಭವಿಸಿದೆ. ಬೆಳಗ್ಗೆ 11:15 ಗಂಟೆ ಸುಮಾರಿಗೆ ಬೀದರ್‌ನಿಂದ ಔರಾದ್ ಕಡೆಗೆ ಬಸ್ ಹೊರಟಿತ್ತು. ಸುಮಾರು 25 ಮಂದಿ ಪ್ರಯಾಣಿಕರು ಇದ್ದರು. ಆದರೆ, ಪುಟ 2

### ಅಪಘಾತ: ರಸ್ತೆಯಲ್ಲಿ ಬಡಿದುಕೊಳ್ಳುತ್ತಿತ್ತು ಸವಾರನ ಹೃದಯ!

**ರಾಯಚೂರು:** ಲಾರಿ ಬೈಕ್‌ಗೆ ಡಿಕ್ಕಿ ಹೊಡೆದು ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿ, ಹಿಂಬದಿ ಕುಳಿತಿದ್ದ ಬಾಲಕ ಗಂಭೀರವಾಗಿ ಗಾಯಗೊಂಡಿರುವ ಘಟನೆ ಕಳೆದ ರಾತ್ರಿ ರಾಯಚೂರಿನಲ್ಲಿ ನಡೆದಿದೆ. ನಗರದ ಕೇಂದ್ರೀಯ ಬಸ್ ನಿಲ್ದಾಣ ಹಾಗೂ ರೈಲ್ವೆ ಸ್ಟೇಷನ್‌ಗೆ ರಸ್ತೆ ಸಂಪರ್ಕ ಕಲ್ಪಿಸುವ ಸ್ಟೇಷನ್ ರಸ್ತೆಯಲ್ಲಿನ ಶ್ರೀರಾಮಮಂದಿರ ಬಳಿ ಈ ಅವಘಡ ಸಂಭವಿಸಿದ್ದು, ಉತ್ತರ ಪುಟ 2

### ಜೂಜಾಟ: ಎಎಸ್‌ಐ ಸೇರಿ ಐವರು ಸಸ್ಪೆಂಡ್

**ಕಲಬುರಗಿ:** ವಾಡಿ ಪೊಲೀಸ್ ಠಾಣೆಯಲ್ಲಿ ಇಸ್ಪಿಟ್ ಆಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಎ.ಎಸ್.ಐ ಸೇರಿದಂತೆ ಐವರನ್ನು ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಆದೇಶ ಹೊರಡಿಸಿದ್ದಾರೆ. ಎ.ಎಸ್.ಐ ಮೆಹಮೂದ್ ಮಿಯಾ, ಹೆಡ್ ಕಾನ್ ಸ್ಟೇಬಲ್‌ಗಳಾದ ನಾಗರಾಜ್, ಸಾಯಬಣ್ಣ , ಇಮಾಮ್ ಹಾಗೂ ಪೇದೆ ಪುಟ 2

## ತಮ್ಮ ತಮ್ಮ ಕ್ಷೇತ್ರವನ್ನೇ ನೋಡುತ್ತಾ ಹೋದ್ರೆ ರಾಜ್ಯದ ಸಮಗ್ರ ಅಭಿವೃದ್ಧಿ ಹೇಗೆ?



ಬೆಂಗಳೂರು: ಕೃಷಿ ಕಾಲೇಜು ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನ ಸಚಿವರು ತಮ್ಮ ತಮ್ಮ ಕ್ಷೇತ್ರಕ್ಕೆ ತೆಗೆದುಕೊಂಡು ಹೋಗುತ್ತಾರೆ. ತಮ್ಮ ತಮ್ಮ ಕ್ಷೇತ್ರವನ್ನೇ ನೋಡುತ್ತಾ ಹೋದರೆ ರಾಜ್ಯದ ಸಮಗ್ರ ಅಭಿವೃದ್ಧಿ ಹೇಗೆ? ಎಂದು ಕಡೂರು ಕ್ಷೇತ್ರದ ಕಾಂಗ್ರೆಸ್ ಶಾಸಕ ಕೆ.ಎಸ್ ಆನಂದ್ ಅಸಮಾಧಾನ ವ್ಯಕ್ತಪಡಿಸಿದರು.

ವಿಧಾನಸಭೆ ಕಲಾಪದಲ್ಲಿ ಮಾತನಾಡಿದ ಆಡಳಿತ ಪಕ್ಷದ ಶಾಸಕ ಕೆ.ಎಸ್ ಆನಂದ್, ಬಜೆಟ್ ನಲ್ಲಿ ಇಂಜಿನಿಯರಿಂಗ್ ಕಾಲೇಜು, ಕೃಷಿ ಕಾಲೇಜು ಸ್ಥಾಪನೆ ಮಾಡುವುದಾಗಿ ಹೇಳಿದ್ದಾರೆ. ಇಂಜಿನಿಯರಯಿಂಗ್ ಕಾಲೇಜನ್ನ ಉನ್ನತ ಶಿಕ್ಷಣ ಸಚಿವರು ತಮ್ಮ ಕ್ಷೇತ್ರ ಚಿಂತಾಮಣಿಗೆ ತೆಗೆದುಕೊಂಡು ಹೋಗುತ್ತಾರೆ. ಕೃಷಿಕಾಲೇಜನ್ನ ಕೃಷಿ ಸಚಿವರು ಮಂಡ್ಯಕ್ಷೇತ್ರಕ್ಕೆ ತೆಗೆದುಕೊಂಡು ಹೋಗುತ್ತಾರೆ. ಸಚಿವರು ಅವರವರ ಕ್ಷೇತ್ರಗಳಿಗೆ ತೆಗೆದುಕೊಂಡು ಹೋದರೇ ನಮ್ಮ ಪರಿಸ್ಥಿತಿ ಏನು..? ಎಂದು ಪ್ರಶ್ನಿಸಿದರು. ಪುಟ 2

## ರಾಗಿ, ಭತ್ತ ಖರೀದಿ ಕೇಂದ್ರಗಳು ವರ್ಷಪೂರ್ತಿ ಕಾರ್ಯ ನಿರ್ವಹಣೆಗೆ ಆಗ್ರಹ

**ಬೆಂಗಳೂರು:** ರಾಜ್ಯದಲ್ಲಿ ರಾಗಿ, ಭತ್ತ ಖರೀದಿ ಕೇಂದ್ರಗಳು ವರ್ಷ ಪೂರ್ತಿ ಕಾರ್ಯನಿರ್ವಹಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ರೈತ ಸಂಘದ ದರ್ಶನ್ ಪುಟ್ಟಣ್ಣಯ್ಯ ವಿಧಾನಸಭೆಯಲ್ಲಿ ಹೇಳಿದರು.

ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರೈತರು ಸಾಲ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ರೈತರ ಆತ್ಮಹತ್ಯೆಯನ್ನು ತಡೆಯಲು ಸರಳ ರೀತಿಯಲ್ಲಿ ರೈತರಿಗೆ ಸಾಲ ವಿತರಿಸುವ ವ್ಯವಸ್ಥೆಯನ್ನು ಜಾರಿ ಮಾಡಿ ಎಂದು ಒತ್ತಾಯಿಸಿದರು.

ನೀರಾವರಿಗೆ ಈ ಸರ್ಕಾರ ಕಡಿಮೆ ಹಣ ಒದಗಿಸಿದೆ. ನೀರಾವರಿಗೆ ಹೆಚ್ಚಿನ ಹಣ ಒದಗಿಸಬೇಕು ಎಂದು ಆಗ್ರಹಿಸಿದ ಅವರು, ಕೇಂದ್ರ ಸರ್ಕಾರದ ಮೂರು ಕೃಷಿ ಕಾಯ್ದೆಗಳನ್ನು ರಾಜ್ಯ ಸರ್ಕಾರ ಕೈ ಬಿಡಬೇಕು. ರಾಷ್ಟ್ರೀಯ ಕೃಷಿ ನೀತಿಯನ್ನು ಕೈಬಿಡಬೇಕು ಎಂದು



ಅವರು ಒತ್ತಾಯಿಸಿದರು.

ಸಾವಯವ ಕೃಷಿ ಹೆಚ್ಚಿನ ಒತ್ತು ನೀಡುವ ಅಗತ್ಯವಿದೆ. ಹಿಮಾಚಲ ಪ್ರದೇಶದಲ್ಲಿ ಸಾವಯವ ಕೃಷಿಗೆ ಹೆಚ್ಚಿನ ಸಬ್ಸಿಡಿ, ನೆರವು ಒದಗಿಸಲಾಗುತ್ತಿದೆ. ರಾಜ್ಯದಲ್ಲೂ ಸರ್ಕಾರ ಸಾವಯವ ಕೃಷಿಗೆ ಹೆಚ್ಚಿನ ನೆರವು ನೀಡಬೇಕು. ಪ್ರತಿ ಹೋಬಳಿಯಲ್ಲಿ ಒಂದು ಪಂಚಾಯ್ತಿಯನ್ನು ಸಹಜ ಕೃಷಿಗೆ ಒಳಪಡುವಂತೆ ಅನುದಾನ ನೀಡಬೇಕು ಎಂದರು. ಚಾಮರಾಜನಗರದಲ್ಲಿ ರೈತನಾಯಕ ಪ್ರೊ. ನಂಜುಂಡಸ್ವಾಮಿಯವರ ಅಧ್ಯಯನ ಪೀಠವನ್ನು ಸರ್ಕಾರ ರಚಿಸಿರುವುದನ್ನು ಅವರು ಸ್ವಾಗತಿಸಿದರು.

ರಾಜ್ಯದಲ್ಲಿ ತೊಗರಿ ಬೆಳೆ ನಷ್ಟದಿಂದ ತೊಗರಿ ಬೆಳೆಗಾರರು ಸಂಕಷ್ಟದಲ್ಲಿದ್ದಾರೆ. ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸರ್ಕಾರ ತೊಗರಿ ಬೆಳೆಗಾರರ ನೆರವಿಗೆ ಧಾವಿಸಬೇಕು. ಪ್ರತಿ ಎಕರೆಗೆ 10 ಸಾವಿರ ರೂ. ಪರಿಹಾರ ನೀಡಬೇಕು ಎಂದು ಬಿಜೆಪಿಯ ಬಸವರಾಜ ಮತ್ತಿಮೋಡ್ ಆಗ್ರಹಿಸಿದರು.

ವಿಧಾನಸಭೆಯಲ್ಲಿಂದು ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದಲ್ಲಿ ತೊಗರಿ ಬೆಳೆಗಾರರು ಪರಿಹಾರಕ್ಕಾಗಿ ಪ್ರತಿಭಟನೆ ನಡೆಸಿದ್ದಾರೆ. ತೊಗರಿ ಬೆಳೆಗಾರರಿಗೆ ಸುಮಾರು 800 ಕೋಟಿ ರೂ. ವಿಶೇಷ ಪ್ಯಾಕೇಜ್‌ನ್ನು ನೀಡಿ ಎಂದು ಒತ್ತಾಯಿಸಿದರು.

ಟಿಎಸ್‌ಪಿ–ಎಸ್‌ಟಿಪಿಯಡಿ ಶಾಸಕರಿಗೆ ಅನುದಾನ ಬಿಡುಗಡೆ ಮಾಡುತ್ತಿಲ್ಲ. ಬೋರ್‌ವೆಲ್, ರಸ್ತೆ, ಚರಂಡಿ ಯಾವುದನ್ನೂ ಮಾಡಲು ಆಗುತ್ತಿಲ್ಲ. ಹಾಗಾಗಿ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಅನುದಾನವನ್ನು ಒದಗಿಸಿ ಎಂದು ಅವರು ಒತ್ತಾಯಿಸಿದರು.

**ಮೆಣಸಿನಕಾಯಿಗೆ ಬೆಂಬಲ ಬೆಲೆ ನೀಡಿ**

ರಾಜ್ಯದಲ್ಲಿ ಮೆಣಸಿನಕಾಯಿ ಬೆಳೆಯುವ ರೈತರು ಸಂಕಷ್ಟದಲ್ಲಿದ್ದಾರೆ. ಬೆಲೆ ಕುಸಿತದಿಂದ ರೈತರು ಕಂಗಾಲಾಗಿ ಆತ್ಮಹತ್ಯೆ ದಾರಿ ಹಿಡಿದಿದ್ದಾರೆ. ಮೆಣಸಿನಕಾಯಿ ಬೆಳೆಗೆ ಬೆಂಬಲ ಬೆಲೆ ನೀಡಿ ರೈತರ ಸಂಕಷ್ಟಕ್ಕೆ ನೆರವಾಗಿ ಎಂದು ಕಾಂಗ್ರೆಸ್‌ನ ಗಣೇಶ್ ಅವರು ವಿಧಾನಸಭೆಯಲ್ಲಿ ಸರ್ಕಾರವನ್ನು ಒತ್ತಾಯಿಸಿದರು. ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬಳ್ಳಾರಿ ಹೆಚ್ಚು ಮೆಣಸಿನ ಕಾಯಿ ಬೆಳೆಯುವ ಪ್ರದೇಶವಾಗಿದೆ. ಈ ಬಾರಿ ಕ್ವಿಂಟಾಲ್ ಮೆಣಸಿನಕಾಯಿ ಪುಟ 2

## ಮುಸಲ್ಮಾನರಿಗೆ ಮೀಸಲಾತಿ ವಿರುದ್ಧ ಬಿಜೆಪಿಯಿಂದ ಹೋರಾಟ

ಬೆಂಗಳೂರು: ರಾಜ್ಯದ ಕಾಂಗ್ರೆಸ್ ಸರಕಾರವು ಮುಸಲ್ಮಾನರಿಗೆ ಮೀಸಲಾತಿ ನೀಡುವ ಮಸೂದೆಯನ್ನು ನಿನ್ನೆ ಸದನದಲ್ಲಿ ಕದ್ದು ಮುಚ್ಚಿ ಮಂಡಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ವಿಧಾನಸೌಧದ ಮುಂಭಾಗದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ವಿಪಕ್ಷದವರ ಕಣ್ತಪ್ಪಿಸಿ ಸದನದಲ್ಲಿ ಮಸೂದೆಯನ್ನು ಮಂಡಿಸಿದ್ದಾರೆ. ಬಿಜೆಪಿಯ ನಿಲುವು ಸ್ಪಷ್ಟವಾಗಿದೆ. ಬಿಜೆಪಿ, ಸಿದ್ದರಾಮಯ್ಯರ ನೇತೃತ್ವದ ಸರಕಾರದ ತುಘಲಕ್ ದರ್ಬಾರನ್ನು ಸ್ಪಷ್ಟವಾಗಿ ವಿರೋಧಿಸುತ್ತದೆ ಎಂದು ಪ್ರಕಟಿಸಿದರು.



ಸದನದ ಒಳಗೆ ಮತ್ತು ಹೊರಗಡೆ ಬಿಜೆಪಿ ಇದನ್ನು ವಿರೋಧಿಸುತ್ತದೆ. ಅಗತ್ಯವಿದ್ದಲ್ಲಿ ರಾಜ್ಯ ಹೈಕೋರ್ಟಿನಲ್ಲೂ ಇದನ್ನು ಪ್ರಶ್ನಿಸುತ್ತೇವೆ ಎಂದು ತಿಳಿಸಿದರು.

ಇವರ ದುರಾಡಳಿತಕ್ಕೆ ಇತಿಮಿತಿ ಇದೆ. ಕಾಂಗ್ರೆಸ್ಸಿನವರು ಅಲ್ಪಸಂಖ್ಯಾತರ ಪುಟ 2

## ರಾಮನಗರ ಹೆಸರು ಬದಲಾವಣೆ: ಡಿಕೆಶಿ ಕನಸಿಗೆ ತಣ್ಣೀರೆರಚಿದ ಕೇಂದ್ರ ಸರ್ಕಾರ

ಬೆಂಗಳೂರು: ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಬದಲಾವಣೆ ಮಾಡುವ ಡಿಸಿಎಂ ಡಿಕೆ ಶಿವಕುಮಾರ್ ಆಸೆಗೆ ಕೇಂದ್ರ ಸರ್ಕಾರ ತಣ್ಣೀರೆರಚಿದೆ.

ಹೌದು, ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣಕ್ಕೆ ರಾಜ್ಯ ಸರ್ಕಾರ ಕಳುಹಿಸಿದ್ದ ಪ್ರಸ್ತಾಪವನ್ನ ಕೇಂದ್ರ ಸರ್ಕಾರ ತಿರಸ್ಕರಿಸಿದೆ. ಈ ಸಂಬಂಧ ಎರಡು ತಿಂಗಳ ಹಿಂದೆಯೇ ಕೇಂದ್ರ ಗೃಹ ಸಚಿವಾಲಯ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದೆ.

ಪತ್ರದಲ್ಲಿ ಸ್ಥಳೀಯ ನಿವಾಸಿಗಳ ವಿರೋಧ ಉಲ್ಲೇಖಿಸಿರುವ ಕೇಂದ್ರ ಗೃಹ ಸಚಿವಾಲಯ, ವಿರೋಧ ಕಡೆಗಣಿಸಿ ಮುಂದುವರೆಯುವುದು ಬೇಡ ಕಾನೂನು ಸಮಸ್ಯೆ ಉಂಟಾಗಬಹುದೆಂದು. ಹೀಗಾಗಿ ಮರುನಾಮಕರಣ ಪ್ರಸ್ತಾವನೆ ಮುಂದುವರೆಸಬಾರದು ಎಂದು ಹೇಳಿದೆ.

## ರನ್ಯಾ ರಾವ್ ವಿರುದ್ದ ಅವಹೇಳನಕಾರಿ ಹೇಳಿಕೆ; ಯತ್ನಾಳ್ ವಿರುದ್ಧ ಪ್ರಕರಣ ದಾಖಲು

**ಬೆಂಗಳೂರು:** ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧಿತರಾಗಿರುವ ನಟಿ ರನ್ಯಾ ರಾವ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.



ಅಕುಲಾ ಅನುರಾಧಾ ಎಂಬುವವರು ನೀಡಿದ ದೂರಿನ ಆಧಾರದ ಮೇಲೆ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಯತ್ನಾಳ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವಿಜಯಪುರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಶಾಸಕರು ನಟಿಯ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ದೂರುದಾರರು ಆರೋಪಿಸಿದ್ದಾರೆ.

ರನ್ಯಾ ರಾವ್ ಬಹುಭಾಷಾ ನಟಿ ಮತ್ತು ಸಮಾಜದಲ್ಲಿ ಗೌರವ ಹೊಂದಿದ್ದಾರೆ ಎಂದು ಪ್ರತಿಪಾದಿಸಿದ ದೂರುದಾರರು, ನಟಿಯ ವಿರುದ್ಧ ಯತ್ನಾಳ್ ಅವರ ಹೇಳಿಕೆಗಳು ಆಕ್ಷೇಪಾರ್ಹ, ಅಸಭ್ಯ ಮತ್ತು ಮಹಿಳೆಗೆ ಅಗೌರವ ಎಂದು ಎಫ್‌ಐಆರ್‌ನಲ್ಲಿ ಆರೋಪಿಸಿದ್ದಾರೆ.

# ಗಾಜಾ ಮೇಲೆ ವೈಮಾನಿಕ ದಾಳಿ; 200 ಮಂದಿ ಸಾವು

**ಜೇರುಸಲೇಂ (ಇಸ್ರೇಲ್) :** ಕದನ ವಿರಾಮ ಉಲ್ಲಂಘಿಸಿ ಇಸ್ರೇಲ್ ಮಂಗಳವಾರ ನಸುಕಿನಲ್ಲಿ ಹಮಾಸ್ ಗುರಿಯಾಗಿಸಿ ಗಾಜಾ ಪಟ್ಟಿ ಮೇಲೆ ವೈಮಾನಿಕ ದಾಳಿ ನಡೆಸಿದ್ದು, ಕನಿಷ್ಠ 200 ಮಂದಿ ಸಾವನ್ನಪ್ಪಿದ್ದಾರೆ ಎಂದು ಪ್ಯಾಲೇಸ್ತೇನಿಯನ್ ಅಧಿಕಾರಿಗಳು ತಿಳಿಸಿದ್ದಾರೆ.

ವೈದ್ಯಕೀಯ ಅಧಿಕಾರಿಗಳ ಪ್ರಕಾರ, ದಾಳಿಯಲ್ಲಿ 66 ಜನರು ಸಾವನ್ನಪ್ಪಿದ್ದು, 150ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಉತ್ತರ ಗಾಜಾ, ಧೀರ್ ಆಲ್ ಬಲಹಾ, ಖಾನ್ ಯೂನಿಸ್, ರಫಾ ಮತ್ತು ಗಾಜಾ ನಗರದ ಮೇಲೆ ದಾಳಿ ನಡೆಸಲಾಗಿದೆ. ಈ ದಾಳಿಯಲ್ಲಿ ಕನಿಷ್ಠ 200 ಜನರು ಸಾವನ್ನಪ್ಪಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವರು ಮಾಹಿತಿ ನೀಡಿದ್ದಾರೆ.

ದಾಳಿಯ ಕುರಿತು ಮಾತನಾಡಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಒತ್ತೆಯಾಳುಗಳ ಬಿಡುಗಡೆ ಸಂಬಂಧ ಹಮಾಸ್ ಪದೇ ಪದೇ ನಿರಾಕರಣೆ ಮಾಡುತ್ತಿದೆ. ಹಾಗೇ ಕದನ ವಿರಾಮ ವಿಸ್ತರಣೆ ಕುರಿತ ಮಾತುಕತೆಯಲ್ಲಿ ಉಂಟಾದ ಪ್ರಗತಿ ಕೊರತೆ ಹಿನ್ನೆಲೆ ದಾಳಿಗೆ ಆದೇಶ ನೀಡಲಾಯಿತು ಎಂದು ತಮ್ಮ ಸೇನೆಯ ಕಾರ್ಯಾಚರಣೆಯನ್ನು ಸಮರ್ಥಿಸಿಕೊಂಡಿದ್ದಾರೆ.

ಹಮಾಸ್ ಮೇಲೆ ದಾಳಿ ನಡೆಸುವ ಮೂಲಕ ಬೆದರಿಕೆ, ಒತ್ತಡ ಹಾಕುವ ತಂತ್ರವೋ ಅಥವಾ ಮತ್ತೆ ಯುದ್ಧ ಆರಂಭಿಸಲಿದೆಯಾ ಎಂಬ ಕುರಿತು ಇಸ್ರೇಲ್ ತಕ್ಷಣಕ್ಕೆ ಯಾವುದನ್ನು ಸ್ಪಷ್ಟಪಡಿಸಿಲ್ಲ. ಇಸ್ರೇಲ್ ಕದನ ವಿರಾಮ ಉಲ್ಲಂಘಿಸಿ ನಡೆಸಿರುವ ದಾಳಿಗೆ ಎಚ್ಚರಿಕೆ ನೀಡಿರುವ ಹಮಾಸ್, ಇದು ಒತ್ತೆಯಾಳುಗಳ ಭವಿಷ್ಯವನ್ನು ಅಪಾಯಕ್ಕೆ ಸಿಲುಕಿಸಲಿದೆ ಎಂದಿದೆ.

ಇದು ಅಂತ್ಯವಿಲ್ಲದ ಕಾರ್ಯಾಚರಣೆ ಆಗಿದ್ದು, ಇದನ್ನು ವಿಸ್ತರಿಸುವ ನಿರೀಕ್ಷೆ ಇದೆ. ಇಸ್ರೇಲ್ ಹಮಾಸ್ ವಿರುದ್ಧ ಮಿಲಿಟರಿ ಶಕ್ತಿಯನ್ನು ಮತ್ತಷ್ಟು ಬಲಗೊಳಿಸಲಿದೆ ಎಂದು ನೆತನ್ಯಾಹು ಕಚೇರಿ ತಿಳಿಸಿದೆ.

ದಾಳಿಗೆ ಮುನ್ನ ಶ್ವೇತ ಭವನ ಸಂಪರ್ಕ : ಇಸ್ರೇಲ್ ಗಾಜಾ ಮೇಲೆ ದಾಳಿಗೆ ಮುನ್ನ ಟ್ರಂಪ್ ಆಡಳಿತ ಮತ್ತು ಶ್ವೇತಭವನವನ್ನು ಸಂಪರ್ಕಿಸಿದೆ ಎಂದು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ತಿಳಿಸಿದ್ದಾರೆ.

ಕದನ ವಿರಾಮದ ಮುಂದಿನ ಹಂತದ ನಿಯಮಗಳ ಕುರಿತಾದ ಭಿನ್ನಾಭಿಪ್ರಾಯದಿಂದ ಕದನ ವಿರಾಮ ಮಾತುಕತೆ ವಿಫಲವಾದ ಹಿನ್ನೆಲೆ ಇಸ್ರೇಲ್ ದಾಳಿಗೆ ಮುಂದಾಗಿದೆ ಎಂದು ಸ್ಪಷ್ಟಪಡಿಸಿದೆ.

ಮೂರು ಹಂತದ ಕದನ ವಿರಾಮ ಒಪ್ಪಂದ : ಇಸ್ರೇಲ್ ಮತ್ತು ಹಮಾಸ್ ನಡುವೆ ಮೂರು ಹಂತದ ಕದನ ವಿರಾಮಕ್ಕೆ ಒಪ್ಪಿ ಯುದ್ಧ ಕೊನೆಗೊಳಿಸಲು ಒಪ್ಪಿದ್ದವು. ಮೊದಲ ಹಂತದಲ್ಲಿ 42 ದಿನದಲ್ಲಿ 33 ಒತ್ತೆಯಾಳುಗಳನ್ನು ಬಿಡುಗಡೆ ಮಾಡುವುದು ಹಾಗೂ ಗಾಜಾದಲ್ಲಿರುವ ಇಸ್ರೇಲ್ ಪಡೆಗಳನ್ನು ಹಿಂಪಡೆಯುವುದು ಸೇರಿತ್ತು. ಎರಡನೇ ಹಂತದಲ್ಲಿ ಒತ್ತೆಯಾಳುಗಳ ವಿನಿಮಯವಾಗಿ ಪ್ಯಾಲೆಸ್ತೇನಿಯ ಜೈಲಿನಲ್ಲಿರುವವರನ್ನು ಬಿಡುಗಡೆ ಮಾಡುವುದು. ಮೂರನೇ ಹಂತವು 42 ದಿನಗಳ ಬಳಿಕ ಯುದ್ಧ ಅಂತ್ಯಗೊಳಿಸುವ ಒಪ್ಪಂದ ಮಾಡಿಕೊಳ್ಳಲಾಗಿತ್ತು.

ಇಸ್ರೇಲ್ ಮೊದಲ ಹಂತದ ಕದನ ವಿರಾಮ ವಿಸ್ತರಣೆಗೆ ಒತ್ತಾಯಿಸಿದರೆ, ಹಮಾಸ್ ಮಾರ್ಚ್ 2 ರಂದು ಪ್ರಾರಂಭವಾಗಬೇಕಿದ್ದ ಎರಡನೇ ಹಂತಕ್ಕೆ ಮುಂದುವರಿಯಲು ಒತ್ತಾಯಿಸಿತು.

# ಆರ್‌ಎಸ್‌ಎಸ್ ಶಾಂತಿಯುತವಾಗಿ ದೇಶ ಕಟ್ಟುವ ಕೆಲಸ ಮಾಡ್ತಿದೆ

**ಬೆಂಗಳೂರು:** ಆರ್ ಎಸ್ ಎಸ್ ಶಾಂತಿಯುತವಾಗಿ ದೇಶ ಕಟ್ಟುವ ಕೆಲಸ ಮಾಡುತ್ತಿದೆ ಎಂದು ಅಖಿಲ ಭಾರತೀಯ ಪ್ರಚಾರ್ ಪ್ರಮುಖ್ ಸುನೀಲ್ ಅಂಬೇಕರ್ ಹೇಳಿದರು. ಬೆಂಗಳೂರಿನಲ್ಲಿ ಬುಧವಾರ ಅಖಿಲ ಭಾರತೀಯ ಪ್ರತಿನಿಧಿ ಸಭಾ ಸಂಬಂಧಿಸಿದಂತೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರಿಗೆ, ಸಿಎಂ ಸಿದ್ದರಾಮಯ್ಯ ಹೇಳಿಕೆ ಕುರಿತು ಪ್ರಶ್ನೆ ಕೇಳಲಾಯಿತು. ಆರ್ ಎಸ್ ಎಸ್ ಹಿಂಸೆಗೆ ಕಾರಣ ಎಂಬ ಸಿಎಂ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ನಾನು ಸಿದ್ದರಾಮಯ್ಯ ಅವರು ಹೇಳಿರುವ ವಿಡಿಯೋ ನೋಡಿಲ್ಲ. ಆದರೆ, ನಮ್ಮ ಸ್ವಯಂಸೇವಕ ಸಂಘ ಶಾಂತಿಯುತವಾಗಿ ದೇಶ ಕಟ್ಟುವ ಕೆಲಸ ಮಾಡುತ್ತಿದೆ. ಇದು ಮೊದಲ ದಿನದಿಂದಲೂ ಹೀಗೆಯೇ ನಡೆಯುತ್ತಿದೆ. ನಮ್ಮ ಕೆಲಸ ನಾವು ಮಾಡುತ್ತಿದ್ದೇವೆ ಎಂದರು.

ಮಾರ್ಚ್ 30 ರಂದು ಪ್ರಧಾನಿ ನರೇಂದ್ರ ಮೋದಿ ಆರ್‌ಎಸ್‌ಎಸ್ ಕೇಂದ್ರ ಕಚೇರಿಗೆ ಹೋಗುವ ವಿಚಾರವಾಗಿ ಪ್ರತಿಕ್ರಿಯಿಸಿ, ಈ ಹಿಂದೆ ಅಟಲ್ ಬಿಹಾರಿ ವಾಜಪೇಯಿ ಕೂಡ ಹೋಗಿದ್ದರು. ಅದಕ್ಕೇನು ಹೆಚ್ಚು ಮಹತ್ವ ಕೊಡಬೇಕಿಲ್ಲ ಎಂದರು. ಔರಂಗಜೇಬ್ ಈ ಕಾಲಘಟಕ್ಕೆ ಪ್ರಸ್ತುತವಾ ಎಂಬ ಪ್ರಶ್ನೆಗೆ ಉತ್ತರಿಸಿ, ಆತ ಇಂದಿಗೆ ಪ್ರಸ್ತುತವಲ್ಲ ಎಂದರು. ಯಾವುದೇ ರೀತಿಯ ಹಿಂಸೆಯನ್ನು ಪ್ರೋತ್ಸಾಹಿಸಲಾಗುವುದಿಲ್ಲ ಎಂದು ಅಂಬೇಕರ್ ಹೇಳಿದರು.

ರಾಷ್ಟ್ರೀಯ ಸ್ವಯಂಸೇವಕ ಸಂಘದಿಂದ ನಡೆಯಲಿರುವ ಅಖಿಲ ಭಾರತೀಯ ಪ್ರತಿನಿಧಿ ಸಭೆ ಮಾರ್ಚ್ 21 ರಿಂದ 23 ರ ವರೆಗೆ ಚನ್ನೇನಹಳ್ಳಿಯಲ್ಲಿ ನಡೆಯಲಿದೆ. ಆರ್ ಎಸ್ ಎಸ್ ನ ಅತ್ಯುನ್ನತ ನೀತಿ ನಿರ್ಧಾರಗಳನ್ನು ನಿರೂಪಿಸುವ ಕುರಿತು ನಡೆಯಲಿರುವ ಸಭೆ ಇದಾಗಿದೆ. ಸಭೆಯಲ್ಲಿ ಸಂಘಟನೆಯ ಚಟುವಟಿಕೆಗಳ ಕುರಿತು ವಿಮರ್ಶಾತ್ಮಕ ಚರ್ಚೆ, ಭವಿಷ್ಯದ ಕಾರ್ಯತಂತ್ರಗಳ ಬಗ್ಗೆ ಸುಧೀರ್ಘ ಚರ್ಚೆಯಾಗಲಿದೆ. ಸಭೆಯಲ್ಲಿ ಸರಸಂಘಚಾಲಕ ಡಾ. ಮೋಹನ್ ಭಾಗವತ್, ಸರಕಾರ್ಯವಾಹ ದತ್ತಾತ್ರೇಯ ಹೊಸಬಾಳೆ ಸೇರಿದಂತೆ ಇತರ ಹಿರಿಯ ಪದಾಧಿಕಾರಿಗಳು ಭಾಗಿಯಾಗಲಿದ್ದಾರೆ.

ಸಭೆಯಲ್ಲಿ ಭಾಗವಹಿಸಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಕೂಡ ಭಾಗವಹಿಸಲಿದ್ದಾರೆ. ಸಭೆಗೆ ಪೂರಕವಾಗಿ ಈಗಾಗಲೇ ಸಂಘದ ಅಖಿಲ ಭಾರತೀಯ ಕಾರ್ಯಕಾರಿಣಿಯ ಮಂಡಲ್ ಬೈಠಕ್‌ಗಳು ಶುರುವಾಗಿವೆ. ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಮಾರ್ಚ್ 23 ರ ವರೆಗೆ ನಡೆಯುವ ಎಲ್ಲ ಸಭೆಗಳಲ್ಲೂ ಹಾಜರಿರಲಿದ್ದಾರೆ.

ಮೂರು ದಿನ ಅಖಿಲ ಭಾರತೀಯ ಪ್ರತಿನಿಧಿ ಸಭೆ ನಡೆಯಲಿದೆ. ಸಂಘದ ಪ್ರತಿನಿಧಿಗಳು, ಪ್ರಮುಖರು ಸಭೆಯಲ್ಲಿ ಭಾಗಿಯಾಗಲಿದ್ದಾರೆ. ಈ ಬೈಠಕ್ ಪ್ರತಿ ವರ್ಷವೂ ನಡೆಯಲಿದೆ. ಸಂಘಟನೆಯ ಪ್ರಮುಖವಾದ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿವರ್ಷ ಬೈಠಕ್ ನಡೆಯುತ್ತದೆ. ಈ ವರ್ಷದ ವಿಜಯ ದಶಮಿ ದಿನದ ಸಂಘ 100 ವರ್ಷ ಪೂರೈಸಲಿದೆ. ಇದೀಗ ನಾಲ್ಕು ವರ್ಷಗಳ ಬಳಿಕ ಬೆಂಗಳೂರಲ್ಲಿ ಸಭೆ ನಡೆಯುತ್ತಿದೆ. ಸಂಘದ ರಚನೆಯಲ್ಲಿ ಮಹತ್ವಪೂರ್ಣ ಸಭೆ ಇದು. ಸಭೆಯಲ್ಲಿ 2024-25ರ ರಿಪೋ ದತ್ತಾತ್ರೇಯ ಹೊಸಬಾಳೆಯವರು ಮಂಡಿಸಲಿದ್ದಾರೆ. ಸಮಾಜದ ಎಲ್ಲರನ್ನೂ ತಲುಪಿಸುವ ಕೆಲಸ ನೂರು ವರ್ಷದ ಆಚರಣೆಯಲ್ಲಿ ಮುಖ್ಯವಾಗಿ ನಡೆಯಲಿದೆ. ಐದು ಪರಿವರ್ತನೆಯ ವಿಚಾರಗಳ ಮೇಲೆ ಚರ್ಚೆಯಾಗಲಿದೆ. ಎರಡು ನಿಲುವಳಿ ಕೂಡ ಕೈಗೊಳ್ಳಲಿದ್ದೇವೆ. ಮೊದಲನೆಯದು ಬಾಂಗ್ಲಾದೇಶದ ವಿಚಾರವಾಗಿ ಇರಲಿದೆ. ಮತ್ತೊಂದು, ಸಂಘದ ನೂರು ವರ್ಷಗಳ ಬಗ್ಗೆ ಹಾಗೂ ಮುಂದಿನ ಕಾರ್ಯದ ಬಗ್ಗೆ ಇರಲಿದೆ ಎಂದು ಅಂಬೇಕರ್ ತಿಳಿಸಿದರು.

## ಮಹಿಳೆಯ ಮೃತದೇಹ ಪತ್ತೆ

**ಬೆಂಗಳೂರು :** ಸುಟ್ಟ ಸ್ಥಿತಿಯಲ್ಲಿ ಮಹಿಳೆಯೊಬ್ಬರ ಮೃತದೇಹ ಪತ್ತೆಯಾದ ಘಟನೆ ಯಶವಂತಪುರ ರೈಲ್ವೇ ನಿಲ್ದಾಣದ ಸಮೀಪ ನಡೆದಿದೆ. ನಿಲ್ದಾಣದ ಪ್ಲಾಟ್‌ಫಾರ್ಮ್ 1ರ ಬಳಿಯ ಕಾಂಪೌಂಡ್ ಪಕ್ಕದಲ್ಲಿ ಸುಮಾರು 35 ವರ್ಷ ವಯಸ್ಸಿನ ಮಹಿಳೆಯ ಶವ ಪತ್ತೆಯಾಗಿದೆ. ಮಹಿಳೆಯ ಮುಖಕ್ಕೆ ಪ್ಲಾಸ್ಟಿಕ್ ಕವರ್ ಸುತ್ತಿ ಹತ್ಯೆಗೈದು, ಬಳಿಕ ಬೆಂಕಿ ಇಟ್ಟಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಬೆಳಗ್ಗೆ ಮೃತದೇಹವನ್ನು ಗಮನಿಸಿದ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳಕ್ಕೆ ರೈಲ್ವೇ ಪೊಲೀಸರು ಭೇಟಿ ನೀಡಿ ಪರಿಶೀಲನೆ ಕೈಗೊಂಡಿದ್ದಾರೆ.

ಬುಧವಾರ ಬೆಳಗ್ಗೆ 9.30ರ ಸುಮಾರಿಗೆ ಮಾಹಿತಿ ಬಂದಿದ್ದು, 1ನೇ ಪ್ಲಾಟ್‌ಫಾರ್ಮ್‌ನ ಕೊನೆಯಲ್ಲಿ ಮೃತದೇಹ ಪತ್ತೆಯಾಗಿದೆ. ಪ್ರಾಥಮಿಕ ತನಿಖೆಯಲ್ಲಿ ಬೇರೆಡೆಯಿಂದ ಮೃತದೇಹ ತಂದಿರುವ ಕುರುಹುಗಳಿಲ್ಲ. ಸ್ಥಳದಲ್ಲಿಯೇ ಹತ್ಯೆಗೈದು, ಮೃತದೇಹಕ್ಕೆ ಬೆಂಕಿಯಿಟ್ಟಿರುವ ಶಂಕೆಯಿದೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿದೆ ಎಂದು ರಾಜ್ಯ ರೈಲ್ವೇ ಎಸ್‌ಪಿ ಡಾ. ಸೌಮ್ಯಲತಾ ಎಸ್.ಕೆ. ಮಾಹಿತಿ ನೀಡಿದ್ದಾರೆ.

## ಯೋಧ ಆತ್ಮಹತ್ಯೆ

ದಾವಣಗೆರೆ: ಛತ್ತೀಸ್‌ಗಢದಲ್ಲಿ ಸೇವೆ ಸಲ್ಲಿಸುತ್ತಿದ್ದ ದಾವಣಗೆರೆಯ ಸಿಆರ್‌ಪಿಎಫ್ ಯೋಧನೋರ್ವ ಆಂಧ್ರ ಪ್ರದೇಶದ ವಿಜಯವಾಡದಲ್ಲಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಸೋಮವಾರ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ದಾವಣಗೆರೆ ತಾಲೂಕಿನ ಕೈದಾಳೆ ಗ್ರಾಮದ ನಿವಾಸಿ ಉಮೇಶ್ (34) ಆತ್ಮಹತ್ಯೆ ಮಾಡಿಕೊಂಡವರು. ಸಾಲಬಾಧೆ ಹಾಗೂ ಜೀವನದಲ್ಲಿ ಜುಗುಪ್ಸೆ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ.
ಕೈದಾಳೆ ಗ್ರಾಮದಿಂದ ಛತ್ತೀಸ್‌ಗಢಕ್ಕೆ ತೆರಳುವ ಮಾರ್ಗಮಧ್ಯೆ ಸೋಮವಾರ ಮುಂಜಾನೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



**ಬೆಂಗಳೂರಿನ ಗಾಂಧಿನಗರದಲ್ಲಿರುವ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಕೇಂದ್ರಿಯ ವಿಶ್ವವಿದ್ಯಾಲಯ ಆವರಣದಲ್ಲಿ ಕುವೆಂಪು ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ 2024-25ನೇ ಸಾಲಿನ ಹಣಕಾಸು ವರ್ಷದ ದ್ವಿತೀಯ ಹಾಗೂ ತೃತೀಯ ಹಣಕಾಸು ಸಮಿತಿಯ ಸಭೆಯಲ್ಲಿ ಮಾನ್ಯ ವಿಧಾನ ಪರಿಷತ್ ಶಾಸಕರು, ಕುವೆಂಪು ವಿಶ್ವವಿದ್ಯಾಲಯದ ಶೈಕ್ಷಣಿಕ ಮಂಡಳಿಯ ಸದಸ್ಯರು ಹಾಗೂ ರಾಜ್ಯ ಬಿಜೆಪಿ ಕಾರ್ಯದರ್ಶಿಗಳಾದ ಡಿ.ಎಸ್.ಅರುಣ್ ರವರು ಭಾಗವಹಿಸಿ ವಿಶ್ವವಿದ್ಯಾಲಯದ ಏಳಿಗೆಯ ಬಗ್ಗೆ ಚರ್ಚಿಸಿ, ಅಗತ್ಯವಿರುವ ಸಲಹೆ ನೀಡಿದರು. ಸಭೆಯಲ್ಲಿ ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಶ್ರೀಮತಿ ಉಮಾರವರು,ಕುವೆಂಪು ವಿಶ್ವವಿದ್ಯಾಲಯದ ಕುಲಸಚಿವರಾದ ಮಂಜುನಾಥ್ ರವರು, ಮೌಲ್ಯಮಾಪನ ವಿಭಾಗದ ಕುಲ ಸಚಿವರಾದ ಗೋಪಿನಾಥ್ ರವರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.**

## ವೃದ್ಧಾಪ್ಯದಲ್ಲಿ ನೋಡಿಕೊಳ್ಳದಿದ್ದರೆ ಮಕ್ಕಳಿಗೆ ನೀಡಿದ ಆಸ್ತಿ ವಾಪಸ್ ಪಡೆಯಬಹುದು

**ಚೆನ್ನೈ(ತಮಿಳುನಾಡು):** ತಮ್ಮ ಮಕ್ಕಳು ಅಥವಾ ಹತ್ತಿರದ ಸಂಬಂಧಿಕರು ತಮ್ಮನ್ನು ನೋಡಿಕೊಳ್ಳಲು ವಿಫಲವಾದರೆ ಅಂಥವರ ಹೆಸರಿಗೆ ಬರೆಯಲಾದ ಗಿಫ್ಟ್ ಡೀಡ್ ಅಥವಾ ಸೆಟ್ಲ್‌ಮೆಂಟ್ ಡೀಡ್‌ಗಳನ್ನು ಹಿರಿಯ ನಾಗರಿಕರು ರದ್ದು ಮಾಡಬಹುದು ಎಂದು ಮದ್ರಾಸ್ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಡೀಡ್‌ನಲ್ಲಿ ಇಂಥ ಷರತ್ತನ್ನು ಹಾಕಿಲ್ಲವಾದರೂ ಅದನ್ನು ರದ್ದುಗೊಳಿಸಬಹುದು ಎಂದು ಕೋರ್ಟ್ ಹೇಳಿದೆ.

ಮೃತ ಎಸ್.ನಾಗಲಕ್ಷ್ಮಿ ಅವರ ಸೊಸೆ ಎಸ್.ಮಾಲಾ ಎಂಬವರು ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿದ ನ್ಯಾಯಮೂರ್ತಿಗಳಾದ ಎಸ್.ಎಂ.ಸುಬ್ರಮಣ್ಯಂ ಮತ್ತು ಕೆ.ರಾಜಶೇಖರ್ ಅವರಿದ್ದ ವಿಭಾಗೀಯ ಪೀಠ ಮೇಲಿನಂತೆ ತೀರ್ಪು ನೀಡಿತು.

ಪ್ರಕರಣವೇನು?: ನಾಗಲಕ್ಷ್ಮಿ ತನ್ನ ಮಗ ಕೇಶವನ್ ಅವರ ಹೆಸರಿಗೆ ತನ್ನ ಆಸ್ತಿಯನ್ನು ಸೆಟ್ಲ್‌ಮೆಂಟ್ ಡೀಡ್ ಮಾಡಿ ಕೊಟ್ಟಿದ್ದರು. ತಾನು ಬದುಕಿರುವವರೆಗೆ ಮಗ ಮತ್ತು ಸೊಸೆ ತನ್ನನ್ನು ಚೆನ್ನಾಗಿ ನೋಡಿಕೊಳ್ಳುತ್ತಾರೆ ಎಂಬ ಭರವಸೆ ಹಾಗೂ ಅವರ ಮೇಲಿನ ಪ್ರೀತಿಯಿಂದ ಅವರು ಡೀಡ್ ಮಾಡಿಸಿದ್ದರು. ಆದರೆ ಮಗ ಅವರನ್ನು ಸರಿಯಾಗಿ ನೋಡಿಕೊಳ್ಳಲಿಲ್ಲ. ಅಲ್ಲದೆ ಮಗ ಸತ್ತ ಮೇಲೆ ಸೊಸೆಯೂ ಅವರನ್ನು ಆರೈಕೆ ಮಾಡಲಿಲ್ಲ. ಹೀಗಾಗಿ ಅವರು ನಾಗಪಟ್ಟಿಣಂನ ಆರ್‌ಡಿಒ (ರೆವಿನ್ಯೂ ಡಿವಿಜನ್ ಆಫೀಸರ್) ಅವರನ್ನು ಸಂಪರ್ಕಿಸಿದರು.

ಪ್ರೀತಿ ಮತ್ತು ವಾತ್ಸಲ್ಯದಿಂದ ಮತ್ತು ತನ್ನ ಮಗನ ಭವಿಷ್ಯಕ್ಕಾಗಿ ಡೀಡ್ ಮಾಡಿಸಿದ್ದೆ ಎಂಬ ಆಕೆಯ ಹೇಳಿಕೆಯನ್ನು ದಾಖಲಿಸಿದ ನಂತರ ಮತ್ತು ಮಾಲಾ ಅವರ ಹೇಳಿಕೆಗಳನ್ನು ಪರಿಗಣಿಸಿದ ನಂತರ, ಆರ್‌ಡಿಒ ಸೆಟ್ಲ್‌ಮೆಂಟ್ ಡೀಡ್ ರದ್ದುಗೊಳಿಸಿದರು. ಇದನ್ನು ಪ್ರಶ್ನಿಸಿ ಮಾಲಾ ಸಲ್ಲಿಸಿದ್ದ ಅರ್ಜಿ ವಜಾಗೊಂಡಿತ್ತು. ಹೀಗಾಗಿ ಅವರು ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು.

ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ, 2007ರ ಸೆಕ್ಷನ್ 23 (1) ಅನ್ನು ಹಿರಿಯ ನಾಗರಿಕರು ತಮ್ಮ ಆಸ್ತಿಯನ್ನು ಗಿಫ್ಟ್ ಡೀಡ್ ಅಥವಾ ಸೆಟ್ಲ್‌ಮೆಂಟ್ ಡೀಡ್ ಮೂಲಕ ವರ್ಗಾಯಿಸುವ ಸಂದರ್ಭಗಳಲ್ಲಿ ಅವರನ್ನು ರಕ್ಷಿಸಲು ವಿನ್ಯಾಸಗೊಳಿಸಲಾಗಿದೆ ಎಂದು ನ್ಯಾಯಪೀಠ ಹೇಳಿದೆ. ತಮ್ಮ ಹೆಸರಿಗೆ ಆಸ್ತಿ ಬರೆಸಿಕೊಂಡಿರುವವರು ತಮ್ಮ ಜವಾಬ್ದಾರಿಗಳನ್ನು ನಿಭಾಯಿಸಲು ವಿಫಲವಾದರೆ, ಹಿರಿಯ ನಾಗರಿಕರು ಡೀಡ್ ಅನ್ನು ರದ್ದುಗೊಳಿಸುವಂತೆ ಟ್ರಿಬ್ಯೂನಲ್‌ಗೆ ಕೋರುವ ಅಧಿಕಾರ ಹೊಂದಿರುತ್ತಾರೆ ಎಂದು ನ್ಯಾಯಪೀಠ ಹೇಳಿದೆ.

ಹಿರಿಯ ನಾಗರಿಕರಿಂದ, ವಿಶೇಷವಾಗಿ ಮಕ್ಕಳು ಅಥವಾ ಹತ್ತಿರದ ಸಂಬಂಧಿಕರಿಗೆ ಹೆಚ್ಚಾಗಿ ಪ್ರೀತಿ ಮತ್ತು ವಾತ್ಸಲ್ಯದ ಕಾರಣಗಳಿಂದ ಆಸ್ತಿಗಳನ್ನು ಬರೆದು ಕೊಡಲಾಗಿರುತ್ತದೆ ಎಂದು ಕಾಯ್ದೆಯಲ್ಲಿ ಉಲ್ಲೇಖವಾಗಿದೆ. ಹಾಗಾಗಿ ಆಸ್ತಿ ವರ್ಗಾವಣೆಯು ಕೇವಲ ಕಾನೂನು ಪ್ರಕ್ರಿಯೆ ಆಗಿರದೆ ಅದು ವೃದ್ಧಾಪ್ಯದಲ್ಲಿ ಅವರನ್ನು ಆರೈಕೆ ಮಾಡುವ ಭರವಸೆಯೊಂದಿಗೆ ಮಾಡಿದ ನಿರ್ಧಾರವಾಗಿರುತ್ತದೆ. ಆಸ್ತಿ ವರ್ಗಾವಣೆ ಪತ್ರದಲ್ಲಿ ಇದನ್ನು ಉಲ್ಲೇಖಿಸಿಲ್ಲವಾದರೂ ಸ್ವತಃ ಇಂಥ ವರ್ಗಾವಣೆಯೇ ಆ ಜವಾಬ್ದಾರಿಯನ್ನು ಸೂಚಿಸುತ್ತದೆ. ಆಸ್ತಿ ಬರೆಸಿಕೊಂಡಿರುವವರು ಭರವಸೆ ನೀಡಿದಂತೆ ಆರೈಕೆ ಮಾಡದಿದ್ದರೆ ಹಿರಿಯ ನಾಗರಿಕರು ವರ್ಗಾವಣೆಯನ್ನು ರದ್ದುಗೊಳಿಸಲು ಸೆಕ್ಷನ್ 23 (1) ಅನ್ನು ಬಳಸಬಹುದು ಎಂದು ನ್ಯಾಯಪೀಠ ಹೇಳಿದೆ.

ಮೊದಲ ಪುಟದಿಂದ

## ಭೂಮಿಗೆ ಮರಳಿದ ಸುನೀತಾ

ಎದ್ದು ನಿಲ್ಲಲೂ ಆಗದ ಸುನಿತಾ ಕುಳಿತಲ್ಲೇ ನಗುಮೊಗದೊಂದಿಗೆ ಕೈಬೀಸಿ ಸಂಭ್ರಮ ವ್ಯಕ್ತಪಡಿಸಿದರು.

ಕ್ಯಾಪ್ಸುಲ್ ಸಮುದ್ರದಲ್ಲಿ ಬಿದ್ದು ತೇಲುತ್ತಿದ್ದಂತೆಯೇ ಕೆಲವೇ ಕ್ಷಣಗಳಲ್ಲಿ ಮೂರು ಬೋಟ್‌ಗಳಲ್ಲಿ ಅಮೆರಿಕ ನೌಕಾಪಡೆ ಸ್ಥಳಕ್ಕೆ ಧಾವಿಸಿತು. ತಕ್ಷಣ ಸಿದ್ಧವಾಗಿ ನಿಂತಿದ್ದ ಸ್ಪೇಸ್ ಎಕ್ಸ್‌ನ ರಿಕವರಿ ಶಿಪ್ ಕೂಡ ಸ್ಥಳಕ್ಕೆ ಧಾವಿಸಿತು. ನೌಕಾಪಡೆ ಸಿಬ್ಬಂದಿ ಮೊದಲಿಗೆ ಗಗನಯಾತ್ರಿಗಳಿದ್ದ ಕ್ಯಾನ್ಸುಲ್ ನಿಯಂತ್ರಣಕ್ಕೆ ರೋಪ್ ಗಳಿಂದ ಕಟ್ಟಿ ಹಡಗಿನ ಬಳಿಗೆ ಎಳೆದೊಯ್ದರು. ಬಳಿಕ ಅತ್ಯಂತ ನಾಜೂಕಾಗಿ ಕ್ಯಾನ್ಸುಲ್ ಅನ್ನು ಹಡಗಿಗೆ ಸ್ಥಳಾಂತರ ಮಾಡಿದರು. ಇದಾದ ಕೆಲವೇ ಹೊತ್ತಿನಲ್ಲಿ ನಟ್ಟು, ಬೋಲ್ಟ್‌ಳಿಂದ ಟೈಟಾಗಿದ್ದ ಕ್ಯಾಪ್ಸು ಲ್‌ನ ಡೋರ್ ಅನ್ನು ತೆಗೆಯಲಾಯಿತು.

**45 ದಿನಗಳ ರಿಹ್ಯಾಬಿಲಿಟೇಶನ್ ಚಿಕಿತ್ಸೆ:** ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಕ್ಷೇಮವಾಗಿ ಹಿಂತಿರುಗಿರುವ ಗಗನಯಾತ್ರಿಗಳಿಗೆ ನಾಸಾ 45 ದಿನಗಳ ರಿಹ್ಯಾಬಿಲಿಟೇಶನ್ ಯೋಜನೆ ರೂಪಿಸಿದೆ. ಗಗನ ಯಾತ್ರಿಗಳು ಭೂಮಿಯ ಗುರುತ್ವಾಕರ್ಷಣೆಗೆ ಒಗ್ಗಿಕೊಳ್ಳಲು ಅವಕಾಶ ನೀಡಬೇಕಿರುವುದರಿಂದ ಅವರಿಗೆ 45 ದಿನಗಳಲ್ಲಿ ದೇಹದ ಚಟುವಟಿಕೆ ಮತ್ತು ಆರೋಗ್ಯ ಪರೀಕ್ಷೆಗಳನ್ನು ಮಾಡಲಾಗುತ್ತದೆ.

ನೆಲದ ಮೇಲೆ ನಡೆಯಲು ಸಹಾಯ, ಆಹಾರ, ಅಗತ್ಯ ಔಷಧಗಳನ್ನು ಒದಗಿಸುವುದು, ಕಾಲುಗಳನ್ನು ಬಲಪಡಿಸುವ ವ್ಯಾಯಾಮ, ಕಾಲುಗಳು ತಮ್ಮ ನಿಯಂತ್ರಣಕ್ಕೆ ಬರುವವರೆಗೂ ಮೇಲ್ವಿಚಾರಣೆ ನಡೆಯಲಿದೆ.

ಶೂನ್ಯ ಗುರುತ್ವಾಕರ್ಷಣೆ ಮತ್ತು ಹೆಚ್ಚಿನ ವಿಕಿರಣದಲ್ಲಿ ದೀರ್ಘಕಾಲ ಬಾಹ್ಯಾಕಾಶದಲ್ಲಿ ಕಾಲ ಕಳೆದಿದ್ದರಿಂದ ಮೂಳೆಗಳ ದೌರ್ಬಲ್ಯ, ದೃಷ್ಟಿಯ ಮೇಲೆ ಪರಿಣಾಮ ಉಂಟಾಗಬಹುದು. ವಿಕಿರಣವು ಕ್ಯಾನ್ಸರ್ ಮತ್ತು ನರಮಂಡಲದ ಸಮಸ್ಯೆಗಳನ್ನು ಉಂಟುಮಾಡಬಹುದು. ಅಲ್ಲದೆ ರೋಗನಿರೋಧಕ ಶಕ್ತಿ ಕಡಿಮೆಯಾಗಬಹುದು.

## ಕುರಿ/ಮೇಕೆ ವಧಾಗಾರ ಉದ್ಘಾಟನೆ

ರಾಜ್ಯದಲ್ಲಿಯೇ ಮೊದಲ ವಧಾಗಾರ : ಶಿರಾ ತಾಲೂಕಿನಲ್ಲಿ ರಾಜ್ಯದಲ್ಲಿಯೇ ಅತಿ ಹೆಚ್ಚು ಅಂದರೆ 4,78,500 ಕುರಿ ಹಾಗೂ ವಿಜಯಪುರದ ಇಂಡಿ ತಾಲೂಕಿನಲ್ಲಿ 1,61,129 ಮೇಕೆಗಳಿವೆ. ವಧಾಗಾರ ಕಾರ್ಯಾರಂಭಗೊಂಡ ಬಳಿಕ ಪ್ರತಿದಿನ 1,500 ಕುರಿ ಅಥವಾ ಮೇಕೆಗಳನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ರಫ್ತು ಮಾಡಬಹುದು. ಇದರಿಂದ 150 ರಿಂದ 200 ಮಂದಿಗೆ ಉದ್ಯೋಗಾವಕಾಶ ದೊರೆಯಲಿದೆ. ರಾಜ್ಯದಲ್ಲಿ ಮೊದಲ ಬಾರಿಗೆ ಈ ವಧಾಗಾರ ಆರಂಭಿಸಲಾಗುತ್ತಿದೆ. ಇದರ ಸಾಧಕ-ಬಾಧಕ ಅರಿತು ಹೆಚ್ಚಿನ ಸಂಖ್ಯೆಯಲ್ಲಿ ವಧಾಗಾರ ಘಟಕ ನಿರ್ಮಾಣದ ಬಗ್ಗೆ ಚಿಂತಿಸಲಾಗುವುದು ಎಂದು ಅವರು ತಿಳಿಸಿದರು.

ಶಿರಾ ತಾಲೂಕಿನಲ್ಲಿ ಹೆಚ್ಚು ಕುರಿಗಾಯಿಗಳಿದ್ದರೂ ಇದುವರೆಗೂ 132 ಮಂದಿಗೆ ಮಾತ್ರ ಸಾಲ ಸೌಲಭ್ಯ ಕಲ್ಪಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಕುರಿ ಸಾಗಾಣಿಕೆದಾರರಿಗೆ ಸಾಲ ನೀಡಿದರೆ ಅನುಕೂಲವಾಗಲಿದೆ ಎಂದು ಚಿದಾನಂದ್ ಅವರು ಪ್ರಶ್ನಿಸಿದರು.

ಸಾಲ ನೀಡಲು ಅಧಿಕಾರಿಗಳಿಗೆ ಸೂಚನೆ : ಇದಕ್ಕೆ ಉತ್ತರಿಸಿದ ಸಚಿವರು, ಶಿರಾ ಭಾಗದ ಕುರಿಗಾಹಿಗಳಿಗೆ ವಿಶೇಷ ಆದ್ಯತೆ ಮೇರೆಗೆ ಹೆಚ್ಚಿನ ಸಾಲ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುವುದು. ಅದೇ ರೀತಿ ಒಟ್ಟಾರೆ ಕೃಷಿ ವಲಯದಲ್ಲಿ ಕುರಿ ಸಾಗಾಣಿಕೆ ಮಾಡಿದರೆ ಹೆಚ್ಚು ಲಾಭದಾಯಕವಾಗಲಿದೆ. ವಧಾಗಾರ ನಿರ್ಮಾಣದಿಂದ ವೈಜ್ಞಾನಿಕ ಹಾಗೂ ಗುಣಮಟ್ಟದ ಮಾಂಸ ರಫ್ತು ಮಾರುಕಟ್ಟೆ ವಿಸ್ತರಣೆಗೆ ನೆರವಾಗಲಿದೆ ಎಂದು ಹೇಳಿದರು.

ಕುರಿ ಸಾಕಾಣಿಕೆದಾರರ ಮೇಲೆ ಹಲ್ಲೆ, ಆತ್ಯಾಚಾರ ನಡೆದರೆ ಕ್ರಮ ಕೈಗೊಳ್ಳಲು ಸೂಕ್ತ ಕಾನೂನು ಮಾಡುವ ಪ್ರಕ್ರಿಯೆಯು ಸರ್ಕಾರದ ಹಂತದಲ್ಲಿದೆ. ಮುಂದಿನ ದಿನಗಳಲ್ಲಿ ಕಾನೂನು ಜಾರಿಗೆ ತರಲಾಗುವುದು ಎಂದು ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

## ರಾಜ್ಯದ ಸಮಗ್ರ ಅಭಿವೃದ್ಧಿ ಹೇಗೆ?

ಇದರಿಂದ ಕೆಲವೇ ಕೆಲ ಜಿಲ್ಲೆಗಳಲ್ಲಿ ಅಭಿವೃದ್ಧಿ ಆಗುತ್ತೆ. ಸಿಎಂ, ಸಚಿವರು ತಮ್ಮ ತಮ್ಮ ಕ್ಷೇತ್ರವನ್ನ ನೋಡುತ್ತಾ ಹೋದರೇ ಇಡೀ ರಾಜ್ಯದ ಸಮಗ್ರ ಅಭಿವೃದ್ಧಿ ಹೇಗೆ? ಸಿಎಂ ಸಚಿವರು ರಾಜ್ಯದ ಸಮಗ್ರ ಅಭಿವೃದ್ಧಿಗೆ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

## ಬಿಜೆಪಿಯಿಂದ ಹೋರಾಟ

ಓಲೈಕೆ ರಾಜಕೀಯಕ್ಕೆ ಹೊರಟಿದ್ದಾರೆ. ಸಿದ್ದರಾಮಯ್ಯ, ಸರಕಾರಕ್ಕೆ ನಿಜವಾಗಿ ಅಲ್ಪಸಂಖ್ಯಾತರ ಬಗ್ಗೆ ಕಳಕಳಿ ಇದೆಯೇ ಎಂದು ಕೇಳಿದರು. ಸ್ವಾತಂತ್ರ್ಯ ಬಂದ ಬಳಿಕ ಸುಮಾರು 50-55 ವರ್ಷ ಸುದೀರ್ಘವಾಗಿ ಈ ದೇಶದಲ್ಲಿ, ರಾಜ್ಯದಲ್ಲಿ ಆಡಳಿತ ನಡೆಸಿದ್ದೀರಿ; ಅಲ್ಪಸಂಖ್ಯಾತರಿಗೆ ಶಿಕ್ಷಣಕ್ಕೆ ಒತ್ತು ಕೊಟ್ಟು ಅವರನ್ನು ಮುಂಚೂಣಿಯಲ್ಲಿ ತರುವ ಕೆಲಸವನ್ನು ಕಾಂಗ್ರೆಸ್ಸಿನವರು ಯಾಕೆ ಮಾಡಿಲ್ಲ ಎಂದು ಕೇಳಿದರು.

ಅಲ್ಪಸಂಖ್ಯಾತರಿಗೆ ಉತ್ತಮ ಶಿಕ್ಷಣ ನೀಡಿ ಅವರನ್ನು ಮುಂದಕ್ಕೆ ತರುವ ಇಚ್ಛಾಶಕ್ತಿ ಕಾಂಗ್ರೆಸ್ಸಿನವರಿಗೆ ಇರಲಿಲ್ಲ ಎಂದು ಟೀಕಿಸಿದರು. ಬಿಜೆಪಿ ಅಲ್ಪಸಂಖ್ಯಾತರ ವಿರೋಧಿ ಎಂದು ಸಿದ್ದರಾಮಯ್ಯನವರು ಬಿಂಬಿಸಲು ಹೊರಟಿದ್ದಾರೆ. ಬಿಜೆಪಿ ಮುಸಲ್ಮಾನರ ವಿರೋಧಿಗಳಲ್ಲ. ಇಡೀ ದೇಶದಲ್ಲಿ ಅಲ್ಪಸಂಖ್ಯಾತ ಮಹಿಳೆಯರಿಗೆ ನ್ಯಾಯ ನೀಡಲು ತ್ರಿವಳಿ ತಲಾಖ್ ಅನ್ನು ಕಿತ್ತು ಹಾಕಿದ್ದು, ಬಿಜೆಪಿಯ ನರೇಂದ್ರ ಮೋದಿಜೀ ಅವರ ಸರಕಾರ ಎಂದು ವಿವರಿಸಿದರು.

ಕೇಂದ್ರ ಸರಕಾರದ ನರೇಂದ್ರ ಮೋದಿಜೀ ಅವರ ಸರಕಾರ ನೀಡಿದ ಕಾರ್ಯಕ್ರಮಗಳು, ಜ□□□ಧನ್ ಖಾತೆ, ಉಜ್ವಲ ಸೇರಿ ಅನೇಕ ಯೋಜನೆಗಳನ್ನು ಕೊಟ್ಟಿದ್ದು, ಅವನ್ನು ಕೇವಲ ಹಿಂದೂಗಳಿಗೆ ಕೊಟ್ಟಿಲ್ಲ. ಯಡಿಯೂರಪ್ಪ ಅವರ ಭಾಗ್ಯಲಕ್ಷ್ಮಿ ಯೋಜನೆ ಕೇವಲ ಹಿಂದೂಗಳಿಗೆ ಕೊಟ್ಟಿಲ್ಲ ಎಂದು ಗಮನ ಸೆಳೆದರು.

ಈ ದೇಶದ ಪ್ರತಿಯೊಬ್ಬರಿಗೂ ಕೇಂದ್ರದ ಮೋದಿಜೀ ಅವರ ಸರಕಾರ ಕಾರ್ಯಕ್ರಮಗಳನ್ನು ನೀಡಿದೆ. ಬಿಜೆಪಿ, ಕಾಂಗ್ರೆಸ್ಸಿನವರ ಮಾದರಿಯಲ್ಲಿ ಮುಸಲ್ಮಾನರನ್ನು ಮತಬ್ಯಾಂಕಿಗೆ ಸೀಮಿತ ಮಾಡಿಲ್ಲ; ಮುಖ್ಯಮಂತ್ರಿಗಳೇ ನಿಮ್ಮ ತುಘಲಕ್ ದರ್ಬಾರಿಗೆ ಇತಿಮಿತಿ ಇದೆ. ಮುಸಲ್ಮಾನರಿಗೆ ಸರಕಾರಿ ಕಾಮಗಾರಿಗಳಲ್ಲಿ ಶೇ 4 ಮೀಸಲಾತಿಯನ್ನು ನಾವು ಸ್ಪಷ್ಟವಾಗಿ ವಿರೋಧ ಮಾಡುತ್ತೇವೆ ಎಂದು ಎಚ್ಚರಿಸಿದರು.

ಸದನದ ಒಳಗೆ ಮತ್ತು ಹೊರಗಡೆ 'ಹೋರಾಟದ ರೂಪುರೇಷೆ ಸಂಬಂಧ ಮುಖಂಡರು ಕುಳಿತು ಚರ್ಚೆ ಮಾಡುತ್ತೇವೆ. ಬಳಿಕ ತೀರ್ಮಾನ ಮಾಡುತ್ತೇವೆ ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು.

## ತಪ್ಪಿದ ಅನಾಹುತ

ಔರಾದ್ ತಾಲೂಕಿನ ಕಪ್ಪಿಕೆರೆ ಗ್ರಾಮದ ಕ್ರಾಸ್ ಬಳಿ ಬರುತ್ತಿದ್ದಂತೆ ಏಕಾಏಕಿ ಬಸ್‌ನ ಎಂಜಿನ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಇದನ್ನು ಗಮನಿಸಿದ ಚಾಲಕ ಹಾಗೂ ನಿರ್ವಾಹಕರು ಬಸ್ ನಿಲ್ಲಿಸಿ, ಎಲ್ಲಾ ಪ್ರಯಾಣಿಕರನ್ನೂ ವಾಹನದಿಂದ ಕೆಳಗಿಳಿಸಿದ್ದಾರೆ. ಬಳಿಕ ಸಂಪೂರ್ಣ ಬಸ್ ಬೆಂಕಿಗೆ ಆಹುತಿಯಾಗಿದೆ.
ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸಂತಪೂರ ಠಾಣೆ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ಕೈಗೊಂಡಿದ್ದಾರೆ. ಬಸ್‌ನಲ್ಲಿ ಇದ್ದವರಿಗೆ ಯಾವುದೇ ತೊಂದರೆ ಆಗಿಲ್ಲ.

## ಸವಾರನ ಹೃದಯ!

ಪ್ರದೇಶ ನಿವಾಸಿ ಸುರೇಶ್(35) ಮೃತಪಟ್ಟಿದ್ದಾರೆ. ಹಿಂಬದಿ ಕುಳಿತಿದ್ದ ಇವರ ಮಗ ಬಾಲಕ ಶುಭಂ ಅವರ ಕಾಲು ಮುರಿದಿದೆ.
ರಸ್ತೆಯಲ್ಲಿ ಬಡಿದುಕೊಳ್ಳುತ್ತಿದ್ದ ಹೃದಯ!: ಸುರೇಶ್ ಗ್ರಾನೈಟ್ ಕೆಲಸ ಮಾಡುತ್ತಿದ್ದರು. ರಾಯಚೂರಿಗೆ ಗ್ರಾನೈಟ್ ಕೆಲಸಕ್ಕಾಗಿ ಬಂದಿದ್ದರು. ರಾತ್ರಿ ಬೈಕ್‌ನಲ್ಲಿ ಸ್ಟೇಷನ್ ರಸ್ತೆ ಮೂಲಕ ತೆರಳುವಾಗ ಚಾಲಕನ ನಿಯಂತ್ರಣ ತಪ್ಪಿದ ಲಾರಿ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಸುರೇಶ್ ಅವರ ಹೃದಯ ಹೊರಬಂದು ರಸ್ತೆಯಲ್ಲಿ ಬಡಿದುಕೊಳ್ಳುತ್ತಿತ್ತು. ದೇಹದ ಅಂಗಾಂಗಗಳು ಛಿದ್ರವಾಗಿ ಬಿದ್ದಿದ್ದವು.
ರಾಯಚೂರು ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಮೃತದೇಹವನ್ನು ರಿಮ್ಸ್ ಆಸ್ಪತ್ರೆಯ ಶವಾಗಾರಕ್ಕೆ ಸಾಗಿಸಿದ್ದಾರೆ. ಗಾಯಾಳು ಬಾಲಕನನ್ನು ರಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

## ಸೇರಿ ಐವರು ಸಸ್ಪೆಂಡ್

ನಾಗಭೂಷಣ ಅಮಾನತುಗೊಂಡವರು. ಈ ಐವರಿಗೂ ಎಸ್ಪಿ ಶ್ರೀನಿವಾಸಲು ಕಾರಣ ಕೇಳಿ ನೋಟಿಸ್ ಸಹ ಜಾರಿಗೊಳಿಸಿದ್ದಾರೆ.
ಈ ಮಧ್ಯೆ, ಠಾಣೆಯ ಪಿ.ಎಸ್.ಐ ತಿರುಮಲೇಶ್ ಅವರಿಗೂ ಎಸ್ಪಿ ಶ್ರೀನಿವಾಸಲು ನೋಟಿಸ್ ಜಾರಿ ಮಾಡಿ ನಿಗದಿತ ಸಮಯದಲ್ಲಿ ಉತ್ತರಿಸುವಂತೆ ಲಿಖಿತವಾಗಿ ತಾಕೀತು ಮಾಡಿದ್ದಾರೆ.
ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿನಿಧಿಸುವ ಚಿತ್ತಾಪುರ ತಾಲೂಕಿನ ವಾಡಿ ಪೊಲೀಸ್ ಠಾಣೆಯಲ್ಲಿ ಇಂಥದ್ದೊಂದು ಪ್ರಕರಣ ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ವ್ಯಾಪಕ ಟೀಕೆಗಳು ಕೇಳಿಬಂದಿದ್ದವು. ಮೇಲಾಗಿ, ಪೊಲೀಸ್ ಸಿಬ್ಬಂದಿ ಠಾಣೆಯಲ್ಲೇ ಬಿಂದಾಸಾಗಿ ಇಸ್ಪಿಟ್ ಆಡುತ್ತಿರುವ ವಿಡಿಯೋ ವೈರಲ್ ಆಗಿದ್ದರಿಂದ ರಾಜ್ಯಾದ್ಯಂತ ಈ ಪ್ರಕರಣ ಗಮನ ಸೆಳೆದಿತ್ತು. ಹೀಗಾಗಿ, ಘಟನೆ ಬೆಳಕಿಗೆ ಬಂದ ಬೆನ್ನಲ್ಲೇ ಎಸ್ಪಿ ಶ್ರೀನಿವಾಸಲು ಮಿಂಚಿನ ವೇಗದಲ್ಲಿ ತಪ್ಪಿತಸ್ಥ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಂಡು ಗಮನ ಸೆಳೆದಿದ್ದಾರೆ.

## ಕಾರ್ಯ ನಿರ್ವಹಣೆಗೆ ಆಗ್ರಹ

ಬೆಲೆ 7 ರಿಂದ 8 ಸಾವಿರ ರೂ. ಆಗಿದೆ. ಈ ಬೆಲೆ ಕುಸಿತದಿಂದ ರೈತರು ಆತ್ಮಹತ್ಯೆ ದಾರಿ ಹಿಡಿದಿದ್ದಾರೆ. ಆಂಧ್ರದಲ್ಲಿ ಮೆಣಸಿನಕಾಯಿ ಬೆಲೆ ಕುಸಿದಾಗ ಅಲ್ಲಿನ ಮುಖ್ಯಮಂತ್ರಿಗಳು ಕೇಂದ್ರಕ್ಕೆ ಮನವಿ ಮಾಡಿ ಮೆಣಸಿನಕಾಯಿ ಕ್ವಿಂಟಾಲ್‌ಗೆ 11,781 ರೂ. ಬೆಂಬಲ ಬೆಲೆ ನಿಗದಿ ಮಾಡಿದ್ದಾರೆ. ರಾಜ್ಯದಲ್ಲಿ ಈ ಬೆಂಬಲ ಬೆಲೆಯನ್ನು ನಿಗದಿ ಮಾಡಿ. ಮುಖ್ಯಮಂತ್ರಿಗಳು ಕೇಂದ್ರಕ್ಕೆ ಈ ಬಗ್ಗೆ ಪತ್ರ ಬರೆದಿದ್ದರೂ ಕೇಂದ್ರ ಯಾವುದೇ ಕ್ರಮ ಕೈಗೊಂಡಿಲ್ಲ. ರಾಜ್ಯದ ಸಂಸದರು ಈ ಬಗ್ಗೆ ಗಮನ ಹರಿಸಬೇಕು ಎಂದು ಅವರು ಹೇಳಿದರು.

ಅನುದಾನಕ್ಕೆ ಒತ್ತಾಯ

ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟದ ಅಭಿವೃದ್ಧಿಗೆ ಕಳೆದ ಬಜೆಟ್‌ನಲ್ಲಿ 3 ಕೋಟಿ ರೂಪಾಯಿ ನೀಡಲಾಗಿತ್ತು. ಆದರೆ ಈ ಬಜೆಟ್‌ನಲ್ಲಿ ಅನುದಾನ ಪ್ರಸ್ತಾವವೇ ಇಲ್ಲ. ಇಲ್ಲಿ ಹೆಚ್ಚಿನ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಅನುದಾನ ಕೊಡಿ ಎಂದು ಬಿಜೆಪಿಯ ಜನಾರ್ಧನರೆಡ್ಡಿ ವಿಧಾನಸಭೆಯಲ್ಲಿಂದು ಆಗ್ರಹಿಸಿದರು.

ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬಜೆಟ್‌ನಲ್ಲಿ ನವಿಲೆ ಜಲಾಶಯಕ್ಕೆ 1 ಸಾವಿರ ಕೋಟಿ ರೂ. ಅನುದಾನ ಘೋಷಣೆ ಮಾಡಲಾಗಿತ್ತು. ಈ ಬಜೆಟ್‌ನಲ್ಲಿ ಅದರ ಪ್ರಸ್ತಾವವನ್ನೇ ಮಾಡಿಲ್ಲ. ತಾಂತ್ರಿಕ ಕಾರಣಗಳು ನನಗೆ ಗೊತ್ತಿದೆ. ಆಂಧ್ರ ಮತ್ತು ತೆಲಂಗಾಣ ಸರ್ಕಾರಗಳ ಜತೆ ಮಾತನಾಡಿ ನವಿಲೆ ಜಲಾಶಯದ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಇರುವ ವಿಕಲ ಚೇತನರ ಪುನರ್ವಸತಿ ಕೇಂದ್ರಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ 10 ವರ್ಷದಿಂದ ಸಂಬಳ ಏರಿಕೆ ಮಾಡಿಲ್ಲ. ಇವರ ಸಂಬಳ ಏರಿಕೆ ಮಾಡಿ ಎಂದು ಅವರು ಒತ್ತಾಯಿಸಿ, ಕಲ್ಯಾಣ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯ ಸಿಬ್ಬಂದಿಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳುವಂತೆಯೂ ಆಗ್ರಹಿಸಿದರು.

ಹಂಪಿ ಮತ್ತು ಆನೆಗೊಂದಿಯಲ್ಲಿ ದುರ್ಘಟನೆಗಳನ್ನು ತಡೆಯಲು ಈ ಹಿಂದೆ ನಾನು ಸಚಿವನಾಗಿದ್ದಾಗ ಪೊಲೀಸ್ ಸಬ್‌ಡಿವಿಷನ್ ಸ್ಥಾಪಿಸಿದೆ. ಈಗ ಆ ಸಬ್ ಡಿವಿಷನ್ ತೆಗೆಯಲಾಗಿದೆ. ಸರ್ಕಾರ ಕೂಡಲೇ ಹಂಪಿ-ಆನೆಗೊಂದಿಯಲ್ಲಿ ಡಿವೈಎಸ್ಪಿ ಇರುವ ಪೊಲೀಸ್ ಉಪವಿಭಾಗ ತೆರೆಯಬೇಕು. ಪ್ರವಾಸಿಗರ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬಳ್ಳಾರಿಯಲ್ಲಿ ವಿಮಾನ ನಿಲ್ದಾಣಕ್ಕೆ 300 ಎಕರೆ ಜಮೀನು ಲಭ್ಯವಿದೆ. ಆದರೆ ವಿಮಾನ ನಿಲ್ದಾಣದಲ್ಲಿ ಬಜೆಟ್‌ನಲ್ಲಿ ಯಾವುದೇ ಪ್ರಸ್ತಾಪ ಇಲ್ಲ. ಬಳ್ಳಾರಿ ವಿಮಾನ ನಿಲ್ದಾಣ ನಿರ್ಮಾಣಕ್ಕೂ ಸರ್ಕಾರ ಗಮನ ಹರಿಸಬೇಕು ಎಂದು ಅವರು ಹೇಳಿದರು.

ಬೆಂಬಲ ಬೆಲೆ

ಜೋಳ ಬೆಲೆ ಕುಸಿತದಿಂದ ರೈತರು ಕಂಗಾಲಾಗಿದ್ದಾರೆ. ಜೋಳ ಬೆಳೆಗಾರರ ನೆರವಿಗೆ ಸರ್ಕಾರ ಧಾವಿಸಿ ಪ್ರತಿ ಕ್ವಿಂಟಾಲ್ ಜೋಳಕ್ಕೆ 10 ಸಾವಿರ ರೂಪಾಯಿ ದರ ನಿಗದಿ ಮಾಡಬೇಕು ಎಂದು ಬಿಜೆಪಿಯ ಮಾನಪ್ಪ ವಜ್ಜಲ್ ವಿಧಾನಸಭೆಯಲ್ಲಿ ಒತ್ತಾಯಿಸಿದರು.

ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದಲ್ಲಿ ಕೈಗಾರಿಕೆಗಳು ಇಲ್ಲ. ಜನ ಗುಳೆ ಹೋಗುತ್ತಿದ್ದಾರೆ. ಜನರಿಗೆ ಉದ್ಯೋಗ ಕೊಡಿ ಎಂದು ಒತ್ತಾಯಿಸಿದರು.ಮುದುಗಲ್‌ನ್ನು ತಾಲ್ಲೂಕು ಕೇಂದ್ರ ಮಾಡುವಂತೆಯೂ ಅವರು ಆಗ್ರಹಿಸಿದರು.

**ವಿಶೇಷ ಪ್ಯಾಕೇಜ್‌ಗೆ ಆಗ್ರಹ:** ರಾಜ್ಯದಲ್ಲಿ ತೀರಾ ಹಿಂದುಳಿದಿರುವ ಹೆಗಡದೇವನಕೋಟೆ ಮತ್ತು ಚಾಮರಾಜನಗರ ತಾಲ್ಲೂಕುಗಳ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ನೀಡುವಂತೆ ಕಾಂಗ್ರೆಸ್‌ನ ಅನಿಲ್ ಚಿಕ್ಕಮಾದು ವಿಧಾನಸಭೆಯಲ್ಲಿ ಒತ್ತಾಯಿಸಿದರು.

ಈ ಎರಡು ತಾಲ್ಲೂಕುಗಳು ಅಭಿವೃದ್ಧಿಯಲ್ಲಿ ಹಿಂದೆ ಬಿದ್ದಿವೆ. ಡಾ. ನಂಜುಂಡಪ್ಪ ಅವರ ವರದಿಯಲ್ಲೂ ಈ ಎರಡು ತಾಲ್ಲೂಕುಗಳನ್ನು ತೀರಾ ಹಿಂದುಳಿದ ತಾಲ್ಲೂಕುಗಳೆಂದು ಹೇಳಲಾಗಿದೆ. ಇಷ್ಟಾದರೂ ನಮಗೆ ಅನುದಾನ ಇಲ್ಲ. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ 5 ಸಾವಿರ ಕೋಟಿ ರೂ. ಕೊಡುತ್ತೀರಿ. ನಮಗೆ ಯಾವುದೇ ಅನುದಾನ ಇಲ್ಲ, ಹೆಚ್ಚಿನ ಅನುದಾನ ಕೊಡಿ ಎಂದು ಅವರು ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಹೇಳಿದರು.

ಜಲಾಶಯ ನಿರ್ಮಾಣದಿಂದ ಜಮೀನು ಕಳೆದುಕೊಂಡ ರೈತರಿಗೆ ಇದುವರೆಗೂ ಪರಿಹಾರ ಸಿಕ್ಕಿಲ್ಲ. ಅವರಿಗೆ ಪರಿಹಾರ ಕೊಡಿ, ಜಮೀನು ನೀಡಿ ಎಂದು ಒತ್ತಾಯಿಸಿದರು.

ಬುಡಕಟ್ಟು ಜನರಿಗೆ ಆಶ್ರಮ ಶಾಲೆಗಳನ್ನು ಆರಂಭಿಸಬೇಕು. ಬುಡಕಟ್ಟು ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ಒದಗಿಸಲು ಬಿ.ಎಡ್ ವ್ಯಾಸಂಗ ಮಾಡಿರುವ ಶಿಕ್ಷಕರನ್ನು ನೇಮಕ ಮಾಡುವಂತೆ ಅವರು ಒತ್ತಾಯಿಸಿದರು.

## ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ

ಅಲ್ಲದೆ, ಕಾವೇರಿ ಆರತಿಯ ಹಮ್ಮಿಕೊಳ್ಳುವ ಸಂಬಂಧ ಬೆಂಗಳೂರು ಜಲ ಮಂಡಳಿಯ ಅಧಿಕಾರಿಗಳು ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿರುವ ಸಂಬಂಧ ಮಾಧ್ಯಮಗಳಲ್ಲಿ ವರದಿಯಾಗಿದೆ. ಈ ಸಂಬಂಧ ಶೀಘ್ರ ವಿಚಾರಣೆಗೆ ಪರಿಗಣಿಸಬೇಕು ಎಂದು ಮುಖ್ಯನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ನ್ಯಾಯಪೀಠಕ್ಕೆ ಅರ್ಜಿದಾರರ ಪರ ವಕೀಲರು ಮನವಿ ಮಾಡಿದ್ದಾರೆ.
ವಿಚಾರಣೆ ವೇಳೆ ವಕೀಲರು, "ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ ಹಮ್ಮಿಕೊಳ್ಳುವುದಕ್ಕೆ ಅರ್ಜಿದಾರರಿಂದ ಯಾವುದೇ ಆಕ್ಷೇಪಣೆ ಇಲ್ಲ. ಆದರೆ, ಈ ಕಾಯಕ್ರಮಕ್ಕೆ ಕೆರೆಯ ಬಫರ್ ಝೋನ್‌ನಲ್ಲಿ ಕಾನೂನುಬಾಹಿರವಾಗಿ ತಾತ್ಕಾಲಿಕ ಸ್ಟೇಜ್‌ಗಳು ನಿರ್ಮಾಣವಾಗಲಿವೆ, ಇದಕ್ಕೆ ನಮ್ಮ ಆಕ್ಷೇಪಣೆ ಇದೆ" ಎಂದು ಪೀಠಕ್ಕೆ ತಿಳಿಸಿದರು.
"ಅಲ್ಲದೆ, ಸ್ಯಾಂಕಿ ಕೆರೆಯ ಬಫರ್ ಝೋನ್‌ನಲ್ಲಿ ಈ ರೀತಿಯ ಕಾರ್ಯಕ್ರಮಗಳನ್ನು ನಡೆಸುವುದು ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಕಾಯಿದೆಗೆ ತದ್ವಿರುದ್ಧ. ಈ ರೀತಿಯಲ್ಲಿ ಸಾಂಸ್ಕೃತಿಕ ಕಾಯಕ್ರಮ ಹಮ್ಮಿಕೊಳ್ಳುವುದರಿಂದ ಕೆರೆಯಲ್ಲಿನ ಹಕ್ಕಿಗಳಿಗೆ ತೀವ್ರ ತರದ ತೊಂದರೆಯಾಗುತ್ತದೆ" ಎಂದು ಪೀಠಕ್ಕೆ ವಿವರಿಸಿದರು.

# ಅಸಾಧ್ಯವಾದುದನ್ನು ಸಾಧ್ಯವಾಗಿಸಬೇಕು: ಡಾ. ವಿದ್ಯಾಶಂಕರ್

**ಬೆಂಗಳೂರು:** ಅಸಾಧ್ಯವಾದ ಕೆಲಸವನ್ನು ಸಾಧ್ಯ ಮಾಡಿ ತೋರಿಸುವುದೇ ಜೀವನದ ಧ್ಯೇಯವಾಗಬೇಕು ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ವಿದ್ಯಾಶಂಕರ್ ಅವರು ತಿಳಿಸಿದರು.

ರಾಜ್ಯ ಒಕ್ಕಲಿಗರ ಸಂಘ ಮಂಗಳವಾರ ಕವೆಂಪು ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪಕುಲಪತಿಯಾಗಿ ನೇಮಕಗೊಂಡಿರುವ ಡಾ. ಬಿ.ಸಿ.ಭಗವಾನ್ ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಉಪಕುಲಪತಿಯಾಗಿ ನೇಮಕಗೊಂಡ ಡಾ.ವಿದ್ಯಾಶಂಕರ್ ಅವರ ಅಭಿನಂದನಾ ಸಮಾರಭದಲ್ಲಿ ಅವರು ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ತಮ್ಮನ್ನು ಅಭಿನಂದಿಸಿದ ರಾಜ್ಯ ಒಕ್ಕಲಿಗರ ಸಂಘದ ಪದಾಧಿಕಾರಿಗಳಿಗೆ ಕೃತಜ್ಞತೆಗಳನ್ನು ತಿಳಿಸಿದ ಅವರು, ಈ ಸಂಘದ ಹಲವಾರು ಸಂಸ್ಥೆಗಳಲ್ಲಿ 28 ವರ್ಷಗಳ ಸುದೀರ್ಘ ಸೇವೆ ಸಲ್ಲಿಸಿದ್ದು, ನೋವು-ನಲಿವುಗಳ ನಡುವೆ ಕಲಿತ ಪಾಠಗಳೇ ತಮ್ಮನ್ನು ಗಟ್ಟಿಯಾಗಿಸಿವೆ ಎಂದು ಹೇಳಿದರು.

ಒಂದೇ ಸಂಸ್ಥೆಯಿಂದ ಇಬ್ಬರು ಉಪಕುಲಪತಿಗಳು ನೇಮಕವಾಗಿರುವುದು ಸಂಘಕ್ಕೆ ಹೆಮ್ಮೆಯ ಸಂಗತಿ ಎಂದು ಹೇಳಿದರು. ತಾವು ವಿಶ್ವೇಶ್ವರ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಮಾಡಿರುವ ಸಾಧನೆಯನ್ನು ತಾವು ಪ್ರತ್ಯಕ್ಷವಾಗಿ ನೋಡಬೇಕು ಎಂದು ಆಹ್ವಾನ ನೀಡದ ಅವರು, ತಮ್ಮ ವಿವಿಗೆ ಎಕಾನಮಿಕ್ಸ್ ಟೈಮ್ಸ್ ನಿಂದ 5 ಪ್ರತಿಷ್ಠಾತ್ಮಕ ಪ್ರಶಸ್ತಿಗಳು ಬಂದಿದ್ದು, ಅವುಗಳಲ್ಲಿ ತಮಗೂ




ದೊರೆತ ಸ್ಟ್ಯಾಂಡಿಂಗ್ ಸಾಧನೆಯ ಪ್ರಶಸ್ತಿಯೂ ಒಂದು ಎಂದು ತಿಳಿಸಿದರು.

ಹಿಂದೆ ತಮ್ಮನ್ನು ಅಭಿನಂದಿಸಿದ ಸಮಾರಂಭದಲ್ಲಿ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರ ಮಾತುಗಳನ್ನು ಸ್ಮರಿಸಿಕೊಂಡ ಅವರು, ನೀವು ಮಾಡುವ ಸಾಧನೆ ಮೂರು ವರ್ಷಗಳ ನಂತರ ಬಿಂಬಿಸಿಕೊಳ್ಳಬೇಕು ಎಂದು ಶ್ರೀಗಳು ಹೇಳಿದ್ದರು. ಅದರಂತ ತಾವು ಹಲವು ಸಾಧನೆಗಳನ್ನು ಮಾಡಿರುವುದಾಗಿ ಹೇಳಿದರು.

ಪರೀಕ್ಷೆ ಮುಗಿದ 2 ಗಂಟೆಗಳಲ್ಲಿ ಫಲಿತಾಂಶ ಪ್ರಕಟಗೊಂಡ ವಿಟಿಯು ಸಾಧನೆ ಕುರಿತು ಹಲವಾರು ವಿವಿಗಳ ಮುಖ್ಯಸ್ಥರು ಹುಬ್ಬೇರಿಸಿದ್ದಾರೆ. ಇದು ಹೇಗೆ ಸಾಧ್ಯ ಎಂದು ಪ್ರಶ್ನಿಸಿಕೊಂಡು ನಮ್ಮ ವಿವಿಗೆ ಬಂದು ಅದರ ಅಧ್ಯಯನದಲ್ಲಿ ತೊಡಗಿದ್ದಾರೆ ಎಂದು ತಿಳಿಸಿದರು. ಇಡೀ ದೇಶಕ್ಕೆ ನಮ್ಮ ವಿವಿ ಮಾದರಿಯಾಗಿದೆ ಎಂದು ಹೇಳಿದರು.

ತಮ್ಮ ಹಿಂದೆ ಯಾವು ಫಾದರ್ ಇಲ್ಲದೇ ತಾವು ಸ್ವತಃ ಪಟ್ಟ ಶ್ರಮದಿಂದ ಈ ಸ್ಥಾನಕ್ಕೆ ತಲುಪಿರುವುದಾಗಿ ತಿಳಿಸಿದರು. ರಾಜ್ಯ ಒಕ್ಕಲಿಗರ ಸಂಘ ನೂರಾರು ವರ್ಷ ಬಾಳಬೇಕು, ಅಭಿವೃದ್ಧಿಯೇ ಸಂಘದ ಪದಾಧಿಕಾರಿಗಳ ಮಂತ್ರವಾಗಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಅದೇ ಸಮಾರಂಭದಲ್ಲಿ ಅಭಿನಂದನೆ ಸ್ವೀಕರಿಸಿದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಬಿ.ಸಿ.ಭಗವಾನ್ ಮಾತನಾಡಿ, ಸಂಸಾರವೆಂಬ ಸಾಗರವನ್ನು ದಾಟಿ ತೆಪ್ಪಗಿರು ಎಂಬ ಮಾತಿನಂತೆ ತಾವು ನಗುನಗುತಾ ಕಾರ್ಯ ನಿರ್ವಹಿಸುವುದನ್ನು ರೂಢಿ ಮಾಡಿಕೊಂಡಿರುವುದಾಗಿ ಹೇಳಿದರು.

ತಾವು ಒಮ್ಮೆ ಭೇಟಿಯಾದಾಗ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು 'ಎಲ್ಲ ಜನರ ಮಾತು ಕೇಳಿಸಿಕೊಳ್ಳಿ, ನಂತರ ನಿಮ್ಮ ಸ್ವಂತ ನಿರ್ಧಾರವನ್ನು ಕೈಗೊಳ್ಳಿ' ಎಂದು ಸಲಹೆ ನೀಡಿದ್ದರು. ಅದರಂತೆ ತಮ್ಮ ವರ್ತನೆ ಇದೆ ಎಂದು ತಿಳಿಸಿದರು.

ಹಲವು ಜನರ ಸಹಕಾರದಿಂದ ಈ ಮಟ್ಟಕ್ಕೆ ಬೆಳೆದಿರುವುದಾಗಿ ತಿಳಿಸಿದ ಅವರು, ಪ್ರಪಂಚದಲ್ಲೇ ಅತ್ಯಂತ ದೊಡ್ಡದಾದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ 10ನೇ ಉಪಕುಲಪತಿಯಾಗಿ ನೇಮಕಗೊಂಡಿದ್ದು, ನನ್ನ ಸೌಭಾಗ್ಯ ಎಂದರು.

ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಬಿ.ಕೆಂಚಪ್ಪಗೌಡರವರು, ಮಾಜಿ ಅಧ್ಯಕ್ಷ, ಶಾಸಕ ಸಿ.ಎನ್.ಬಾಲಕೃಷ್ಣ, ಉಪಾಧ್ಯಕ್ಷರುಗಳಾದ ಎಲ್.ಶ್ರೀನಿವಾಸ್, ಡಾ.ಕೆ.ವಿ.ರೇಣುಕಾ ಪ್ರಸಾದ್, ಪ್ರಧಾನ ಕಾರ್ಯದರ್ಶಿಗಳಾದ ಟಿ.ಕೋನಪ್ಪರೆಡ್ಡಿ, ಖಜಾಂಚಿಗಳಾದ ಎನ್.ಬಾಲಕೃಷ್ಣ (ನಲ್ಲಿಗೆರೆ ಬಾಲು), ಸಹಾಯಕ ಕಾರ್ಯದರ್ಶಿಗಳಾದ ಆರ್. ಹನುಮಂತರಾಯಪ್ಪ ಹಾಗೂ ಸಂಘದ ನಿರ್ದೇಶಕರುಗಳು ಭಾಗಿಯಾಗಿದ್ದರು.

# ನಾಸಾ ಗಗನಯಾತ್ರಿ ಸುನಿತಾ ವಿಲಿಯಮ್ಸ್‌ಗೆ ಮೋದಿ ಪತ್ರ

**ನವದೆಹಲಿ:** ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದಲ್ಲಿ ಸಿಲುಕಿದ್ದ ಭಾರತ ಮೂಲದ ನಾಸಾ ಗಗನಯಾತ್ರಿ ಸುನಿತಾ ವಿಲಿಯಮ್ಸ್ ಬರುವಿಕೆಗಾಗಿ ಇಡೀ ಜಗತ್ತೇ ಉಸಿರು ಬಿಗಿ ಹಿಡಿದು ಕಾಯುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಕೂಡ ಭಾರತದ ಮಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು ಪತ್ರ ಬರೆದಿದ್ದಾರೆ. "ನೀವು ಸಾವಿರಾರು ಮೈಲುಗಳಷ್ಟು ದೂರವಿದ್ದರೂ ಸದಾ ನಮ್ಮ ಹೃದಯಕ್ಕೆ ಹತ್ತಿರವಾಗಿರುತ್ತೀರಿ" ಎಂದು ಮೋದಿ ಪತ್ರದಲ್ಲಿ ಬರೆದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಗಗನಯಾತ್ರಿ ಮೈಕ್ ಮಾಸ್ಸಿಮಿನೊ ಮೂಲಕ ಸುನಿತಾಗೆ ಕಳುಹಿಸಿರುವ ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಈ ಪತ್ರವು 143 ಕೋಟಿ ಭಾರತೀಯರ ಹೆಮ್ಮೆಯನ್ನು ಪ್ರತಿಬಿಂಬಿಸುತ್ತದೆ. ಕೆಲವು ದಿನಗಳ ಹಿಂದೆ ಒಂದು ಕಾರ್ಯಕ್ರಮದಲ್ಲಿ ಮಾಸ್ಸಿಮಿನೊ ಅವರನ್ನು ಭೇಟಿಯಾಗಿ ತಮ್ಮ ಭಾರತದ ಜನರ ಪರವಾಗಿ ಈ ಪತ್ರವನ್ನು ಸುನಿತಾಗೆ ತಲುಪಿಸಬೇಕೆಂದು ಮನವಿ ಮಾಡಿದ್ದರು. ಅವರ ಸುರಕ್ಷಿತ ಮರಳುವಿಕೆಗೆ ಹಾರೈಸುತ್ತಾ ಪ್ರಧಾನಿ ಮೋದಿ ಭಾರತದ ಶ್ರೇಷ್ಠ ಮಗಳೊಂದಿಗಿನ ಆಳವಾದ ಬಾಂಧವ್ಯವನ್ನು ಪುನರುಚ್ಚರಿಸಿದರು. ಈ ಕುರಿತು ಸಚಿವ ಜಿತೇಂದ್ರ ಸಿಂಗ್ ಪ್ರಧಾನಿ ಮೋದಿಯವರ ಪತ್ರವನ್ನು ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿರುವ ಭಾರತ ಮೂಲದ ನಾಸಾ ಗಗನಯಾತ್ರಿ ಸುನಿತಾ ವಿಲಿಯಮ್ಸ್ ಹಾಗೂ ಸಹ ಗಗನಯಾತ್ರಿ ಬುಚ್ ವಿಲ್ಮೋರ್ ಭೂಮಿಗೆ ಇಂದೇ ಮರಳಲಿದ್ದಾರೆ. ಈ ಇಬ್ಬರು ಮತ್ತು ಇತರ ಇಬ್ಬರು ಗಗನಯಾತ್ರಿಗಳು ಮಂಗಳವಾರ ಸಂಜೆ ಭೂಮಿಗೆ ಮರಳಲಿದ್ದಾರೆ ಎಂದು ಅಮೆರಿಕದ ಬಾಹ್ಯಾಕಾಶ ಸಂಸ್ಥೆ ನಾಸಾ ತಿಳಿಸಿದೆ. ಸುನಿತಾ ವಿಲಿಯಮ್ಸ್, ಬುಚ್ ವಿಲ್ಮೋರ್ ಮತ್ತು ಮತ್ತೊಬ್ಬ ಅಮೇರಿಕನ್ ಗಗನಯಾತ್ರಿ ನಿಕ್ ಹೇಗ್ ಮತ್ತು ರಷ್ಯಾದ ಗಗನಯಾತ್ರಿ ಅಲೆಕ್ಸಾಂಡರ್ ಗೋರ್ಬುನೋವ್ ಅವರು ಮಂಗಳವಾರ ಸಂಜೆ 6 ಗಂಟೆ ಸುಮಾರಿಗೆ ಫ್ಲೋರಿಡಾ ಕರಾವಳಿಯಲ್ಲಿ ಸ್ಪೇಸ್‌ಎಕ್ಸ್‌ನ ಡ್ರ್ಯಾಗನ್ ಕ್ರಾಫ್ಟ್ ಬಾಹ್ಯಾಕಾಶ ನೌಕೆಯಲ್ಲಿ ಇಳಿಯಬಹುದು ಎಂದು ನಾಸಾ ತಿಳಿಸಿದೆ.



ಬಿ ಡಬ್ಲ್ಯೂ ಎಸ್ ಎಸ್ ಬಿ ಚೀಫ್ ಇಂಜಿನಿಯರ್ ಸುರೇಶ್ ಅವರಿಗೆ ನಗರದ ಸ್ಯಾಂಕಿ ಕೆರೆಯಲ್ಲಿ ಕರ್ನಾಟಕದ ಗೆಜೆಟ್ ನೋಟಿಫಿಕೇಶನ್, ಹಸಿರು ಪೀಠದ ನ್ಯಾಯಾಧಿಕರಣ, ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಗಳ ಪ್ರಕಾರ ಯಾವುದೇ ರೀತಿಯ ಧಾರ್ಮಿಕ,ಸಾಂಸ್ಕೃತಿಕ, ಮತ್ತು ವ್ಯಾಪಾರಿಕರಣದ ಉದ್ದೇಶಕ್ಕೆ ಬಳಸಬಾರದೆಂದು ನೈಜ ಹೋರಾಟಗಾರರ ವೇದಿಕೆಯ ಬಿಎಸ್ ಲೋಕೇಶ್ ಮತ್ತು ಎಚ್ ಎಂ ವೆಂಕಟೇಶ್ ಅವರು ಮನವಿ ಸಲ್ಲಿಸಿದರು

# ಜಿಲ್ಲಾಧಿಕಾರಿ ಹುದ್ದೆ ಅಂದ್ರೆ ಅದೇನು ಎಂಜಾಯ್ ಮಾಡುವುದಕ್ಕೆ ಇದೆಯಾ..?

**ಬೆಂಗಳೂರು:** 'ಮೈಸೂರು ಉದಯಗಿರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಹಲೀಂ ಸಾದಿಯಾ ಮದರಸಾವನ್ನು ಮಸೀದಿಯಾಗಿ ಪರಿವರ್ತಿಸುವ ಚಟುವಟಿಕೆ ನಡೆಯುತ್ತಿವೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ದಶಕಗಳಿಂದ ಮುಂದುವರಿದಿರುವ ವಿವಾದವನ್ನು ಬಗೆಹರಿಸಲು ಹೋದರೆ ಕಾನೂನು ಸುವ್ಯವಸ್ಥೆ ಹದಗೆಡುತ್ತದೆ ಎಂಬ ಕಾರಣ ಮುಂದೊಡ್ಡಿ ಸಮಸ್ಯೆ ಪರಿಹರಿಸದೇ ಇರುವ ನಿಮ್ಮ ನಡೆ ಒಪ್ಪತಕ್ಕದ್ದಲ್ಲ ಎಂದು ಹೈಕೋರ್ಟ್ ಮೈಸೂರು ಜಿಲ್ಲಾಧಿಕಾರಿಯನ್ನು ತರಾಟೆಗೆ ತೆಗೆದುಕೊಂಡಿದೆ.

'ಮಸ್ಜಿದ್ ಎ ಸಿದ್ದಿಖಿ ಅಕ್ಟರ್ ಟ್ರಸ್ಟ್ ಸಲ್ಲಿಸುವ ಮನವಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ನೀಡಿರುವ ಆದೇಶ ಪಾಲನೆ ಮಾಡಲು ಸರ್ಕಾರ ವಿಫಲವಾಗಿದೆ' ಎಂದು ಆರೋಪಿಸಿ ಗಾಯತ್ರಿಪುರಂ ಎರಡನೇ ಹಂತದಲ್ಲಿರುವ ಹಲೀಂ ಸಾದಿಯಾ ಶೈಕ್ಷಣಿಕ ಸಂಸ್ಥೆ ಮತ್ತು




ಮಸ್ಜಿದ್ ಎ ಸಿದ್ದಿಖಿ ಅಕ್ಟರ್ ಟ್ರಸ್ಟ್‌ನ ಅಧಿಕೃತ ಪ್ರತಿನಿಧಿ ಮುನಾವರ್ ಪಾಶ ಬಿನ್ ಅಬ್ದುಲ್ ವಹೀದ್ ಅವರು ಸಲ್ಲಿಸಿರುವ ಸಿವಿಲ್. ನ್ಯಾಯಾಂಗ ನಿಂದನೆ ಅರ್ಜಿಯನ್ನು ನ್ಯಾಯಮೂರ್ತಿ ಕೆ.ಸೋಮಶೇಖರ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಅರ್ಜಿದಾರರ ಪರ ಹೈಕೋರ್ಟ್ ವಕೀಲ ಮೊಹಮದ್ ತಾಹೀರ್, 'ಸರ್ಕಾರ ಸಬೂಬು ಹೇಳಿ ಬೇಕೆಂದೇ ಸಮಸ್ಯೆ ಇತ್ಯರ್ಥಕ್ಕೆ ಮನಸ್ಸು ಮಾಡುತ್ತಿಲ್ಲ' ಆರೋಪಿಸಿದರು. ಇದನ್ನು ಅಲ್ಲಗಳೆದ ಹೆಚ್ಚುವರಿ ಅಡ್ವಕೇಟ್ ಜನರಲ್ ಸಿ.ಎಸ್.ಪ್ರದೀಪ್ ಮತ್ತು ಸರಕಾರದ ಪರ ವಕೀಲೆ ನಮಿತಾ ಮಹೇಶ್, ಇದೊಂದು ದಶಕಗಳಿಂದ ನೆನೆಗುದಿಗೆ ಬಿದ್ದಿರುವ ವಿಷಯ. ಇದಕ್ಕೆ ಸಂಬಂಧಿಸಿದಂತೆ ನಡೆದ ಗಲಭೆಯಿಂದ 10 ಜನ ಮೃತಪಟ್ಟಿದ್ದಾರೆ. ಗಂಭೀರವಾದ 64 ಕ್ರಿಮಿನಲ್ ಪ್ರಕರಣ ದಾಖಲಾಗಿದೆ ಎಂದು ವಸ್ತು ಸ್ಥಿತಿಯನ್ನು ಪೀಠಕ್ಕೆ ವಿವರಿಸಿದರು.

ವಾದ ಆಲಿಸಿದ ನ್ಯಾಯಪೀಠ ವಿಚಾರಣೆಯಲ್ಲಿ ಖುದ್ದು ಹಾಜರಿದ್ದ ಮೈಸೂರು ಡಿಸಿ ಜಿ.ಲಕ್ಷ್ಮೀಕಾಂತ ರೆಡ್ಡಿ ಮತ್ತು ಮೈಸೂರು ನಗರ ಪೊಲೀಸ್ ಎಸಿಪಿ ಕೆ.ರಾಜೇಂದ್ರ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿತು.

ಯಥಾ ಸ್ಥಿತಿ ಕಾಪಾಡುವ ಆದೇಶವನ್ನೇ ಮುಂದುವರೆಸಿಕೊಂಡು ಹೋಗುತ್ತೇವೆ ಎನ್ನುವುದಾದರೆ ನೀವು ಇರುವುದಾದರೂ ಯಾತಕ್ಕೆ? ಕಾನೂನು ಸುವ್ಯವಸ್ಥೆ ಪಾಲಿಸಲು ಕಷ್ಟ ಎನ್ನುವ ನೀವು ಮುಖ್ಯಮಂತ್ರಿ ತವರು ಜಿಲ್ಲೆಯಲ್ಲೇ ಇಂತಹ ಸಮಸ್ಯೆ ಬಗೆಹರಿಸಲಿಲ್ಲ ಎಂದರೆ ಇನ್ಯಾವ ಜಿಲ್ಲೆಯ ಸಮಸ್ಯೆ ಬಗೆಹರಿಸಬಲ್ಲಿರಿ? ಜಿಲ್ಲಾಧಿಕಾರಿ ಹುದ್ದೆ ಎಂದರೆ ಅದೇನು ಎಂಜಾಯ್ ಮಾಡುವುದಕ್ಕೆ ಇದೆಯಾ?' ಎಂದು ಕಿಡಿ ಕಾರಿತು.

ಇದಕ್ಕೆ ಲಕ್ಷ್ಮೀಕಾಂತ ರೆಡ್ಡಿ 'ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ' ಎಂದು ಸಮಜಾಯಿಷಿ ನೀಡಿದರು. ಈ ಮಾತಿಗೆ ದನಿಗೂಡಿಸಿದ ಪ್ರದೀಪ್, ಶಾಂತಿ ಸಭೆ ನಡೆಸಿದರೆ ಸಭೆಯಲ್ಲಿ ಭಾಗವಹಿಸಿದ್ದವರನ್ನು ಗುರಿ ಮಾಡಲಾಗುತ್ತದೆ. ಹತ್ಯೆಗಳು ನಡೆಯುತ್ತವೆ. ಇದರಲ್ಲಿ ಎಡರು ಕೋಮಿನ ಜನರಿಗೂ ಅಪಾಯ ಇದೆ ಎಂಬ ಆತಂಕ ವ್ಯಕ್ತಪಡಿಸಿದರು

ವಾದ-ಪ್ರತಿವಾದ ನ್ಯಾಯಪೀಠ, 'ಕೂಡಲೇ ಶಾಂತಿ ಸಭೆ ನಡೆಸಿ . ಮುಂದಿನ ವಿಚಾರಣೆಯಲ್ಲಿ ಅದರ ವರದಿ ಸಲ್ಲಿಸಿ' ಎಂದು ತಾಕೀತು ಮಾಡಿ ವಿಚಾರಣೆಯನ್ನು ಏಪ್ರಿಲ್ 3 ಕ್ಕೆ ಮುಂದೂಡಿತು.

# ಕೋನಾರ್ಕ್ ಉತವದ ಮಾದರಿಯಲ್ಲಿ ಚಾಲುಕ್ಯ ಉತ್ಸವ ಆಚರಣೆ: ಸಚಿವ ತಂಗಡಗಿ

**ಬೆಂಗಳೂರು:** ಒಡಿಶಾ ರಾಜ್ಯದ ಪ್ರಸಿದ್ಧ ಕೋನಾರ್ಕ್ ಉತ್ಸವದ ಮಾದರಿಯಲ್ಲಿ ಚಾಲುಕ್ಯ ಉತ್ಸವ ಆಚರಿಸಲು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಚಾಲುಕ್ಯ ಉತ್ಸವ ಆಚರಣೆ ಹಿನ್ನೆಲೆಯಲ್ಲಿ ಸಚಿವ ಶಿವರಾಜ್ ಎಸ್.ತಂಗಡಗಿ ಅವರ ನೇತೃತ್ವದಲ್ಲಿ ಬಾಗಲಕೋಟೆಯ ಜನಪ್ರತಿನಿಧಿಗಳ ಸಭೆ ಮಂಗಳವಾರ ವಿಕಾಸಸೌಧದಲ್ಲಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಸಚಿವರು, 2015ರ ನಂತರ ಚಾಲುಕ್ಯ ಉತ್ಸವ ಆಚರಣೆ ನಡೆದಿಲ್ಲ.

ಇತರ ಉತ್ಸವಗಳಂತೆ ಚಾಲುಕ್ಯ ಉತ್ಸವವೂ ಆಚರಣೆ ಆಗುವ ಬದಲಿಗೆ ಇದನ್ನೊಂದು ರಾಷ್ಟ್ರೀಯ ಕಲೆ ಮತ್ತು ಸಾಂಸ್ಕೃತಿಕ ಉತ್ಸವವನ್ನಾಗಿ ರೂಪಿಸಬೇಕು. ಇಡೀ ರಾಷ್ಟ್ರದ ಗಮನ ಸೆಳೆಯುವಂತೆ ಉತ್ಸವ ಆಚರಣೆಯಾಗಬೇಕು ಎಂದು ಹೇಳಿದರು.



ಉತ್ಸವದಲ್ಲಿ ಸಂಗೀತ, ನೃತ್ಯ ಹಾಗೂ ಜಾನಪದ ಕಲಾ ವೈಭವಗಳನ್ನು ಪ್ರತಿಬಿಂಬಿಸುವಂತಹ ಕಾರ್ಯಕ್ರಮಗಳು ಆಯೋಜನೆಯಾಗಲಿದೆ ಎಂದು ತಿಳಿಸಿದರು.

ಮೂರು ದಿನಗಳ ಕಾಲ ನಡೆಯಲಿರುವ ಉತ್ಸವಕ್ಕೆ ಬಾದಾಮಿಯಲ್ಲಿ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದು, ಎರಡನೇ ದಿನ ಪಟ್ಟದಕಲ್ಲು ಹಾಗೂ ಸಮಾರೋಪ ಸಮಾರಂಭ ಐಹೊಳೆಯಲ್ಲಿ ನಡೆಯಲಿದೆ. ವರ್ಷಾಂತ್ಯಕ್ಕೆ ಉತ್ಸವ ಆಚರಿಸಲು ನಿರ್ಧರಿಸಲಾಗಿದ್ದು, ಮುಂದಿನ ಸಭೆಯಲ್ಲಿ ದಿನಾಂಕವನ್ನು ನಿಗದಿಪಡಿಸಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಶಾಸಕ ವಿಜಯಾನಂದ ಕಾಶಪ್ಪನವರ್ ಮಾತನಾಡಿ, ಇಮ್ಮಡಿ ಪುಲಿಕೇಶಿ ಕರ್ನಾಟಕದ ಚರಿತ್ರೆಯಲ್ಲಿ ತನ್ನ ಶೌರ್ಯ, ಸಾಹಸ ಹಾಗೂ ಕಲಾವಂತಿಕೆ ಮುಂತಾದ ಸಂಗತಿಗಳಿಂದಾಗಿ ಅಜರಾಮರನಾಗಿದ್ದನು. ಇಮ್ಮಡಿ ಪುಲಿಕೇಶಿಯ ಚರಿತ್ರೆಯನ್ನು ಉತ್ಸವದಲ್ಲಿ ಸಾರುವ ಕೆಲಸವಾಗಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಅಬಕಾರಿ ಸಚಿವರೂ ಆದ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ, ಮಾಜಿ ಸಚಿವ ಎಚ್. ವೈ.ಮೇಟಿ, ವಿಧಾನ ಪರಿಷತ್ ಸದಸ್ಯರಾದ ಹನುಮಂತ ನಿರಾಣಿ, ಪಿ.ಎಚ್.ಪೂಜಾರ್, ಉಮಾಶ್ರೀ, ಇಲಾಖೆ ನಿರ್ದೇಶಕಿ ಗಾಯಿತ್ರಿ ಹಾಗೂ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

# ಚರ್ಮರೋಗಕ್ಕೆ ಲೇಸರ್-ಶಸ್ತ್ರ ಚಿಕಿತ್ಸೆ: ನಾಲ್ಕು ದಿನಗಳ ಸಮಾವೇಶ

**ಬೆಂಗಳೂರು:** ಮಾರ್ಚ್ 20ರಿಂದ 23ರವರೆಗೆ ನಾಲ್ಕು ದಿನಗಳ ಅಂತಾರಾಷ್ಟ್ರೀಯ "ಭಾರತ್ ಸಮ್ಮಿಟ್ ಆಫ್ ಲೇಸರ್ ಮೆಡಿಸಿನ್ ಅಂಡ್ ಸರ್ಜರಿ" ಸಮಾವೇಶ ಬೆಂಗಳೂರು ವೈಟ್ ಫೀಲ್ಡ್ ಶೆರಟಾನ್ ಗ್ರಾಂಡ್ ಹೋಟೆಲ್ ನ ಕನ್ವೆಂಷನ್ ಸೆಂಟರ್‌ನಲ್ಲಿ ನಡೆಯಲಿದೆ. ಬಿ.ಎಸ್.ಎಲ್.ಎಮ್. ಎಸ್-2025 ಈ ಶೃಂಗಸಮಾವೇಶವನ್ನು ಭಾರೀ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಚಾಲನೆ ನೀಡಲಿದ್ದಾರೆ. ಈ ಸಮಾವೇಶದಲ್ಲಿ ವೈಜ್ಞಾನಿಕ ಅಧಿವೇಶನಗಳು, 3-ಡಿ ಕಾರ್ಯಾಗಾರಗಳು, ಚರ್ಚಾಗೋಷ್ಠಿಗಳು ಮತ್ತು ನಾವಿನ್ಯತೆ ಪೋಸ್ಟರ್ ಅಧಿವೇಶನಗಳನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಡಾ. ಬಿ.ಎಸ್. ಚಂದ್ರಶೇಖರ್ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತ ಮತ್ತು ಪ್ರಪಂಚದಾದ್ಯಂತ ನೆಲೆಸಿರುವ ಚರ್ಮರೋಗ ತಜ್ಞರು ನೀಡುವ ಲೇಸರ್ ಮತ್ತು ಉನ್ನತ ಮಟ್ಟದ ಚಿಕಿತ್ಸೆಯನ್ನು ಪರಿಚಯಿಸುವ ಸಲುವಾಗಿ ಈ ಸಮಾವೇಶ ಆಯೋಜಿಸಲಾಗಿದೆ. ಇದರಿಂದ ಚರ್ಮರೋಗ ತಜ್ಞರು ತಮ್ಮ ದಿನನಿತ್ಯದ ಚಿಕಿತ್ಸಾ ಅಭ್ಯಾಸಗಳನ್ನು ಉನ್ನತ ಮತ್ತು ಸುರಕ್ಷತೆಯ ಲೇಸರ್ ಚಿಕಿತ್ಸೆಯ ಬಳಕೆ ಮತ್ತು ತಂತ್ರಜ್ಞಾನದ ಅರಿವನ್ನು ತಿಳಿಯಲು ಅನುಕೂಲವಾಗಲಿದೆ.

ಈ ಶೃಂಗ ಸಭೆಯಲ್ಲಿ ಪ್ರಮುಖವಾಗಿ ಚರ್ಮದ ಬಣ್ಣಕ್ಕೆ ಸಂಬಂಧಿಸಿದ ಚಿಕಿತ್ಸೆ, ಮೊಡವೆಗಳ ನಿರ್ಮೂಲನೆ, ದೇಹದಲ್ಲಿ ಅನಗತ್ಯವಾಗಿ ಬೆಳೆಯುವ ಕೂದಲನ್ನು ತೊಡೆದುಹಾಕುವುದು, ಚರ್ಮದ ನವ ಯೌವನ ಪಡೆಯುವಿಕೆ, ಟ್ಯಾಟು ನಿರ್ಮೂಲನೆಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆಗಳು ನಡೆಯಲಿವೆ. ಸುದ್ದಿಗೋಷ್ಠಿಯಲ್ಲಿ ಸಂಘಟನಾ ಅಧ್ಯಕ್ಷರಾದ ಪ್ರೊ ಅರುಣ ಸಿ. ಇನಾಮದಾರ, ಸಂಘಟನಾ ಸಹ ಅಧ್ಯಕ್ಷರಾದ ಡಾ. ಟಿ. ಸಲೀಂ, ಡಾ. ಸಂಜೀವ್ ಜೆ. ಔರಂಗಾಬಾದ್ಕರ್, ಪ್ರಧಾನ ಕಾರ್ಯದರ್ಶಿ ಡಾ. ಬಿ.ಎಸ್ ಚಂದ್ರಶೇಖರ್, ಡಾ ರಾಜೇಂದ್ರ ಎಸ್ ಸಿ,ಡಾ. ಶೆಹನಾಜ್ ಆರ್ಸಿವಾಲಾ, ಡಾ. ಸ್ವಪ್ನಿಲ್ ಶಾ, ಡಾ. ಸಿ. ಮಧುರ ಡಾ ಚೈತ್ರಾ ಶೆಣೈ, ಡಾ ಮಂಜುಳ, ಡಾ ಗಿರೀಶ್ ಎಂ ಎಸ್ ಮತ್ತಿತರರು ಉಪಸ್ಥಿತರಿದ್ದರು.

# ಸಾರ್ವಜನಿಕರಿಗಾಗಿ ಇರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಲು ಕರೆ

**ರಾಮನಗರ:** ಮಾನಸಿಕ ಸಮಸ್ಯೆಗಳಿಗೆ ಹಾಗೂ ಶಾಲೆ-ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳು ಪರೀಕ್ಷೆಗೆ ಸಂಬಂಧಿಸಿದ ಒತ್ತಡಗಳಿದ್ದರೆ ಶುಲ್ಕರಹಿತ ದೂರವಾಣಿ ಸಂಖ್ಯೆ 14416 ಟೆಲಿ ಮನಸ್‌ಗೆ ಕರೆ ಮಾಡಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು, ವೈದ್ಯರು ಅವರ ಗೌಪ್ಯತೆಯನ್ನು ಕಾಪಾಡಿ ಅವರಿಗೆ ಪರಿಹಾರ ಸೂಚಿಸುತ್ತಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಕುಮಾರ್ ತಿಳಿಸಿದರು.

ಮಾ.18ರ ಮಂಗಳವಾರ ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಎನ್. ಎಚ್.ಎಂ./ಐ.ಇ.ಸಿ/ಎಸ್.ಬಿ.ಸಿ.ಸಿ. ಕಾರ್ಯಕ್ರಮದಡಿ ಪತ್ರಕರ್ತರಿಗಾಗಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಯೋಜನೆ-ಸೇವೆಗಳ ಬಗ್ಗೆ ಮಾತನಾಡಿದರು.

ದಾನಗಳಲ್ಲೇ ಶ್ರೇಷ್ಠವಾದದ್ದು ನೇತ್ರದಾನ. ಒಬ್ಬ ವ್ಯಕ್ತಿ ಕಣ್ಣುಗಳನ್ನು ದಾನ ಮಾಡಿದರೆ ಅಂಧರಿಗೆ ಬೆಳಕು ನೀಡಿದ ಪುಣ್ಯ ಲಭಿಸುತ್ತದೆ, ವ್ಯಕ್ತಿ ಮರಣಹೊಂದಿದ 6 ಗಂಟೆಯೊಳಗೆ ನೇತ್ರದಾನ ಮಾಡಬಹುದು ಎಂದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಪದ್ಮಾವತಿ ಮಾತನಾಡಿ, ಜಿಲ್ಲೆಯಲ್ಲಿ ಮಲೇರಿಯಾ ನಿರ್ಮೂಲನೆ ಹಂತದಲ್ಲಿದ್ದೇವೆ, ಬೇಸಿಗೆ ಕಾಲದಲ್ಲಿ ಡಿಹೈಡ್ರೇಷನ್ ನಿಂದಾಗಿ ನೀರಿನ ಅಂಶ ನಮ್ಮ ದೇದಿಂದ ಹೊರಹೋಗುತ್ತದೆ. ಹಾಗಾಗಿ ಜನರು ಮಧ್ಯಾಹ್ನ 12 ರಿಂದ 3 ಗಂಟೆಯ ಅವಧಿಯೊಳಗೆ ಆದಷ್ಟು ಬಿಸಿಲಿನಲ್ಲಿ ಇರುವುದನ್ನು ಕಡಿಮೆ ಮಾಡಬೇಕು. ಆದಷ್ಟು ಅರ್ಧ ಗಂಟೆಗೊಮ್ಮೆ ಒಂದು ಲೋಟ ನೀರು ಕುಡಿಯುವುದನ್ನು ರೂಢಿಸಿಕೊಳ್ಳಬೇಕು. ಹಣ್ಣುಗಳು




ತಿನ್ನಬೇಕು, ಎಳನೀರನ್ನು ಕುಡಿಯಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಶಶಿ ಕಿರಣ್ ಮಾತನಾಡಿ, ಕ್ಷಯರೋಗ ಎಂದು ಯಾರು ಅನ್ಯತಾ ಭಾವಿಸಬಾರದು. ಕ್ಷಯರೋಗ ಬಂದಿದೆ ಎಂದರೆ ಜನರು ನಮ್ಮನ್ನು ಕಡೆಗಣಿಸುತ್ತಾರೆ ಎಂದು ಭಯ ಪಡುವ ಅಗತ್ಯವಿಲ್ಲ. ಕ್ಷಯ ರೋಗಕ್ಕೆ ಒಳಗಾದವರಿಗೆ 10 ರಿಂದ 12 ಲಕ್ಷಗಳು ಕಾಣಿಸಿಕೊಂಡರೆ ಕ್ಷಯ ಎಂದು ಕರೆಯುತ್ತೇವೆ. ಮೊದಲಿಗೆ ಸತತವಾದ ಕೆಮ್ಮು, ಕಫ, ಸಂಜೆಯ ವೇಳೆ ಮೈ ಬಿಸಿ ಎನ್ನುವಷ್ಟು ಜ್ವರ, ಆಹಾರ ಸೇವನೆ ಮಾಡದ ಲಕ್ಷಣಗಳು ಕಂಡು ಬಂದರೆ ಶೇ.99ರಷ್ಟು ಅವರಿಗೆ ಕ್ಷಯ ರೋಗ ಬಂದಿದೆ ಎಂದು ಖಚಿತವಾಗುತ್ತದೆ. ಇಂತಹವರನ್ನು ಗುರುತಿಸಿ, ಪರೀಕ್ಷೆ ಮಾಡಿ ಚಿಕಿತ್ಸೆ ಮೂಲಕ ಗುಣಮುಖರನ್ನಾಗಿ ಮಾಡಲಾಗುವುದು ಎಂದರು.

ನಗರದಲ್ಲಿರುವ ಜಿಲ್ಲಾಸ್ಪತ್ರೆಯಲ್ಲಿ ಕ್ಷಯರೋಗ ಪರೀಕ್ಷೆಗಳನ್ನು ಉಚಿತವಾಗಿ ಮಾಡಲಾಗುತ್ತದೆ. ವೈದ್ಯರು ನೀಡುವ ಔಷಧಿಗಳನ್ನು ನಿರ್ಲಕ್ಷ್ಯ ತೋರದೆ ತೆಗೆದುಕೊಳ್ಳಬೇಕು. ಭಾರತವನ್ನು 2025ಕ್ಕೆ ಟಿ.ಬಿ ಕಾಯಿಲೆ ಮುಕ್ತ ದೇಶವನ್ನಾಗಿಸಬೇಕು. ಟಿ.ಬಿ ಕಾಯಿಲೆ ಇರುವವರಿಗೆ ರಾಜ್ಯ ಸರ್ಕಾರ ನಿಕ್ಷಯ ಪೋಷಣ ಯೋಜನೆಯಡಿ ಒಂದು ಸಾವಿರ ರೂ. ಗಳನ್ನು ನೀಡುತ್ತದೆ. ಅದರಿಂದಾಗಿ ಟಿ.ಬಿಯಿಂದ ಬಳಲುತ್ತಿರುವವರು ಪೋಷಕಾಂಶವುಳ್ಳ ಆಹಾರವನ್ನು ಸೇವಿಸಬೇಕು ಎಂದು ಹೇಳಿದರು.

ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ರಾಜು ಅವರು ಮಾತನಾಡಿ, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ನಿಶ್ಚಯ ಕಿಟ್ ನೀಡುವ ಮೂಲಕ ಮಹಿಳೆಯರು ಗರ್ಭಧರಿಸಿರುವುದನ್ನು ಖಚಿತಪಡಿಸಿಕೊಂಡು ನೋಂದಾಯಿಸಿಕೊಳ್ಳುತ್ತಾರೆ ಎಂದರು.

ಆರೋಗ್ಯ ಕಾರ್ಯಕರ್ತೆಯರ ಮೂಲಕ ನೋಂದಾಯಿಸಿಕೊಂಡ ಎಲ್ಲಾ ಗರ್ಭಿಣಿಯರಿಗೆ ತಾಯಿ ಕಾರ್ಡ್ ಉಚಿತವಾಗಿ ನೀಡಲಾಗುತ್ತದೆ. ಗರ್ಭಿಣಿಯರಿಗೆ ಹಾಗೂ ಮಗುವಿಗೆ ನೀಡಲಾದ ಸಮಗ್ರ ಆರೋಗ್ಯ ಸೇವೆಗಳ ಮಾಹಿತಿಯನ್ನು ದಾಖಲಿಸಲು ಹಾಗೂ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ ಸೇವಾ ಸೌಲಭ್ಯಗಳನ್ನು ಪಡೆಯಲು ಇದು ಪ್ರಮುಖ ದಾಖಲೆಯಾಗಿದ್ದು, ವಿಶೇಷ ಸಾರ್ವತ್ರಿಕ ಸಂಖ್ಯೆಯನ್ನು ಹೊಂದಿರುತ್ತದೆ ಎಂದು ಹೇಳಿದರು.

ಧನುರ್ವಾಯು ಲಸಿಕೆಗಳು, ಕಬ್ಬಿಣಾಂಶದ ಮಾತ್ರೆ ಕಾಲಕಾಲಕ್ಕೆ ವೈದ್ಯಕೀಯ ಪರೀಕ್ಷೆ ಮತ್ತು ಚಿಕಿತ್ಸೆ ಹಾಗೂ ಐ.ಸಿ.ಟಿ.ಸಿ ಕೇಂದ್ರಗಳಲ್ಲಿ ಉಚಿತ ಎಚ್.ಐ.ವಿ ಪರೀಕ್ಷೆ, ಉಚಿತ ಪ್ರಯೋಗಾಲಯ ಪರೀಕ್ಷೆಗಳು ಮತ್ತು ಸಕಾಲದಲ್ಲಿ ಹೆರಿಗೆಗಾಗಿ 108 ವಾಹನ ಸೌಲಭ್ಯ, ಜನನಿ ಸುರಕ್ಷಾ ಯೋಜನೆ ಹಾಗೂ ನಗು ಮಗು ವಾಹನ ಸೇವೆಗಳನ್ನು ಒದಗಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಮಂಜುನಾಥ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತಾ, ಜಿಲ್ಲಾ ಆರೋಗ್ಯ ಮೇಲ್ವಿಚಾರಕರಾದ ರಾಜೇಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಖಾಸಗಿ ವಾಹನಗಳ ಮೇಲೆ ಅನಧಿಕೃತ ಸ್ಟ್ರೋಬ್ ಲೈಟ್‌ಗಳು

**ಬೆಂಗಳೂರು:** ರಸ್ತೆ ಸುರಕ್ಷತೆಯನ್ನು ಹೆಚ್ಚಿಸುವ ಮತ್ತು ಕಾನೂನು ಮಾನದಂಡಗಳ ಅನುಸರಣೆಯನ್ನು ಖಾತ್ರಿಪಡಿಸುವ ಗುರಿಯನ್ನು ಹೊಂದಿರುವ ಮಹತ್ವದ ಕ್ರಮದಲ್ಲಿ, ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ವಿರೋಧಿ ಸಂಸ್ಥೆ ನವದೆಹಲಿ , ಮೀಡಿಯಾ ವಿಂಗ್ ನ್ಯಾಷನಲ್ ವೈಸ್ ಪ್ರೆಸಿಡೆಂಟ್- ಜಾನ್ ಪ್ರೇಮ್ ಜೆ ಅವರು ಜಂಟಿ ಪೊಲೀಸ್ ಕಮಿಷನರ್ (ಸಂಚಾರ) ಅವರಿಗೆ ಔಪಚಾರಿಕ ಪತ್ರವನ್ನು ಸಲ್ಲಿಸಿದರು.

ಮಾನವ ಹಕ್ಕುಗಳು ಪ್ರಕಾರ, ಖಾಸಗಿ ವಾಹನಗಳಲ್ಲಿ ಈ ದೀಪಗಳನ್ನು ಬಳಸುವುದರಿಂದ ಸಂಚಾರ ನಿಯಮ ಉಲ್ಲಂಘನೆ ಮಾತ್ರವಲ್ಲದೆ ರಸ್ತೆಯಲ್ಲಿ ಅನಗತ್ಯ ತೊಂದರೆ ಮತ್ತು ಗೊಂದಲವೂ ಉಂಟಾಗುತ್ತದೆ. ಅಂತಹ ವಾಹನಗಳು ಸಾಮಾನ್ಯವಾಗಿ ಟ್ರಾಫಿಕ್ ಅನ್ನು ಹೆಚ್ಚು ಆಕ್ರಮಣಕಾರಿಯಾಗಿ ನಡೆಸಲು ಪ್ರಯತ್ನಿಸುತ್ತವೆ. ಇದು ಇತರ ರಸ್ತೆ ಬಳಕೆದಾರರಿಗೆ ಅನಾನುಕೂಲತೆಯನ್ನು ಉಂಟುಮಾಡುತ್ತದೆ ಮತ್ತು ಸಾರ್ವಜನಿಕರ ಸುರಕ್ಷತೆಗೆ ಅಪಾಯವನ್ನುಂಟುಮಾಡುತ್ತದೆ.

ಕಾರುಗಳು ಮತ್ತು ದ್ವಿಚಕ್ರ ವಾಹನಗಳು ಸೇರಿದಂತೆ ಹಲವಾರು ಖಾಸಗಿ ವಾಹನಗಳು ಮಿನುಗುವ ತುರ್ತು ದೀಪಗಳೊಂದಿಗೆ ರಸ್ತೆಗಳಲ್ಲಿ ಆಗಾಗ್ಗೆ ಕಂಡುಬರುತ್ತವೆ. ಇವುಗಳನ್ನು ಸಾಮಾನ್ಯವಾಗಿ ತುರ್ತು ವಾಹನಗಳಾದ ಆಂಬ್ಯುಲೆನ್ಸ್‌ಗಳು, ಅಗ್ನಿಶಾಮಕ ವಾಹನಗಳು ಮತ್ತು ಪೊಲೀಸ್ ವಾಹನಗಳಿಗೆ ಮೀಸಲಿಡಲಾಗಿದೆ. ಮುಂಭಾಗದ ಗ್ರಿಲ್‌ನಲ್ಲಿ ಅಥವಾ ಡ್ಯಾಶ್‌ಬೋರ್ಡ್‌ನಲ್ಲಿ ನೀಲಿ ಮತ್ತು ಕೆಂಪು ಮಿನುಗುವ ಎಲ್‌ಇಡಿ ದೀಪಗಳನ್ನು ಹೊಂದಿರುವ ಅನೇಕ ವಾಹನಗಳನ್ನು ಕಾಣಬಹುದು.

ಕೇಂದ್ರ ಮೋಟಾರು ವಾಹನಗಳ ನಿಯಮಗಳು, 1989ರ ನಿಯಮ ಸಂಖ್ಯೆ 108ರಂತೆ ಯಾವುದೇ ಖಾಸಗಿ ಮೋಟಾರು ವಾಹನಗಳು ಬಹು-ಬಣ್ಣದ ಕೆಂಪು, ನೀಲಿ ಮತ್ತು ಬಿಳಿ ದೀಪಗಳನ್ನು ಬಳಸಲು ಅನುಮತಿಸುವುದಿಲ್ಲ. ತುರ್ತು ಮತ್ತು ವಿಪತ್ತು ನಿರ್ವಹಣಾ ಸಿಬ್ಬಂದಿಯಂತಹ ನಿರ್ದಿಷ್ಟವಾಗಿ ಗೊತ್ತುಪಡಿಸಿದ ವಾಹನಗಳ ಬಳಕೆಗಾಗಿ ಈ ದೀಪಗಳನ್ನು ಕಾಯ್ದಿರಿಸಲಾಗಿದೆ.

ಈ ವಿಷಯದ ಕುರಿತು ಮಾತನಾಡಿದ ಮಾನವ ಹಕ್ಕುಗಳ ಕಾರ್ಯಕರ್ತ ಜಾನ್ ಪ್ರೇಮ್, "ರಸ್ತೆ ಸುರಕ್ಷತೆ, ಮೂಲಭೂತ ಹಕ್ಕು, ಮತ್ತು ಅನಧಿಕೃತ ಮಾರ್ಪಾಡುಗಳ ಅಜಾಗರೂಕ ಬಳಕೆಯಿಂದ ಯಾವುದೇ ವ್ಯಕ್ತಿ ತಮ್ಮ ಸುರಕ್ಷತೆಯನ್ನು ರಾಜಿ ಮಾಡಿಕೊಳ್ಳಬಾರದು. ಈ ಅಪಾಯಕಾರಿ ಅಭ್ಯಾಸವನ್ನು ತಡೆಯಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಇದು ಸೂಕ್ತ ಸಮಯ." ಎಂದು ತಮ್ಮ ಕಳವಳ ವ್ಯಕ್ತಪಡಿಸಿದ್ದಾರೆ.

ಈ ಸಮಸ್ಯೆಯನ್ನು ತ್ವರಿತವಾಗಿ ಪರಿಹರಿಸಲು, ಎಲ್ಲಾ ರಸ್ತೆ ಬಳಕೆದಾರರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು, ಅಸ್ತಿತ್ವದಲ್ಲಿರುವ ಕಾನೂನುಗಳನ್ನು ಜಾರಿಗೊಳಿಸಲು ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದ್ದಾರೆ.

# ಭೂಸ್ವಾಧೀನಾಧಿಕಾರಿ, ತಹಶೀಲ್ದಾರ್ ವಿರುದ್ಧ ಗ್ರಾಮಸ್ಥರ ಧಿಕ್ಕಾರ

**ಮಾಗಡಿ :** ತಾಲ್ಲೂಕಿನ ಕೆಂಪಾಪುರ ಕೆಂಪೇಗೌಡರ ವೀರ ಸಮಾಧಿಯನ್ನು 2ನೇ ಹಂತದಲ್ಲಿ ಭೂಸ್ವಾದೀನಗೊಳಿಸಿ ಕೊಳ್ಳುವ ಬಗ್ಗೆ ಗ್ರಾಮಕ್ಕೆ ಆಗಮಿಸಿದ ಭೂಸ್ವಾಧೀನಾಧಿಕಾರಿ, ತಹಶೀಲ್ದಾರ್ ವಿರುದ್ಧ ಗ್ರಾಮಸ್ಥರು ಧಿಕ್ಕಾರ ಕೂಗಿ, ಭೂಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸಿ ಕಚೇರಿ ಮುಂದೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿ ಆಕ್ರೋಶ ವ್ಯಕ್ತಪಡಿಸಿದರು.



ತಾಲೂಕಿನ ಕೆಂಪಾಪುರ ಗ್ರಾಮದಲ್ಲಿನ ಕೆಂಪೇಗೌಡರ ವೀರಸಮಾಧಿಯನ್ನು ಅಭಿವೃದ್ಧಿ ಪಡಿಸಲು ಪೂರ್ವಭಾವಿ ಸಭೆಕರೆಯಲಾಗಿತ್ತು .ಈ ವೇಳೆ ಸ್ಥಳಕ್ಕೆ ಜಿಲ್ಲಾ ಭೂಸ್ವಾಧೀನಾಧಿಕಾರಿ ವಿಶ್ವನಾಥ್, ತಹಶೀಲ್ದಾರ್ ಶರತ್ ಕುಮಾರ್, ಇಒ ಜಯಪಾಲ್‌ಹಾಗೂ ಕಂದಾಯ ಅಧಿಕಾರಿಗಳು ಬೇಟಿ ನೀಡಿದರು ಈ ವೇಳೆ ಗ್ರಾಮಸ್ಥರು ಪೂರ್ವಿಕರ ಕಾಲದಿಂದ ಕೆಂಪೇಗೌಡರ ವೀರಸಮಾಧಿಯನ್ನು ಸಂರಕ್ಷಿಸಿಕೊಂಡು ಬಂದಿದ್ದೇವೆ ಸಮಾಧಿ ಸ್ಥಳ ಅಭಿವೃದ್ಧಿಯಾಗಬೇಕು ಎಂದು ನಮಗೂ ಆಸೆ ಅದರಂತೆ ಈ ಗಾಗಲೇ 10,21 ಎಕರೆ ಭೂಮಿಯನ್ನು ಗ್ರಾಮಸ್ಥರು ನೀಡಿದ್ದೇವೆ

ಈಗ ನಮಗೆ ಅಲ್ಪಸಲ್ಪ ಭೂಮಿ ಮಾತ್ರ ಇದೆ ಮತ್ತೆ 9,38 ಎಕರೆ ಭೂಸ್ವಾಧೀನಪಡಿಸಿಕೊಂಡರೆ ಒಂದು ಅಡಿಜಾಗ ನಮಗಿರುವುದಿಲ್ಲ ಈಗಾದರೆ ನಾವು ಗ್ರಾಮವನ್ನು ತೊರೆದು ಎಲ್ಲಿಗೆ ಹೋಗಲು ಸಾಧ್ಯ. ಪರ್ಯಾಯವಾಗಿ ಜಮೀನು, ವಸತಿ, ಮನೆ ನಿರ್ಮಿಸಿಕೊಡರೆ ಏಕಾಏಕಿ ಒಕ್ಕಲು ಎಬ್ಬಿಸಿದರೆ ಗ್ರಾಮಸ್ಥರು ಸಾಮೂಹಿಕ ವಾಗಿ ವಿಷ ಕುಡಿದು ಆತ್ಮಹತ್ಯೆ ಮಾಡಿಕೊಳ್ಳಬೇಕಾಗುತ್ತದೆ

ಯಾವುದೇ ಕಾರಣಕ್ಕೂ ನಮ್ಮ ಜಮೀನು ಬಿಟ್ಟುಕೊಡುವುದಿಲ್ಲ ಸಮಾಧಿಯನ್ನು ಸಂರಕ್ಷಿಸಿಕೊಂಡು ಬಂದಿರುವುದೆ ತಪ್ಪ ಇದೇ ರೀತಿ ಮುಂದುವರೆದರೆ ಕೆಂಪೇಗೌಡ ಜಂಯೋತ್ಯೋತ್ಸವಕ್ಕೆ ಜ್ಯೋತಿ ಕೋಡೋಯ್ಯಲು ಬಿಡುವುದಿಲ್ಲ ಎಂದು ಅಧಿಕಾರಿಗಳನ್ನು ಗ್ರಾಮಸ್ಥರು ತರಾಟೆಗೆ ತೆಗೆದುಕೊಂಡರು.

ಅಭಿವೃದ್ಧಿಪಡಿಸಲು ನೀಡಿರುವ ಜಾಗವನ್ನು ಅಭಿವೃದ್ಧಿಪಡಿಸಿ, ಬೇರೆಡೆ ನಿಗಧಿಪಡಿಸಿರುವ ಜಾಗಕ್ಕೆ ಹಕ್ಕು ಪತ್ರ ನೀಡಿ ಮನೆ ಸೇರಿದಂತೆ ಮೂಲಭೂತ ವ್ಯವಸ್ಥೆ ಕಲ್ಪಿಸಿಕೊಡುವಂತೆ ಗ್ರಾಮಸ್ಥರು ಒತ್ತಾಯಿಸಿದರು.

ಗ್ರಾಮದ ಮುಖಂಡ ಕೆ.ಎಚ್. ಹರೀಶ್ ಮಾತನಾಡಿ, 10 ವರ್ಷಕಳೆದರು ಅಭಿವೃದ್ದಿಗೊಳಿಸಲು ಸರಕಾರವಾಗಲಿ ಶಾಸಕರಾಗಲಿ ಮುಂದಾಗಿಲ್ಲ, ಎರಡನೇ ಹಂತದ ಜಮೀನು ಭೂಸ್ವಾಧೀನಗೊಳಿಸಬಾರದು ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಅವರಿಗೆ ಸಾಕಷ್ಟು ಭಾರಿ ಮನವಿ ನೀಡಲಾಗಿದೆ ಆದರೂ ಭೂಸ್ವಾಧೀನಗೊಳಿಸಿಕೊಳ್ಳಲು ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸಿರುವುದು ಬೇಸರ ಮೂಡಿದೆ, ನಾನು ಶಾಸಕರ ಪರವಾಗಿದ್ದು ಮುಂದೆ ಅವರ ಪರ ಗ್ರಾಮದಲ್ಲಿ ಮತಕೇಳಲು ಮುಂದಾದರೆ ಜನತೆ ವಿರೋಧ ವ್ಯಕ್ತಪಡಿಸುತ್ತಾರೆ ಇದಕ್ಕೆ ಶಾಸಕರು ಅವಕಾಶ ಕಲ್ಪಿಸದೆ ಭೂಸ್ವಾಧೀನ ಪಡಿಸುವ ಕೆಲಸ ಕೈಬಿಟ್ಟು ಈಗಿರುವ ಜಾಗವನ್ನು ಅಭಿವೃದ್ಧಿಪಡಿಸಲಿ ಇಲ್ಲದಿದ್ದರೆ ಮುಂದಾಗುವ ಅನಾಹುತಕ್ಕೆ ಶಾಸಕರು ಹಾಗೂ ಜಿಲ್ಲಾಡಳಿತ ಹೊಣೆಗಾರರಾಗುತ್ತಾರೆ ಎಂದು ಆರೋಪಿಸಿದರು.

ಇಲ್ಲಿನ ಜನರನ್ನು ಒಕ್ಕಲೆಬ್ಬಿಸಿ ಮತಷ್ಟು ಜಾಗ ಕಬಳಿಸುವ ಕೆಲಸಮಾಡುತ್ತಿದ್ದಾರೆ. ಈಗಾಗಲೇ ಗ್ರಾಮಠಾಣ ಜಾಗ, ಕೆರೆಯ ಬಳಿಯ ಜಾಗದವರೆಗೆ ಭೂಮಿ ಬಿಟ್ಟುಕೊಡಲಾಗಿದೆ ಇಲ್ಲಿ ಅಭಿವೃದ್ದಿಗೊಳಿಸಲಿ, ಎರಡನೇ ಹಂತದ ಭೂಸ್ವಾಧೀನಮಾಡಿಕೊಡಲು ಜೀವ ಬಿಟ್ಟರು ಅವಕಾಶ ನೀಡುವುದಿಲ್ಲ, ಹಕ್ಕು ಪತ್ರ ವಿಳಂಬವಾದರೆ ಮನೆಗಳು ಬಿದ್ದು ಹಾನಿ ಉಂಟಾದರೆ ತಾಲೂಕು, ಜಿಲ್ಲಾಡಳಿತ ಹೊಣೆಯಾಗುತ್ತಾರೆ ಗ್ರಾಮದ ಪ್ರತಿಯೊಬ್ಬರಿಗೂ ಒಂದೆಡೆ ನಿವೇಶ ಕಲ್ಪಿಸಿ ಹಕ್ಕುಪತ್ರ ನೀಡಬೇಕು,

ಒಂದೆಡೆ ವಾಸವಾಡುವಂತೆ ಮಾಡಬೇಕು, ಅಂಗನವಾಡಿ, ಶಾಲೆಗಳನ್ನು ನಿರ್ಮಿಸಬೇಕು, ಕೆಲವರಿ ಅರ್ಧ ನಿವೇಶನ ಕೆಲವರಿಗೆ ಒಂದು ನಿವೇಶನ ನೀಡುತ್ತೇನೆ ಎಂದರೆ ಒಪ್ಪುವುದಿಲ್ಲ ಎಲ್ಲರಿಗೂ ಸರಿಸಮನವಾಗಿ ನೀಡಬೇಕು, ಗ್ರಾಮದ ಬಳಿ ಸಾಕಷ್ಟು ಗೋಮಾಳದ ಜಾಗ ಲಭ್ಯತೆ ಇದೆ ಆ ಜಾಗದಲ್ಲಿ ದೊಡ್ಡ ಮಟ್ಟದಲ್ಲಿ ಹೊಸ ಗ್ರಾಮ ನಿರ್ಮಿಸಿ ಅಭಿವೃದ್ದಿಗೊಳಿಸಿಕೊಟ್ಟರೆ ಮಾತ್ರ ಮೊದಲು ನೀಡಿರುವ ಜಾಗದಲ್ಲಿ ಅಭಿವೃದ್ದಿಗೊಳಿಸಲು ಗ್ರಾಮಸ್ಥರು ಸಹಕಾರ ನೀಡುವುದಾಗಿ ಅಧಿಕಾರಿಗಳಿಗೆ ತಿಳಿಸಿದರು.

ಗ್ರಾಮಸ್ಥ ಮಂಜುನಾಥ್ ಮಾತನಾಡಿ, ಕೆಂಪೇಗೌಡರ ಹೆಸರು ಉಳಿಯಲಿ ಎಂದು ಭೂಮಿ ನೀಡಿದ್ದೇವೆ ಆ ಭೂಸ್ವಾಧೀನದ ಹಣ ನೀಡಿದ್ದಾರೆ ಆಹಣಕ್ಕೆ ಎಲ್ಲೂ ಭೂಮಿ ಸಿಗುತ್ತಿಲ್ಲ. ನಿವೇಶನ ನೀಡಿ ಮನೆ ನಿರ್ಮಿಸಿಕೊಡುತ್ತೇನೆ ಎಂಬ ಆಶ್ವಾಸನೆ ನೀಡಿದರು ಅದರಂತೆ ಅಧಿಕಾರಿಗಳು ನಡೆದುಕೊಳ್ಳುತ್ತಿಲ್ಲ ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗ್ರಾ.ಪಂ. ಮಾಜಿ ಸದಸ್ಯ ಹನುಮಂತಯ್ಯ, ಗ್ರಾಮಸ್ಥರಾದ ರಾಜಣ್ಣ, ಮಂಜುನಾಥ್, ನರಸೇಗೌಡ, ಬೆಟ್ಟಸ್ವಾಮಿ, ತಿಮ್ಮಯ್ಯ, ಮಾಯಣ್ಣ, ರಾಮಣ್ಣ, ರಂಗಸ್ವಾಮಿ, ಹನುಮಯ್ಯ, ಬೋರಯ್ಯ, ಕುಮಾರು, ರಾಮಚಂದ್ರಯ್ಯ, ಶಾರದಮ್ಮ, ಕಲ್ಯಾಣಮ್ಮ, ನರಸಿಂಹಮೂರ್ತಿ, ಕಮಲಮ್ಮ, ಗಂಗನರಸಮ್ಮ, ಪಿಡಿಒ ಶಿವಕುಮಾರು, ಗ್ರಾಮ ಲೆಕ್ಕಾಧಿಕಾರಿ ನಾಗರಾಜು ಇತರರು ಇದ್ದರು.

# ಮಕ್ಕಳು ಶಿಕ್ಷಣ ಜೊತೆಗೆ ಸಂಸ್ಕಾರವನ್ನು ಬೆಳೆಸಿಕೊಳ್ಳಬೇಕು



**ಹನೂರು:** ಮಕ್ಕಳು ಶಿಕ್ಷಣ ಜೊತೆಗೆ ಸಂಸ್ಕಾರವನ್ನು ಬೆಳೆಸಿಕೊಳ್ಳಬೇಕು. ತಂದೆ ತಾಯಿಯರಿಗೆ ಗುರುಹಿರಿಯರಿಗೆ ಗೌರವವನ್ನು ನೀಡಿ ಪ್ರತಿಭಾನ್ವಿತರಾಗಿ ಬೆಳೆಯಬೇಕು ಎಂದು ಶಾಲೆಯ ಮುಖ್ಯ ಶಿಕ್ಷಕ ವೀರಪ್ಪ ಅವರು ಮಕ್ಕಳಿಗೆ ಸಲಹೆ ನೀಡಿದರು. ತಾಲೂಕಿನ ಬಸಪ್ಪನ ದೊಡ್ಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ 8ನೇ ತರಗತಿ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭ ಹಾಗೂ ಸರಸ್ವತಿ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಶಾಲೆಯ ಮಕ್ಕಳು ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನ ಕೊಡಬೇಕು. ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಪ್ರತಿಭೆಯ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವ ಮೂಲಕ ಉತ್ತಮ ಬೆಳವಣಿಗೆಯತ್ತ ಸಾಗಬೇಕು. ವಿದ್ಯಾರ್ಥಿಗಳ ಮುಂದಿನ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

ನಮ್ಮ ಶಾಲೆಯಲ್ಲಿ ಎಂಟನೇ ತರಗತಿಯ ನಂತರ 9ನೇ– 10ನೇ ತರಗತಿಗೆ ಪ್ರಾರಂಭಿಸಲು ಅನುಮತಿ ನೀಡಲು ಶಿಕ್ಷಣ ಇಲಾಖೆಗೆ ಅನುಮೋದನೆಗೆ ಮನವಿಯನ್ನು ಸಲ್ಲಿಸಲಾಗುವುದು. ಇದರಿಂದ ಈ ಭಾಗದ ಅಕ್ಕಪಕ್ಕದ ಹಳ್ಳಿಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಶಾಲೆಯಲ್ಲಿ ಆವರಣ ಹೆಚ್ಚಾಗಿರುವುದರಿಂದ ಇಲ್ಲಿ ಕ್ರೀಡಾ ಚಟುವಟಿಕೆಗಳಿಗೂ ಸೇರಿದಂತೆ ಹೆಚ್ಚುವರಿ ಕಟ್ಟಡ ನಿರ್ಮಾಣ ಮಾಡಲು ಅವಕಾಶ ಇರುತ್ತದೆ. ಇದರ ಬಗ್ಗೆ ಗ್ರಾಮಸ್ಥರ ಸಹಕಾರದಿಂದ ಶಿಕ್ಷಣ ಇಲಾಖೆ ಹಾಗೂ ಶಾಸಕರಿಗೆ ಮನವಿಯನ್ನು ಸಹ ಸಲ್ಲಿಸಲು ತಿಳಿಸಲಾಗುವುದು ಎಂದು ತಿಳಿಸಿದರು.

8ನೇ ತರಗತಿಯಿಂದ ಮುಂದಿನ ವಿದ್ಯಾಭ್ಯಾಸಕ್ಕಾಗಿ ತೆರಳುವ ಮಕ್ಕಳಿಗೆ ಬಿಳ್ಕೊಡುಗೆ ಸಮಾರಂಭ ಹಾಗೂ ಸರಸ್ವತಿ ಪೂಜಾ ಕಾರ್ಯಕ್ರಮದಲ್ಲಿ ಸಿಹಿ ಕೇಕ್ ತಿನಿಸಿ ಮಕ್ಕಳ ಮುಂದಿನ ಶೈಕ್ಷಣಿಕ ಪ್ರಗತಿ ಉಜ್ವಲವಾಗಲಿ ಎಂದು ಶಾಲೆಯ ಎಲ್ಲಾ ಶಿಕ್ಷಕರುಗಳು ಶುಭ ಹಾರೈಸಿದರು.

ಉತ್ತಮ ಶಾಲೆಯ ಪರಿಸರ ಮಕ್ಕಳ ಜೊತೆಗಿನ ಸ್ನೇಹ ಬಾಂಧವ್ಯದಿಂದ ಒಡನಾಟದ ನೆನಪುಗಳು ಶಿಕ್ಷಕರನ್ನು ತೊರೆಯಬೇಕೆಂದು ಭಾವುಕರಾದ ಶಾಲೆಯ ಮಕ್ಕಳು ಕಣ್ಣೀರು ಹಾಕಿದರು. ಶಾಲೆಯ ಶಿಕ್ಷಕರ ಒಡನಾಟದ ಬಗ್ಗೆ ಸ್ಮರಿಸಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ದೊರೆಸ್ವಾಮಿ, ಸೋಮಣ್ಣ, ಆನಂದ್, ಮುತ್ತಮ್ಮ, ರಾಮು, ಸುಧಾಮಣಿ, ಮಾಲಾ ಹಾಗೂ ಶಾಲೆಯ ವಿದ್ಯಾರ್ಥಿಗಳು ಇದ್ದರು.

# ರಾಮ ನಾಮ ಜಯ ಸಾರುವ ತಾರಕರಾಮ ಮಂತ್ರದಲ್ಲಿ ಅಡಗಿವೆ

**ದೇವನಹಳ್ಳಿ :** ಎಲ್ಲಾ ಹೋಮ, ಹವನ–ಪೂಜೆ–ಪುನಸ್ಕಾರ, ಜಪ–ತಪಗಳ ಎಲ್ಲಾ ಸಾರಗಳು, ಓಂ ನಮಃ ಶಿವಾಯ ಎಂದು ಹೇಳುವ ಶಿವ ಪಂಚಾಕ್ಷರಿ ಮಹಾಮಂತ್ರದಲ್ಲಿ, ರಾಮ ನಾಮ ಜಯ ಸಾರುವ ತಾರಕರಾಮ ಮಂತ್ರದಲ್ಲಿ ಅಡಗಿವೆ ಎಂದು ಸ್ಫಟಿಕಪುರಿಯ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಂಜಾವಧೂತ ಸ್ವಾಮೀಜಿರವರು ತಿಳಿಸಿದ್ದಾರೆ.

ಅವರು ವಿಜಯಪುರ ಪಟ್ಟಣದಗುರಪ್ಪನ ಮಠದಲ್ಲಿ ಶಿವಸಪ್ತಹ ಹಾಗೂ ಪ್ರಸನ್ನ ಶ್ರೀ ಓಂಕಾರೇಶ್ವರ ಸ್ವಾಮಿಕಲ್ಲುಗಾಲಿ ಬ್ರಹ್ಮರಥೋತ್ಸವಕ್ಕೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ದೇಶದ 12 ಜ್ಯೋತಿರ್ಲಿಂಗಗಳಲ್ಲಿ ಒಂದಾಗಿರುವ ಓಂಕಾರೇಶ್ವರ ಸ್ವಾಮಿ ಬ್ರಹ್ಮರಥೋತ್ಸವವು ವಿಜೃಂಭಣೆಯಿಂದ ನಡೆಯುತ್ತಿದ್ದು, ಇಲ್ಲಿನ ಮಠವನ್ನು ಕುಂಭೇಶಪುರಿ ಎಂತಲೂ, ಶಿರಾದಲ್ಲಿನ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ಮಠವನ್ನು ಸ್ಫಟಿಕಪುರಿ ಎಂತಲೂ ಕರೆಯಲಾಗುತ್ತಿದೆ ಎಂದು ತಿಳಿಸಿದರು.



ಶ್ರೀ ಓಂಕಾರೇಶ್ವರ ಸ್ವಾಮಿರಥೋತ್ಸವದ

ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಶಿವ ಪಂಚಾಕ್ಷರಿ ಮಹಾಮಂತ್ರ ಭಜನೆ ಕಾರ್ಯಕ್ರಮದಲ್ಲಿ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ಭಜನಾ ಭಕ್ತ ಮಂಡಳಿ ಭಕ್ತರು ಪಾಲ್ಗೊಂಡಿದ್ದರು.

ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಮಂದಿ ಬ್ರಹ್ಮರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

ಬಾಳೇಹಣ್ಣು, ದವಣವನ್ನು ಎಸೆದು ತಮ್ಮ ಇಷ್ಟಾರ್ಥಗಳನ್ನು ನೆರವೇರಿಸುವಂತೆ ಪ್ರಾರ್ಥನೆ ಸಲ್ಲಿಸಿದರು.

ರಸ್ತೆಯುದ್ಧಕ್ಕೂ ವಿವಿಧಅಟಿಕೆ ಸಾಮಾನುಗಳ ಅಂಗಡಿಗಳು, ಸಿಹಿ ತಿಂಡಿ ತಿನಿಸುಗಳ ಅಂಗಡಿಗಳನ್ನು ತೆರೆಯಲಾಗಿತ್ತು.ಅಲೆಮಾರಿ ವ್ಯಾಪಾರಿಗಳು, ಜಾತ್ರೆಯಲ್ಲಿ ವ್ಯಾಪಾರ ವಹಿವಾಟು ಮಾಡಿಕೊಂಡರು.

ಈ ಸಂದರ್ಭದಲ್ಲಿ ಶ್ರೀ ಓಂಕಾರೇಶ್ವರ ಸ್ವಾಮಿ ಒಕ್ಕಲಿಗರ ಪ್ರಶ್ನಟ್ರಸ್ಟ್‌ನ ಕೇಶವಪ್ಪ, ಎಂ ವೀರಣ್ಣ, ವಿಎಂ ನಾಗರಾಜು, ಮಹೇಶ್, ಪುರಸಭಾ ಸದಸ್ಯರಾದ ಸಿ ನಾರಾಯಣಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

# ಕುಡಿಯುವ ನೀರು ಸಮಸ್ಯೆ ಸ್ಪಂದನೆಗೆ ಪತ್ರ

**ಕುಕನೂರು :** ಬಿಸಿಲ ಬೇಗೆ ಹೆಚ್ಚಾಗುತ್ತಿದ್ದಂತೆ ಯಲಬುರ್ಗಾ ಮತ್ತು ಕುಕನೂರು ಅವಳಿ ತಾಲೂಕಿನಲ್ಲಿ ಕುಡಿಯುವ ನೀರಿನ ಅಭಾವ ಹಲವಡೆ ಕಂಡು ಬರುತ್ತಿದೆ. ಸೂಕ್ತ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸುವಂತೆ ಕೊಪ್ಪಳ ಜಿಲ್ಲಾ ಪಂಚಾಯತ್ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಗ್ರಾಮ ಪಂಚಾಯತ್ ಸದಸ್ಯ ಯಮನೂರಪ್ಪ ಕಟ್ಟಿಮನಿ ಪತ್ರ ಬರೆದು ಮನವಿ ಮಾಡಿಕೊಂಡಿದ್ದಾರೆ.

ತಾಲ್ಲೂಕಿನಲ್ಲಿ ಬಿಸಿಲು ತಾಪಮಾನ ಹೆಚ್ಚುತ್ತಿದೆ. ಜನ ಜಾನುವಾರು ಗಳಿಗೆ ನೀರಿನ ಕೊರತೆ ಉಂಟಾಗದಂತೆ ಮುಂಜಾಗ್ರತೆ ವಹಿಸಲು ತಾಲೂಕಿನ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಕ್ರಮ ಕೈಕೊಳ್ಳಲು ಸೂಚಿಸಬೇಕು ಎಂದು ಬಳಗೇರಿ ಗ್ರಾಮ ಪಂಚಾಯತ್ ಸದಸ್ಯ ಯಮನೂರಪ್ಪ ಕಟ್ಟಿಮನಿ ಸಾರ್ವಜನಿಕ ಹಿತದೃಷ್ಟಿಯಿಂದ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಪತ್ರದ ಮೂಲಕ ಮನವಿ ಮಾಡಿಕೊಂಡಿದ್ದಾರೆ.

# ಉದ್ದೇಶ ಪೂರ್ವಕವಾಗಿ ಶಾಸಕರನ್ನು ಪ್ರಚೋದಿಸಲಾಗಿದೆ

**ಚಿಕ್ಕಬಳ್ಳಾಪುರ:** ಬೆಂಗಳೂರಿನಲ್ಲಿ ನಡೆದ ಕೈವಾರ ತಾತಯ್ಯ ಜಯಂತಿ ಸಂಧರ್ಭದಲ್ಲಿ ಶಾಸಕ ಪ್ರದೀಪ್ ಈಶ್ವರ್ ಹಾಗೂ ಸಮುದಾಯದ ಮುಖಂಡರ ನಡುವೆ ಮಾತಿನ ಸಂಘರ್ಷ ಸಂಭಂದಪಟ್ಟಾಗಿ ನಗರದ ಪತ್ರಕರ್ತರ ಭವನದಲ್ಲಿ ಬಲಿಜ ಸಮುದಾಯದ ಮುಖಂಡರು ಪತ್ರಿಕಾಗೋಷ್ಠಿ ನಡೆಸಿದರು.

ಮುಖಂಡರಾದವೆಂಕಟನಾರಾಯಣಪ್ಪ,ಡಾ ನ್ಸ್ ಶ್ರೀನಿವಾಸ್,ವಿ. ಸುರೇಶ್,ಜೋಳದ ಕಿಟ್ಟಿ ರವರು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಘಟನೆ ಉದ್ದೇಶ ಪೂರ್ವಕವಾಗಿ ಶಾಸಕರನ್ನು ಪ್ರಚೋದಿಸಲಾಗಿದೆ ಎಂದರು. ವೆಂಕಟನಾರಾಯಣಪ್ಪ ಮಾತನಾಡಿ ಬಲಿಜ ಜನಾಂಗದ ಅನುಕೂಲಕ್ಕಾಗಿ 2ಎ ಮೀಸಲಾತಿ ತಂದೆ ತರುತ್ತೀನೆ ಎಂದು ಮುಂದಾಗಿರುವ ಶಾಸಕ ಪ್ರದೀಪ್ ಈಶ್ವರ್ ಅವರ ಕೈ ಬಲ ಪಡಿಸಬೇಕು ಮತ್ತು ಅವರಿಗೆ ಪ್ರೌತ್ಸಾಹಿಸಬೇಕಾಗಿದೆ. ಬೆಂಗಳೂರಿನ ಕಾರ್ಯಕ್ರಮದಲ್ಲಿ ಕೆಲ ಕಿಡಿಗೇಡಿಗಳು ಶಾಸಕರ ಭಾಷಣದ ವೇಳೆ ಉದ್ದೇಶಪೂರ್ವಕವಾಗಿ ಅವರನ್ನು ಪ್ರಚೋದಿಸಲು ಮುಂದಾಗಿದ್ದು ಅವರಿಗೆ ಶೊಭೆ ತರಲ್ಲ,ವೇದಿಕೆಯಲ್ಲಿ ಇದ್ದ ಮುಖಂಡರು ಕೂಡ ಭಾಷಣದಲ್ಲಿ ಅಡ್ಡಪಡಿಸಿದ್ದವರನ್ನು ಸಮಜಾಯಿಸಲು ಮುಂದಾಗಿಲ್ಲ ಅಂದಿನ ಘಟನೆಯ ಕುರಿತು ಸಮುದಾಯದ ಬಗ್ಗೆ ಸಮಾಜದಲ್ಲಿ ತಪ್ಪು ಸಂದೇಶ ರವಾನೆಯಾಗಿದೆ ಇನ್ನು ಅಂದಿನ ಕಾರ್ಯಕ್ರಮದಲ್ಲಿ ಸಂಸದರಾದ ಪಿ.ಸಿ.ಮೊಹನ್ ಹಾಗೂ ಶಾಸಕ ಪ್ರದೀಪ್ ಈಶ್ವರ್ ನಡುವೆ ಯಾವುದೇ ರೀತಿಯ ಘಟನೆ ನಡೆದಿಲ್ಲ ಇಬ್ಬರು ಬೇರೆ ಬೇರೆ ಪಕ್ಷದವರಾದರು ಜನಾಂಗದ ವಿಷಯ ಬಂದಾಗ ಒಗ್ಗಟ್ಟಿನ ಪ್ರದರ್ಶನ ನೀಡುವರು. ಯಾರೂ ಕಿಡಿಗೇಡಿಗಳು ಉದ್ದೇಶಪೂರ್ವಕವಾಗಿ ಕಾರ್ಯಕ್ರಮದಲ್ಲಿ ಗದ್ದಲ ಸೃಷ್ಟಿ ಆಗಿತ್ತು. ಯಾರು ಅದನ್ನು ಕಿವಿಕೂಡಬಾರದು ಸಮುದಾಯಧವರು ಒಗ್ಗಟ್ಟು ಪ್ರದರ್ಶಿಸಬೇಕು ಎಂದರು.ಬಲಿಜ ಸಮುದಾಯಕ್ಕೆ ಸೇರಿದ ರಾಜ್ಯದಲ್ಲಿ ಏಕೈಕ ಸಂಸದ ಪಿ.ಸಿ.ಮೋಹನ್ ಹಾಗೂ ಏಕೈಕ ಶಾಸಕ ಪ್ರದೀಪ್ ಈಶ್ವರ್ ಇಬ್ಬರು ನಮ್ಮ ಜನಾಂಗಕ್ಕೆ ಎರಡು ಕಣ್ಣು ಇದ್ದಹಾಗೆ ಸಮುದಾಯಕ್ಕೆ 2ಎ ಮೀಸಲಾತಿ ತರಲು ಪ್ರಯತ್ನ ಮಾಡಬೇಕು ಎಂದರು.

ಎಸ್.ಪಿ.ಶ್ರೀನಿವಾಸ್ ಮಾತನಾಡಿ ಈ ಹಿಂದೆ ಸಂಸದ ಪಿ.ಸಿ.ಮೋಹನ್ ರವರ ಜತೆಗಿದ್ದ ಸುರೇಶ್ ಎನ್ನುವ ಒಬ್ಬ ವ್ಯಕ್ತಿ ಶಾಸಕರ ಭಾಷಣದ ವೇಳೆ ಸಂಸದ ಪಿ.ಸಿ.ಮೋಹನ್ ಹಾಗೂ ಶಾಸಕ ಪ್ರದೀಪ್ ಈಶ್ವರ್ ನಡುವೆ ವೈಮನಸ್ಸು ಉಂಟುಮಾಡಲು ಉದ್ದೇಶಪೂರ್ವಕವಾಗಿ ಗದ್ದಲ ಸೃಷ್ಟಿಸಿ ಜನಾಂಗದಲ್ಲಿ ಒಡಕು ಉಂಟು ಮಾಡಲು ಪ್ರಯತ್ನಿಸಿದ್ದು ಸಂಸದರ ಮೇಲೆ ದ್ವೇಷಕ್ಕೆ ಈ ಕೃತ್ಯ ಎಸಗಿದ್ದಾನೆ ಇನ್ನು ಶಾಸಕರು ಸಂಸದ ಕೊಡುಗೆಗಳ ಬಗ್ಗೆ ಹಾಡಿ ಹೂಗಲಿದ್ದಾರೆ ವಾಸ್ತವವಾಗಿ ಶಾಸಕರ ಹಾಗೂ ಸಂಸದರ ನಡುವೆ ಏನು ನಡೆದಿಲ್ಲ ಜನಾಂಗದ ಮಾತು ಬಂದಾಗ ಎಲ್ಲರೂ ಒಟ್ಟಿಗೆ ಇದ್ದೇವೆ,ಇನ್ನು ವಿಧಾನಸಭೆಯಲ್ಲಿ ನಮ್ಮ ಜನಾಂಗಕ್ಕೆ ಪ್ರತಿನಿಧಿಸುವ ಏಕೈಕ ಶಾಸಕ ಪ್ರದೀಪ್ ಈಶ್ವರ್ ಜನಾಂಗದ ಪರವಾಗಿ ಗಟ್ಟಿಯಾಗಿ ನೇರವಾಗಿ ಮಾತಾಡುತ್ತಾರೆ. ಇನ್ನು ರಾಜ್ಯಮಟ್ಟದ ಜನಾಂಗದ ನಾಯಕರಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲಶಾಸಕರಾದ ಪ್ರದೀಪ್ ಈಶ್ವರ್ ಬಲಿಜ ಜನಾಂಗಕ್ಕೆ 2ಎ ತರಲು ಪ್ರಯತ್ನ ಮಾಡುತ್ತಿದ್ದಾರೆ ಎಂದರು.

ಕಾಂಗ್ರೆಸ್ ಮುಖಂಡ ಡ್ಯಾನ್ಸ್ ಶ್ರೀನಿವಾಸ್ ಮಾತನಾಡಿ, ಚಿಕ್ಕಬಳ್ಳಾಪುರದಲ್ಲಿ ರಾಜ್ಯದಲ್ಲೇಅದ್ದೂರಿ ಕೈವಾರ ಜಯಂತಿ ಆಚರಿಸಿ ಬೆಂಗಳೂರಿಗೆ ಹೋಗಿದ್ದ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಅಲ್ಲಿ

ಸರಿಯಾಗಿ ನಡೆಸಿಕೊಂಡಿಲ್ಲ, ಬೇಕೆಂದು ಗಲಾಟೆಯಾಗುವಂತೆಮಾಡಿದ್ದಾರೆ. ಇದರಲ್ಲಿ ಶಾಸಕ ಪ್ರದೀಪ್ ಈಶ್ವರ್ ಅವರ ತಪ್ಪೇನಿಲ್ಲ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೇಸ್ ಪ್ರಧಾನ ಕಾರ್ಯದರ್ಶಿ ಪ್ರೆಸ್ ಸೂರಿ, ಜೋಳದ ಕಿಟ್ಟಿ, ಇದ್ದರು.


# ರಾಜ್ಯ ಪುರಸ್ಕಾರ ಪ್ರಶಸ್ತಿ ಪತ್ರ

**ಶಿಡ್ಲಘಟ್ಟ :** ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯ ವತಿಯಿಂದ ಬೆಂಗಳೂರಿನ ರಾಜ ಭವನದಲ್ಲಿ 2023–24ನೇ ಸಾಲಿನ ರಾಜ್ಯ ಪುರಸ್ಕಾರ ಪ್ರಶಸ್ತಿ ಪತ್ರ ಪ್ರಧಾನ ಸಮಾರಂಭವನ್ನು ಮಾ.17ರಂದು ಆಯೋಜಿಸಲಾಗಿತ್ತು.

ಚಿಕ್ಕಬಳ್ಳಾಪುರ ಜಿಲ್ಲೆಯಿಂದ ಒಟ್ಟು 20 ವಿದ್ಯಾರ್ಥಿಗಳು ಆಯ್ಕೆಯಾಗಿದ್ದು ಶಿಡ್ಲಘಟ್ಟ ತಾಲ್ಲೂಕಿನ 8 ವಿಧ್ಯಾರ್ಥಿಗಳು ಆಯ್ಕೆಯಾಗಿದ್ದರು.

ರಾಜಭವನದ ಗಾಜಿನಮನೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲೆಯ ಪರವಾಗಿ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆ ಸರ್ಕಾರಿ ಪ್ರೌಢಶಾಲೆಯ ಸ್ಕೌಟ್ ವಿಧ್ಯಾರ್ಥಿ ಕೆ.ಎಸ್.ದುಶ್ಯಂತ್ ,ಬಿ.ಜಿ.ಎಸ್.ಶಾಲೆ ಹನುಮಂತಪುರ

ವಿದ್ಯಾರ್ಥಿ ಪಿ.ಆಧ್ಯಾಗೌಡ ಮತ್ತು ಗೌರಿಬಿದನೂರು ತಾಲ್ಲೂಕಿನ



ಮೇಳ್ಯ ಸರ್ಕಾರಿ ಪ್ರೌಢಶಾಲೆಯ ಗೈಡ್ ಪ್ರವಲಿಕ ರವರಿಗೆ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ರವರು ಪ್ರಶಸ್ತಿಪತ್ರ ಪ್ರಧಾನ ಮಾಡಿದರು.

ರಾಜ್ಯ ಪುರಸ್ಕಾರಕ್ಕೆ ಆಯ್ಕೆಯಾಗಿರುವ ಜಿಲ್ಲೆಯ ಇದರ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳಿಂದ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು.

ಈ ಸಂದರ್ಭದಲ್ಲಿ ವಿಧಾನಸಭೆಯ ಸಭಾಪತಿಗಳಾದ ಯು.ಟಿ.ಖಾದರ್, ಮಾನ್ಯ ರಾಜ್ಯ ಮುಖ್ಯ ಆಯುಕ್ತರಾದ ಪಿ.ಜಿ.ಆರ್.ಸಿಂಧ್ಯ,, ಚಿಕ್ಕಬಳ್ಳಾಪುರ ಜಿಲ್ಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಮುನಿಕೆಂಪೇಗೌಡ, ಜಿಲ್ಲಾ ಸಂಸ್ಥೆಯ ಕಾರ್ಯದರ್ಶಿ ಸಿ.ಬಿ.ಪ್ರಕಾಶ್ ,ಗೈಡ್ ವಿಭಾಗದ ಡಿಟಿಸಿ ಲಕ್ಷ್ಮಿ ಹೊನ್ನಪ್ಪ ನಾಯಕ್ ಹಾಗು ರಾಜ್ಯ ಸಂಸ್ಥೆಯ ಪದಾಧಿಕಾರಿಗಳು, ಜಿಲ್ಲಾ ಪದಾಧಿಕಾರಿಗಳು,ರಾಜ್ಯ ಪುರಸ್ಕಾರ ಪ್ರಶಸ್ತಿ ವಿಜೇತ ಕಬ್ಸ್, ಬುಲ್ ಬುಲ್ಸ್, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್ ಹಾಗೂ ಪೋಷಕರು ಭಾಗವಹಿಸಿದ್ದರು.

# ಒಳ ಮೀಸಲಾತಿ ಜಾರಿಗೆ ಸರ್ಕಾರ ಹಿಂದೇಟು

**ಆನೇಕಲ್ :** ಸುಪ್ರೀಂಕೋರ್ಟ್ ಆದೇಶವಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಳ ಮೀಸಲಾತಿ ಜಾರಿಗೊಳಿಸಲು ಹಿಂದೇಟು ಹಾಕುತ್ತಿದ್ದಾರೆ. ಕಳೆದ 30 ವರ್ಷಗಳಿಂದ ಹಿಂದೆ ಪ್ರಾರಂಭವಾದ ಒಳ ಮೀಸಲಾತಿ ಹೋರಾಟವು ಇಂದಿಗೂ ಸಹ ನಡೆಯುತ್ತಿದೆ. ಒಳ ಮೀಸಲಾತಿ ಜಾರಿ ಮಾಡಲು ನ್ಯಾಯಾಲಯ ರಾಜ್ಯ ಸರ್ಕಾರಗಳಿಗೆ ಅಧಿಕಾರ ಕೊಟ್ಟಿದ್ದು, ಇದನ್ನು ಜಾರಿ ಮಾಡುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತದೆ. ಸಿಎಂ ಸಿದ್ದರಾಮಯ್ಯ ಕಳೆದ ಚುನಾವಣೆಯಲ್ಲಿ ಒಳಮೀಸಲಾತಿ ಜಾರಿಗೊಳಿಸುವುದಾಗಿ ತಿಳಿಸಿದ್ದರು.



ಆದರೆ, ಅಧಿಕಾರಕ್ಕೆ ಬಂದು ಎರಡು ವರ್ಷವಾದರೂ ಜಾರಿಗೆ ಮುಂದಾಗುತ್ತಿಲ್ಲ. ಕಳೆದ ಚಳಿಗಾಲದ ಆಧಿವೇಶನದಲ್ಲಿ ಬೆಳಗಾವಿಯಲ್ಲಿ ನಡೆದ ಸಮಾವೇಶದಲ್ಲಿ ಸಚಿವ ಮಹದೇವಪ್ಪ ರವರು ಮೂರೇ ತಿಂಗಳಲ್ಲಿ ಒಳಮೀಸಲಾತಿ ಜಾರಿಗೊಳಿಸುತ್ತೇವೆ ಎಂದು ಅಶ್ವಾಸನೆ ನೀಡಿದರು ಅದು ಇಂದಿಗೆ ಹುಸಿಯಾಗಿದೆ ಎಂದು ಆನೇಕಲ್ ತಾಲ್ಲೂಕು ಮಾದಿಗ ಸಮಾಜದ ಮುಖಂಡ ಎ. ಉದಯ್ ಕುಮಾರ್ ತಿಳಿಸಿದರು.

ಅವರು ಆನೇಕಲ್ ತಾಲ್ಲೂಕು ಮಾದಿಗ ಸಮಾಜದ ವತಿಯಿಂದ ಸರ್ಜಾಪುರ ಪಟ್ಟಣದಲ್ಲಿ ಬೆಂಗಳೂರುರಿನ ಫ್ರೀಡಂ ಪಾರ್ಕನಲ್ಲಿ 21–03–2025ರ ಶುಕ್ರವಾರ ನಡೆಯಲಿರುವ ಕ್ರಾಂತಿಕಾರಿ ಮಹಾ ಸಮಾವೇಶದ ಕರ ಪತ್ರಗಳನ್ನು ಬಿಡುಗಡೆಗೊಳಿಸಿ ನಂತರ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ರಾಜ್ಯ ಸರ್ಕಾರ ಈ ಕೂಡಲೇ ಒಳ ಮೀಸಲಾತಿ ವರ್ಗಿಕರಣವನ್ನು ಜಾರಿ ಮಾಡಬೇಕೆಂದು ಆಗ್ರಹಿಸಿ ಮಾದಿಗ ಸಮುದಾಯದ ಹೋರಾಟಗಾರರು ಹರಿಹರದ ಪ್ರೊಫೆಸರ್ ಬಿ. ಕೃಷ್ಣಪ್ಪ ರವರ ಚೈತ್ಯ ಭೂಮಿಯಿಂದ ಬೆಂಗಳೂರಿನ ವರೆಗೂ ಪಾದಯಾತ್ರೆ ಹಮ್ಮಿಕೊಂಡಿದ್ದು ಅದರಂತೆ ದಿನಾಂಕ 21.03.2025 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ನಡೆಯಲಿರುವ ಕ್ರಾಂತಿಕಾರಿ ಮಹಾ ಸಮಾವೇಶಕ್ಕೆ ಕರ್ನಾಟಕ ರಾಜ್ಯದಲ್ಲಿರುವ ಪ್ರಜ್ಞಾವಂತ ಬುದ್ಧಿಜೀವಿಗಳು, ಸಾಹಿತಿಗಳು, ಚಿಂತಕರು, ಹಾಗೂ ಹೋರಾಟಗಾರರು ಮತ್ತು ಮಾದಿಗ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಸಮಾವೇಶವನ್ನು ಯಶಸ್ವಿ ಮಾಡಬೇಕೆಂದು ಕೋರಿದರು.

ಅತ್ತಿಬೆಲೆ ಪುರಸಭೆ ಮಾಜಿ ಸದಸ್ಯ ಪಿ.ನಾರಯಣಸ್ವಾಮಿ ಮಾತನಾಡಿ, ಸಚಿವ ಕೆ.ಎಚ್ ಮುನಿಯಪ್ಪ ಮತ್ತು ಆರ್.ಬಿ ತಿಮ್ಮಾಪುರ ರವರು ಆಳುವ ಸರ್ಕಾರದ ಗುಲಾಮರಾಗಿ ಇದ್ದಾರೆ. ಮಾದಿಗ ಸಮುದಾಯವನ್ನು ಪ್ರತಿನಿಧಿಸುವಲ್ಲಿ ಅವರು ಯೋಗ್ಯವಾಗಿಲ್ಲ ಬದಲಾಗಿ ತಮ್ಮ ಸಚಿವ ಸ್ಥಾನವನ್ನು ಉಳಿಸಿಕೊಳ್ಳಲು ಸರ್ಕಾರದ ಪರವಾಗಿ ವಕಾಲತನ್ನು ವಹಿಸಿದ್ದಾರೆ. ಅತ್ಯಂತ ನ್ಯಾಯಪರವಾದ ಬೇಡಿಕೆಯಾದ ಒಲಮಿಸಲಾತಿಯು ಕುರಿತು ನೆನ್ನೆ ಪತ್ರಿಕಾಗೋಷ್ಠಿಯನ್ನು ನಡೆಸಿ ಒಳ ಮೀಸಲಾತಿ ಜಾರಿ ಮಾಡಲು ಇನ್ನೂ ಕಾಲಾವಕಾಶವನ್ನು ಕೋರುತ್ತಿದ್ದಾರೆ ಮತ್ತು ಹೋರಾಟಗಾರರ ದಿಕ್ಕು ತಪ್ಪಿಸುವಂತಹ ಹೇಳಿಕೆಗಳನ್ನು ನೀಡುತ್ತಿರುವುದು ದೃತಿಗೆಡುವಂಥ ಸಂಗತಿಯಾಗಿದೆ ಕೇವಲ ಅವರ ಅಸ್ತಿತ್ವ ಮತ್ತು ಅಧಿಕಾರವನ್ನು ಉಳಿಸಿಕೊಳ್ಳಲು ಅವರ ಪ್ರಯತ್ನ ನಿರತವಾಗಿದೆ. ಹಾಗಾಗಿ ಸಚಿವ ಕೆ.ಎಚ್ ಮುನಿಯಪ್ಪರವರು ಈ ಕೂಡಲೇ ರಾಜೀನಾಮೆ ನೀಡಿ ಹೋರಾಟಗಾರರ ಜೊತೆ ನಿಲ್ಲಬೇಕು ಅಥವಾ ಒಲಮಿಸಲಾತಿ ಜಾರು ಮಾಡುವಂತೆ ಸರ್ಕಾರದ ಬೆನ್ನೆತ್ತ ಬೇಕು ಎಂದು ಅಗ್ರಹ ವ್ಯಕ್ತಪಡಿಸಿದರು.

ಇದೇ ವೇಳೆ ಕಳೆದ ಬಜೆಟ್ ಅಧಿವೇಶನದಲ್ಲಿ ವೀಕ್ಷಕರ ಗ್ಯಾಲರಿಯಿಂದ ತಮ್ಮ ಪ್ರಾಣದ ಅಂಗನ್ನು ತೊರೆದು ಒಳ ಮೀಸಲಾತಿ ಜಾರಿಯನ್ನು ಮಾಡಬೇಕೆಂದು ಒತ್ತಾಯಿಸಿದ ಹೋರಾಟಗಾರರಾದ ಎ.ಉದಯ್ ಕುಮಾರ್, ಸತ್ಯೇಂದ್ರ ಕುಮಾರ್, ರಾಜರತ್ನಂ, ಎಸ್.ಎಸ್ ವಿಜಿಶೇಖರ್, ಚೊಕ್ಕಸಂದ್ರ ವೇಣು, ಎಸ್.ವಿ ಶ್ರೀನಿವಾಸ್, ಸುರೇಶ್ ರವರನ್ನು ಸನ್ಮಾನಿಸಿ ಧೈರ್ಯ ತುಂಬಿ ತಮ್ಮ ಸಾಹಸವನ್ನು ಶ್ಲಾಗಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾದಿಗ ಸಮುದಾಯದ ಮುಖಂಡರಾದ ಅತ್ತಿಬೆಲೆ ನಾರಾಯಣಸ್ವಾಮಿ, ನೆರಿಗ ನರಸಿಂಹಯ್ಯ, ವಿ. ಶಿವಣ್ಣ, ಡಾ.ಸುಲೋಚನಾ, ಚಿನ್ನು ರಾಮಸ್ವಾಮಿ, ಸರ್ಜಾಪುರ ಸತೀಶ್, ಗೋಪಾಲ್, ಸತೀಶ್ ಭೌದ್, ಶಂಕರ್, ಜಯಣ್ಣ, ದೊಮ್ಮಸಂದ್ರ ನರೇಶ್ ಕುಮಾರ್, ಹೇಮಾಂತ್ ಕುಮಾರ್, ಬಾಬು ಕಿರಣ್, ಜಾಸ್ವಂತ್, ನೆರಿಗಾ ವೆಂಕಟೇಶ್ ಹಾಗೂ ಮತ್ತಿತ್ತರರು ಹಾಜರಿದ್ದರು.

# ಶಾಸಕರ ಮಾತು ನೋವು ತಂದಿದೆ



**ಶಿಡ್ಲಘಟ್ಟ :** ಬೆಂಗಳೂರಿನಲ್ಲಿ ನಡೆದ ಶ್ರೀಕೈವಾರ ತಾತಯ್ಯ ಅವರ ಜಯಂತಿ ಕಾರ್ಯಕ್ರಮದಲ್ಲಿ ಸಮುದಾಯದ ಮುಖಂಡ ಹಾಗೂ ಸಂದದರಾದ ಪಿ.ಸಿ.ಮೋಹನ್ ಸೇರಿದಂತೆ ಹಲವರಿದ್ದ ವೇದಿಕೆಯಲ್ಲಿ ಶಾಸಕ ಪ್ರದೀಪ್ ಈಶ್ವರ್ ಅವರು ಆಡಿದ ಮಾತು ನೋವು ತಂದಿದೆ ಎಂದು ಬಿಜೆಪಿ ಮುಖಂಡ ಹಾಗೂ ನಗರಸಭೆ ಸದಸ್ಯ ಎಸ್. ರಾಘವೇಂದ್ರ ತಿಳಿಸಿದರು.

ನಗರದ ಕೋಟೆ ಶ್ರೀರಾಮ ದೇವಾಲಯದ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಈ ಕಾರ್ಯಕ್ರಮ ನಿಮ್ಮಪ್ಪಂದಲ್ಲ,ಇದು ಸಿದ್ದರಾಮಯ್ಯ ಅವರ ಸರ್ಕಾರ, ಎನ್ನುವಂತಹ ಮಾತುಗಳು ಖಂಡನೀಯವಾದದ್ದು ಅವರು ಈ ಕೂಡಲೇ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದರು.

ಸಂಸದರಾದ ಪಿ.ಸಿ.ಮೋಹನ್ ಅವರು ಅಧಿಕಾರದಲ್ಲಿದ್ದಾಗ ಮಾಡಿದ ಸಾಧನೆಗಳನ್ನು, ಸಮುದಾಯಕ್ಕೆ ಮಾಡಿದ ಒಳಿತನ್ನು ಹೇಳಿಕೊಳ್ಳುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದ ಅವರು, ಪ್ರದೀಪ್ ಈಶ್ವರ್ ಅವರು ಕೂಡ ನಮ್ಮ ಸಮುದಾಯಕ್ಕೆ ಕೊಡುಗೆ ಕೊಟ್ಟು ಅವೆಲ್ಲವನ್ನು ವೇದಿಕೆಗಳಲ್ಲಿ ಹೇಳಿಕೊಳ್ಳಲಿ ಅಭ್ಯಂತರವೇನಿಲ್ಲ ಎಂದು ಹೇಳಿದರು.

ಶ್ರೀಕೈವಾರ ತಾತಯ್ಯನವರ ಜಯಂತಿಯಲ್ಲಿ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರು ಆಡಿದ ಮಾತು. ಮಾತನಾಡಿದ ರೀತಿ ಅವರಿಗೆ ಶೋಭೆ ತರುವಂತಹುದ್ದಲ್ಲ ಎಂದರು.

ಮುಖಂಡ ಮಹೇಶ್ ಮಾತನಾಡಿ ,3ಎ ಪ್ರವರ್ಗದಲ್ಲಿದ್ದ ಬಲಿಜ ಸಮುದಾಯವನ್ನು ಶೈಕ್ಷಣಿಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರವರ್ಗ 2ಎಗೆ ಸೇರಿಸುವಲ್ಲಿ ಸಂಸದರಾದ ಪಿ.ಸಿ.ಮೋಹನ್ ಅವರ ಶ್ರಮ ಬಹಳಷ್ಟಿದೆ, ಶೈಕ್ಷಣಿಕ ಮೀಸಲಾತಿಯಿಂದಾಗಿ ಇಂದು ನಮ್ಮ ಸಮುದಾಯದ ಅನೇಕರು ವೈದ್ಯ, ಇಂಜಿನಿಯರ್ ಶಿಕ್ಷಣವನ್ನು ಸರ್ಕಾರಿ ಕೋಟಾದಲ್ಲಿ ಪಡೆಯುವಂತಾಗಿದೆ ಈ ವಿಚಾರದಲ್ಲಿ ಅವರ ಕೊಡುಗೆ ಇದೆ ಎಂದರು.

ಶಾಸಕ ಪ್ರದೀಪ್ ಈಶ್ವರ್ ಅವರು ಸಮುದಾಯಕ್ಕೆ ರಾಜಕೀಯ ಮತ್ತು ಉದ್ಯೋಗದಲ್ಲಿ ಮೀಸಲಾತಿ ಕೊಡಿಸಲಿ ಅವರ ಫೋಟೋ ಇಟ್ಟು ಪೂಜಿಸುತ್ತೇವೆ, ಅವರ ರೋಷಾವೇಶದ ಮಾತುಗಳು ಸಮುದಾಯಕ್ಕೆ ಒಳ್ಳೆಯದಾಗುವ ರೀತಿಯಲ್ಲಿ ಇರಲಿ ಎಂದರು.

ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ಸೋಮಶೇಖರ್,ನಂದಕಿಶನ್,ಕೆ.ನರೇಶ್,ಎ.ರಮೇಶ್,ಮಾತ ಶ್ರೀಮೋಹನ್,ಸುಭ್ರಮಣಿ, ಚೆಲುವರಾಜ್,ಅಶ್ವಥ್, ಹರೀಶ್, ಕುಮಾರ್ ಮುಂತಾದವರು ಹಾಜರಿದ್ದರು.

# ಪರೀಕ್ಷೆ: ಆತಂಕಕ್ಕೆ ಒಳಗಾಗಬೇಡಿ



**ಶಿಡ್ಲಘಟ್ಟ :** ಮಕ್ಕಳು ಹೆಚ್ಚು ಅಂಕ ಗಳಿಸಬೇಕೆಂದು ವಿನಾಕಾರಣ ಪೋಷಕರು ಒತ್ತಡ ಹಾಕದೆ, ಅವರಿಗಾಗಿ ಮನೆಯಲ್ಲಿ ಶಾಂತ ರೀತಿ, ಉತ್ತೇಜನಕಾರಿ ಹಾಗು ವಿಶ್ವಾಸದ ವಾತಾವರಣವನ್ನು ಅವರಿಗೆ ಮೂಡಿಸಬೇಕು ಎಂದು ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ತಹಶಿಲ್ದಾರ್ ಬಿ.ಎನ್.ಸ್ವಾಮಿ ಮನವಿ ಮಾಡಿದರು.

ನಗರದ ತಾಲ್ಲೂಕು ಕಛೇರಿಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಆರಂಭವಾಗಲಿರುವ ಹಿನ್ನೆಲೆಯಲ್ಲಿ ನಡೆದ ವಿವಿಧ ಇಲಾಖೆಗಳ ಸಮನ್ವಯ ಸಭೆಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಯಾವುದೇ ಕಾರಣಕ್ಕು ಪರೀಕ್ಷೆ ಎಂಬ ಆತಂಕ ಹಾಗು ಒತ್ತಡಕ್ಕೆ ಒಳಗಾಗದೆ ಶಾಂತ ಚಿತ್ತದಿಂದ ಪರೀಕ್ಷೆ ಎದುರಿಸಬೇಕು ಎಂದು ಹೇಳಿದರು.

ಮಾರ್ಚ್-21 ರಿಂದ ಏಪ್ರಿಲ್-4 ರವರೆಗೆ ಪರೀಕ್ಷೆಗಳು ನಡೆಯಲಿದ್ದು, ಈ ಪರೀಕ್ಷೆಗಳ ಶಿಸ್ತುಬದ್ಧ ಆಯೋಜನೆಗಾಗಿ ಎಲ್ಲಾ ಸಿದ್ಧತೆಗಳನ್ನು ಮಾಡಲಾಗುತ್ತಿದೆ, ವಿದ್ಯಾರ್ಥಿಗಳು ಸಮಚಿತ್ತದಿಂದ ಪರೀಕ್ಷೆ ಬರೆಯಲು ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಬೇಕು ಎಂದು ಅವರು ಸಲಹೆ ನೀಡಿದರು. ತಾಲ್ಲೂಕಿನಲ್ಲಿ ಒಟ್ಟು 10 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, 1314 ಬಾಲಕರು ಮತ್ತು 1353 ಬಾಲಕಿಯರು ಸೇರಿ 2667 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಈ ಕೇಂದ್ರಗಳಲ್ಲಿ 110 ಕೊಠಡಿಗಳಲ್ಲಿ ಪರೀಕ್ಷೆ ನಡೆಯಲಿದ್ದು, ಪ್ರತಿ ಕೊಠಡಿಗೆ ಒಬ್ಬರಂತೆ 110 ಮೇಲ್ವಿಚಾರಕರನ್ನು ನೇಮಿಸಲಾಗಿದೆ,ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಬಳಕೆ ನಿಷೇಧಿಸಲಾಗಿದೆ ,ಮೇಲ್ವಿಚಾರಕರ ಮೊಬೈಲ್‌ಗಳೂ ಸೇರಿದಂತೆ ಎಲ್ಲರ ಮೊಬೈಲ್‌ಗಳನ್ನು ಸಂಗ್ರಹಿಸಲು 10 ಮಂದಿ ಮೊಬೈಲ್ ಸ್ವಾಧೀನ ಅಧಿಕಾರಿಗಳನ್ನು ನಿಯೋಜಿಸಲಾಗಿದೆ, ಇದರೊಂದಿಗೆ ಕಸ್ಟೋಡಿಯನ್, ಸ್ಥಳೀಯ ಜಾಗೃತ ದಳ, ವಿಚಕ್ಷಣ ದಳ ಸಿಬ್ಬಂದಿಗಳನ್ನು ಈಗಾಗಲೇ ನೇಮಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರ ಕುಮಾರ್, ಆರೋಗ್ಯ ಇಲಾಖೆ, ಖಜಾನೆ ಇಲಾಖೆ ಬೆಸ್ಕಾಂ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ವೃತ್ತ ಕಾರ್ಮಿಕರ ಪಿಂಚಣಿಗೆ ಆಗ್ರಹಿಸಿ ಪ್ರತಿಭಟನೆ





**ಚಿಕ್ಕಬಳ್ಳಾಪುರ:** ಕೆಎಸ್‌ಆರ್‌ಟಿಸಿ ನಿವೃತ್ತ ನೌಕರರ ಸಂಘದ ಮನವಿಯಂತೆ ಲೋಕಸಭೆಯಲ್ಲಿ ನಮ್ಮ ಪರವಾಗಿ ಮಾತನಾಡದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಸಂಸದರ ನಿವಾಸದ ಎದುರು ನಿವೃತ್ತ ಕಾರ್ಮಿಕರ ಪಿಂಚಣಿ (ಇಪಿಎಸ್) ಹೋರಾಟ ಸಮಿತಿ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ಕೆಎಸ್‌ಆರ್‌ಟಿಸಿ ನಿವೃತ್ತ ನೌಕರರ ಸಂಘದ ರಾಜ್ಯಾಧ್ಯಕ್ಷ ನಂಜುಂಡೇಗೌಡ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಸರಕಾರಿ ನೌಕರರ ಭವನದಲ್ಲಿ ಕೆ.ಎಸ್.ಆರ್.ಟಿ.ಸಿ ನಿವೃತ್ತ ನೌಕರರ ಸಂಘ ವತಿಯಿಂದ ನಡೆಸಿದ ಮಾಸಿಕ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕೆ.ಎಸ್.ಆರ್.ಟಿ.ಸಿ ನಿವೃತ್ತ ನೌಕರರ ಸಂಘವು ಕಳೆದ 8 ವರ್ಷಗಳಿಂದ ನಿರಂತರವಾಗಿ ಬೆಂಗಳೂರಿನ ಪಿಎಫ್ ಕಚೇರಿ ಎದುರು ನಿವೃತ್ತ ಕಾರ್ಮಿಕರ ಪಿಂಚಣಿ (ಇಪಿಎಸ್) ಗೆ ಆಗ್ರಹಿಸಿ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದೇವೆ. ಈವರೆಗೆ 23 ಮನವಿಗಳನ್ನು ಕೇಂದ್ರಕ್ಕೆ ಕೊಟ್ಟಿದ್ದೇವೆ.ಸುಮಾರು 20,30,40 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿಯಾದರೂ ಇಪಿಎಸ್ ಇಲ್ಲದೆ ಸಂಕಷ್ಟಕ್ಕೆ ಒಳಗಾಗಿದ್ದೇವೆ.

ಇದಕ್ಕಾಗಿ ಅಖಿಲ ಭಾರತ ಮಟ್ಟದಲ್ಲಿ ಕಮಾಂಡರ್ ಅಶೋಕ್ ರಾವುತ್ ಅವರ ನೇತೃತ್ವದಲ್ಲಿ ಈ ಹೋರಾಟವನ್ನು ಮಾಡು ಇಲ್ಲವೆ ಮಡಿ ಎಂಬಂತೆ ಮಾಡುತ್ತಿದ್ದೇವೆ.

ಹೀಗಾಗಿ ರಾಜ್ಯದಲ್ಲಿ ನಮ್ಮ ಮನವಿಗೆ ಸ್ಪಂಧಿಸದ ಸಂಸದರ ನಿವಾಸದ ಎದುರು ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಕೆ.ಎಸ್.ಆರ್.ಟಿ.ಸಿ ನಿವೃತ್ತ ನೌಕರರಿಗೆ 7500 ಡಿಎ ಜತೆಗೆ ವೈದ್ಯಕೀಯ ವೆಚ್ಚದ ಸವಲತ್ತು ನೀಡಿ ಎನ್ನುವುದಷ್ಟೇ ನಮ್ಮ ಬೇಡಿಕೆಯಾಗಿದೆ. ಕೇಂದ್ರ ಸರಕಾರ ನಮ್ಮ ಬೇಡಿಕೆಯನ್ನು ಈಡೇರಿಸಿದ್ದೇ ಆದಲ್ಲಿ ಇಳಿಗಾಲದಲ್ಲಿ ಮಕ್ಕಳಿಗೆ ಹೊರೆಯಾಗದೆ ನೆಮ್ಮದಿಯ ಜೀವನ ನಡೆಸುತ್ತೇವೆ.ಈಗಲಾದರೂ ಸರಿಯೇ ಬಜೆಟ್ ಅಧಿವೇಶನದ ಸಂದರ್ಭದಲ್ಲಿ ಎಲ್ಲಾ ಲೋಕಸಭಾ ಸದಸ್ಯರು ಇಪಿಎಸ್ ಬೇಡಿಕೆಯನ್ನು ಕೇಂದ್ರದ ಗಮನಕ್ಕೆ ತಂದು ನ್ಯಾಯ ಕೊಡಿಸಿ ಎಂದು ಮನವಿ ಮಾಡಿದರು.

ಇಪಿಎಸ್ ನೀಡುವಲ್ಲಿ ಅನುಸರಿಸುತ್ತಿರುವ ಕೇಂದ್ರ ಸರಕಾರದ ಮಲತಾಯಿ ಧೋರಣೆ ವಿರುದ್ದ ಮಾ.24ರಂದು ದೇಶಾದ್ಯಂತ ಇರುವ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಅವರ ಮೂಲಕ ಪ್ರಧಾನ ಮಂತ್ರಿಗಳಿಗೆ ತಲುಪಿಸಿ ಎಂದು ಇಎಇಸ್ ಜಾರಿ ಸಂಬಂಧ ಮನವಿ ಪತ್ರವನ್ನು ನೀಡಲು ಕೇಂದ್ರ ಸಮಿತಿ ನಿರ್ದೇಶನ ನೀಡಿದೆ.ಈ ಕೆಲಸವನ್ನು ಜಿಲ್ಲೆಯ ಎಲ್ಲಾ ಪ್ರತಿನಿಧಿಗಳು ತಪ್ಪದೆ ಮಾಡಬೇಕೆಂದು ಸೂಚನೆ ನೀಡಿದರು.

ಮಾ.25ರಂದು ಬೆಂಗಳೂರಿನ ಪಿಎಫ್ ಕಚೇರಿ ಎದುರು ಪ್ರತಿಭಟನೆ ನಡೆಸಲು ರಾಜ್ಯ ಸಂಘವು ತೀರ್ಮಾನಿಸಿದೆ. ಏಕೆಂದರೆ ಕೇಂದ್ರದಲ್ಲಿ ಬಜೆಟ್ ಅಧಿವೇಶನ ನಡೆಯುತ್ತಿರುವುದರಿಂದ ನಮ್ಮ ಧ್ವನಿ ಅವರಿಗೆ ಮುಟ್ಟಬೇಕಿದೆ.ರಾಜ್ಯದ ಉದ್ದಗಲಕ್ಕೂ ಇರುವ ಎಲ್ಲಾ ಕೆಎಸ್‌ಆರ್‌ಟಿಸಿ ನಿವೃತ್ತ ನೌಕರರು ಇಪಿಎಸ್‌ಗೆ ಒತ್ತಾಯಿಸಿ ಹೆಚ್ಚಿನ ಸಂಖ್ಯೆಯಲ್ಲಿ ಬಂದು ನಮ್ಮ ಶಕ್ತಿಯನ್ನು ಪ್ರದರ್ಶನ ಮಾಡಬೇಕಿದೆ.ಈಗ ಮಲಗಿದರೆ ಶಾಶ್ವತವಾಗಿ ನಾವು ನಿವೃತ್ತ ಕಾರ್ಮಿಕರ ಪಿಂಚಣಿಯಿಂದ ಹೊರಗುಳಿಯಬೇಕಾಗುತ್ತದೆ. ಇದನ್ನು ಮನಗಂಡು ಕಾರ್ಯೋನ್ಮುಖ ರಾಗಬೇಕೆಂದು ಮನವಿ ಮಾಡಿದರು.

ಜಿಲ್ಲಾಧ್ಯಕ್ಷ ಬ್ರಹ್ಮಾಚಾರಿ ಮಾತನಾಡಿ ದೇಶಾದ್ಯಂತ ಇರುವ ಸಾರಿಗೆ ಸಂಸ್ಥೆಯ ವಿವಿಧ ನಿಗಮಗಳಲ್ಲಿ ಕೆಲಸ ಮಾಡಿ ನಿವೃತ್ತರಾಗಿರುವ ಕೆಎಸ್‌ಆರ್‌ಟಿಸಿ ಸಿಬ್ಬಂದಿಗೆ ಇಪಿಎಸ್ ಪಿಂಚಣಿ ನೀಡದೆ ಕೇಂದ್ರ ಸರಕಾರ ವಂಚಿಸಿದೆ.ಈ ಬಗ್ಗೆ ಲೋಕಸಭೆಯಲ್ಲಿ ನಮ್ಮ ಪರವಾಗಿ ದನಿಯೆತ್ತಿ ಪ್ರಧಾನಿಗಳಿಗೆ ಮನವರಿಕೆ ಮಾಡಿಕೊಡುವಲ್ಲಿ ನಮ್ಮ ಜನಪ್ರತಿನಿಧಿಗಳಾದ ಸಂಸದರು ಸೋತಿದ್ದಾರೆ.

ಹತ್ತಾರು ವರ್ಷಗಳ ಸಮಸ್ಯೆ ಬಗೆ ಹರಿಸಬೇಕೆಂದು ಸಂಘದ ಪ್ರತಿನಿಧಿಗಳ ನಿಯೋಗ ರಾಜ್ಯದ ಎಲ್ಲಾ ಸಂಸದರಿಗೆ ಪತ್ರ ನೀಡಿ ಮನವಿ ಮಾಡಿದ್ದೆವು.ಆದರೆ ಬಸವರಾಜ ಬೊಮ್ಮಾಯಿ ಒಬ್ಬರನ್ನು ಬಿಟ್ಟರೆ ಯಾರೊಬ್ಬರೂ ಈ ಬಗ್ಗೆ ಲೋಕಸಭೆಯಲ್ಲಿ ಪ್ರಸ್ತಾಪ ಮಾಡದೆ ನಮಗೆ ಅನ್ಯಾಯ ಮಾಡಿದ್ದಾರೆ.ಆದ್ದರಿಂದ ಇವರ ಮನೆಯ ಮುಂದೆ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ. ಇದು ಆಗಬಾರದು ಎಂದರೆ ಕೂಡಲೇ ಲೋಕಸಭೆಯಲ್ಲಿ ನಮಗೆ ದನಿಯಾಗಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮೇಲೂರು ಅಮರ್,ಉಪಾಧ್ಯಕ್ಷ ಸೊಣ್ಣಪ್ಪ, ಖಜಾಂಚಿ ಕೆ.ರಮೇಶ್, ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ನಾಯ್ಡು,ಎಂ.ನಾರಾಯಣಸ್ವಾಮಿ, ಸತ್ಯನಾರಾಯಣ,ಡಿ.ವಿ.ಆಂಜಿನಪ್ಪ, ಸುದರ್ಶನಾಚಾರಿ,ಎನ್‌ಎಸಿ ಜಿಲ್ಲಾಧ್ಯಕ್ಷ ಡಿಸ್ಕೋ ಶ್ರೀನಿವಾಸ್, ಕೇಂದ್ರ ಸಂಘದ ಖಜಾಂಚಿ ಡೋಲಪ್ಪ, ಶಂಕರ್ ಕುಮಾರ್ ಮತ್ತಿತರರು ಇದ್ದರು.

# ಗೋಪುರ ಮತ್ತು ದೇವಸ್ಥಾನ ಪ್ರತಿಷ್ಠಾಪನೆ



**ಮುಳಬಾಗಿಲು:** ತಾಲ್ಲೂಕಿನ ಬಂಗವಾದಿ ಗ್ರಾಮದಲ್ಲಿ ಶ್ರೀ ವೇಣುಗೋಪಾಲಸ್ವಾಮಿ ಗೋಪುರ ಮತ್ತು ದೇವಸ್ಥಾನ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ನಡೆಸಲಾಯಿತು. ಸುಮಾರು ಸತತವಾಗಿ 8 ದಿವಸಗಳ ಪೂಜಾ ಕಾರ್ಯಕ್ರಮವನ್ನು ವಿಶೇಷವಾಗಿ ಆಚರಿಸಲಾಯಿತು.

ಪೂಜಾ ಕಾರ್ಯಕ್ರಮಕ್ಕೆ ಮಾಜಿ ಸಚಿವರಾದ ಎಚ್ ನಾಗೇಶ್ ಭಕ್ತಾದಿಗಳೊಂದಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವರ ಆಶೀರ್ವಾದ ಪಡೆದರು ನಂತರ ಮಾತನಾಡಿದ ಅವರು, ಸುಮಾರು ಇತಿಹಾಸವನ್ನು ಹೊಂದಿರುವ ಪುರಾತನ ದೇವಸ್ಥಾನಗಳನ್ನು ಪ್ರತಿಷ್ಠಾಪನೆ ಮಾಡಿ ಪೂಜೆ ನೆರವೇರಿಸಿಕೊಂಡು ನಾವೆಲ್ಲರೂ ಕೂಡ ದೈವ ಭಕ್ತಿಯಿಂದ ಈ ಕಾರ್ಯಕ್ರಮಕ್ಕೆ ಪಕ್ಷಾತೀತವಾಗಿ ಜಾತ್ಯತೀತವಾಗಿ ಈ ಊರಿನ ಗ್ರಾಮದ ಹಿರಿಯರು ಮತ್ತು ಯುವಕರು ಈ ಕಟ್ಟಡವನ್ನ ಎಲ್ಲರ ಸಹಾಯ ಪಡೆದು ನಿರ್ಮಿಸಿರುವುದು ನನಗೆ ತುಂಬಾ ಸಂತೋಷದ ವಿಚಾರವಾಗಿದೆ ಆದ್ದರಿಂದ ಮುಂದಿನ ದಿನಗಳಲ್ಲಿ ನಾನು ಸರ್ಕಾರದೊಂದಿಗೆ ಚರ್ಚಿಸಿ ಇಲ್ಲಿ ಸುಮಾರು 20 ಲಕ್ಷ ರೂಪಾಯಿ ಸಮುದಾಯ ಭವನವನ್ನು ನಿರ್ಮಿಸಿಕೊಳ್ಳಲು ಸಹಕಾರ ನೀಡುವುದಾಗಿ ತಿಳಿಸಿದರು. ಇಂತಹ ಕಾರ್ಯಕ್ರಮಗಳು ನಡೆಯುವುದು ಊರಿನ ಒಗ್ಗಟ್ಟಿಗೆ ಮತ್ತು ದೇವರ ಕೃಪೆಗೆ ಪಾತ್ರರಾಗುತ್ತಾರೆ ಎಲ್ಲರಿಗೂ ಆ ಭಗವಂತ ದೇವರು ಒಳ್ಳೆಯದು ಮಾಡಲಿ ಎಂದು ಶುಭ ಹಾರೈಸಿದರು.

ಈ ಪೂಜಾ ಕಾರ್ಯಕ್ರಮದಲ್ಲಿ ಶ್ರೀ ವೇಣುಗೋಪಾಲ ಸ್ವಾಮಿ ಕಲ್ಯಾಣೋತ್ಸವ ನೈವೇದ್ಯ ಅನ್ನಪ್ರಸಾದ ಪುಷ್ಪಾರ್ಚನೆ, ಮಂಗಳಾರತಿ ಪಿ ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಆರ್ ರಾಜೇಂದ್ರ ಗೌಡ. ಗಂಗರೆಡ್ಡಿ ದೇವರ ಆಶೀರ್ವಾದ ಪಡೆದರು.

ನಂತರ ಉಪನ್ಯಾಸಕ ರಾಮಕೃಷ್ಣ, ಗ್ರಾಮದ ಕೆ ಟಿ ಚೌಡರೆಡ್ಡಿ ಗ್ರಾಮ ಪಂಚಾಯತಿ ಮಾಜಿ ಉಪಾಧ್ಯಕ್ಷ ಎಂ ಬಿ ಸದಾಶಿವಯ್ಯ ಗ್ರಾಪ್ರಂ ಸದಸ್ಯ ಶಶಿಕಲಾ ರಾಘವೇಂದ್ರ ಕಾಂಗ್ರೆಸ್ ಮುಖಂಡ ಬಿಎಮ್ ವೆಂಕಟರಾಮಯ್ಯ ನಂದೀಶ್ ರೆಡ್ಡಿ ಮಂಜುನಾಥ್ ಕೃಷ್ಣೇಗೌಡ ಬಿಎಂ ನಾರಾಯಣಪ್ಪ ಎಂ ಆನಂದ್ ವಿಜಿ ಕುಮಾರ್ ಬಿ ಎಂ ಶಂಕ್ರಪ್ಪ ಜಿ ರವಿ ಎ ಭಾಸ್ಕರ್ ಯುವ ಮುಖಂಡ ಕಾರ್ತಿಕ್ ರೆಡ್ಡಿ .ಬಿ ಎನ್ ಮಧು ಎನ್ ಲೋಕೇಶ್ ಮೋಹನ್ ಕುಮಾರ್ ಪ್ರಭು ಸುಧಾ ಶಿವಪ್ಪ ರೆಡ್ಡಪ್ಪ ಚಾರಿ ವೆಂಕಟಪ್ಪ ಬಿಎಸ್ ರಾಮಕೃಷ್ಣಪ್ಪ ಅನೇಕ ಭಕ್ತಾದಿಗಳು ಪಾಲ್ಗೊಂಡಿದ್ದರು.

# ಶ್ರೀಮಠದಿಂದ ಉಚಿತ "ಪಂಚಾಂಗ"ವಿತರಣೆ




**ಬೆಂಗಳೂರು :** ಭಾನುವಾರದಿಂದ ಜಗದ್ಗುರು ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪ್ರಸ್ತುತ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಜಯನಗರದ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಸನ್ನಿಧಿಯಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ನೂತನ ಶ್ರೀ ವಿಶ್ವಾವಸು ನಾಮ ಸಂವತ್ಸರದ ಸೂರ್ಯ ಸಿದ್ಧಾಂತ "ಪಂಚಾಂಗ"ವನ್ನು ಶ್ರೀಮಠದ ಶಿಷ್ಯರಿಗೆ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪಂಚಾಂಗವನ್ನು ಉಚಿತವಾಗಿ ವಿತರಣೆ ಮಾಡಲಾಗುವುದು ಎಂದು ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದಿಂದ್ರಾಚಾರ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹಾಗೂ ಇತರೆ ಸಂಘ ಸಂಸ್ಥೆಗಳು ಶ್ರೀಮಠದ ರೀತಿ ಅನುಷ್ಠಾನ ಮಾಡುವ ಕಮಿಟಿ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದವರಿಗೆ ಚಾಮರಾಜಪೇಟೆಯ ಸೀತಾಪತಿ ಅಗ್ರಹಾರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ತಮ್ಮ ಮಠದ ಲೆಟರ್ ರೆಡ್‌ನಲ್ಲಿ ಮಾಹಿತಿಯೊಂದಿಗೆ ಪತ್ರವನ್ನು ಲಗತ್ತಿಸಿ ಶ್ರೀ ಮಠದ ಪಂಚಾಂಗವನ್ನು ಸ್ವೀಕರಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಯನಗರದ ಶ್ರೀ ರಾಘವೇಂದ್ರಸ್ವಾಮಿಗಳ ಮಠ 08022443962– ಮತ್ತು ಚಾಮರಾಜಪೇಟೆಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠ 08026708642. ಜಯನಗರದ ಶ್ರೀಮಠದಲ್ಲಿ ಬೆಳಗ್ಗೆ 9:00 ರಿಂದ ಮಧ್ಯಾಹ್ನ 12:00 ವರೆಗೆ ಮತ್ತು ಸಂಜೆ 5:30 ರಿಂದ 8 ಗಂಟೆವರೆಗೆ ಪಂಚಾಂಗ ವಿತರಣೆ ಮಾಡಲಾಗುವುದು ಒಬ್ಬರಿಗೆ ಒಂದು ಪಂಚಾಂಗ ಮಾತ್ರ ವಿತರಿಸಲಾಗುವುದು.



**ಕೋಲಾರ ಜಿಲ್ಲೆ ಕೆಜಿಎಫ್ ತಾಲೂಕು ಪಿಚ್ಚಹಳ್ಳಿ ಗ್ರಾಮದಲ್ಲಿ ಭಾರತದ ಸಂವಿಧಾನ ಪುಸ್ತಕ ಅನಾವರಣ ಕಾರ್ಯಕ್ರಮಕ್ಕೆ ಕರ್ನಾಟಕ ದಲಿತ ಸಂಘರ್ಷ ಅಂಬೇಡ್ಕರ್ ವಾದ ರಾಜ್ಯ ಸಂಚಾಲಕ ಮಾವಳ್ಳಿ ಶಂಕರ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿ ಸಂಸ್ಥಾಪಕ ಹಿರಿಯ ಮುಖಂಡ ಹಾಗೂ ಸಾಹಿತಿ ನಾಟಕಕಾರ ಕೋಟಿಗಾನಹಳ್ಳಿ ರಾಮಯ್ಯ ಕರ್ನಾಟಕ ಜಾನಪದ ಅಕಾಡೆಮಿ ಮಾಜಿ ಅಧ್ಯಕ್ಷ ಪಿಚ್ಚ ಹಳ್ಳಿ ಶ್ರೀನಿವಾಸ್ ಕರ್ನಾಟಕ ವಿಮುಕ್ತಿ ಚಿರತೆಗಳು ಪಕ್ಷದ ರಾಜ್ಯ ಅಧ್ಯಕ್ಷ ವೇಣು ಸಮಾಜ ಸೇವಕ ರಂಜಿತ್ ಅವನಿಕಾಶಿ ನಿವೃತ್ತ ಪ್ರಾಂಶುಪಾಲ ಆವಣಿ ಜೈ ಜಯರಾಮ್ ಮುಂತಾದ ಮುಖಂಡರು ಹಾಜರಿದ್ದರು**

# ಪುನೀತ್ ರಾಜ್‌ಕುಮಾರ್ ಪುತ್ಥಳಿ ಅನಾವರಣ

**ಚಿಕ್ಕಬಳ್ಳಾಪುರ:** ಕರ್ನಾಟಕ ರತ್ನ ಡಾ.ಪುನೀತ್ ರಾಜ್‌ಕುಮಾರ್ ಅವರ 50ನೇ ಹುಟ್ಟು ಹಬ್ಬದ ಅಂಗವಾಗಿ ನಗರದ ಪ್ರಶಾಂತನಗರದಲ್ಲಿ ಕರ್ನಾಟಕ ಪುಲಿಕೇಶಿ ಸಂಘದ ವತಿಯಿಂದ ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿ ಅನಾವರಣ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೆ.ವಿ. ಮತ್ತು ಪಂಚಗಿರಿ ಶಿಕ್ಷಣ ದತ್ತಿಗಳ ಅಧ್ಯಕ್ಷರಾದ ಕೆ..ವಿ.ನವೀನ್ ಕಿರಣ್ ಮಾತನಾಡಿ ಡಾ.ಪುನೀತ್ ರಾಜ್‌ಕುಮಾರ್ ಅವರು ಸಮಾಜ ಸೇವೆ ಯಾವ ರೀತಿಯ ಮಾಡಬೇಕೆಂದು ಇಡೀ ವಿಶ್ವಕ್ಕೆ ತೋರಿಸಿಕೊಟ್ಟವರು ಎಡ ಕೈಯಲ್ಲಿ ಮಾಡುವ ಸಹಾಯ ಬಲಗೈಗೆ ಗೊತ್ತಾಗಬಾರದು ಎಂಬುದು ರೂಡಿಸಿಕೊಂಡಿದ್ದರು,ಪುನೀತ್ ರಾಜ್‌ಕುಮಾರ್ ಸಿನಿಮಾಗಳಿಂದ ಮನೋರಂಜಿಸುವ ಜತೆಗೆ ಸಾವಿರಾರು ಕುಟುಂಬಗಳಿಗೆ ಆಸರೆಯಾಗಿ ನಿಂತಿದ್ದರು,ಅವರು ಬದುಕಿರುವ ತನಕ ಅವರ ಸಹಾಯ ಹಸ್ತ ಸಮಾಜ ಸೇವೆ ಬಗ್ಗೆ ಯಾರಿಗೂ ತಿಳಿದಿರಲಿಲ್ಲ ಇಂದು ಅವರ ಐವತ್ತನೆ ಹುಟ್ಟುಹಬ್ಬ ಅವರನ್ನ ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ ಅವರ ಹುಟ್ಟು ಹಬ್ಬದ ಪ್ರಯುಕ್ತ ಚಿಕ್ಕಬಳ್ಳಾಪುರದಲ್ಲಿ ಪುಲಿಕೇಶಿ ಸಂಘದ ವತಿಯಿಂದ ಪುನೀತ್ ರಾಜಕುಮಾರ್ ಪುತ್ಥಳಿ ಅನಾವರಣ ಮಾಡಲಾಗಿದ್ದು ಬಹಳಷ್ಟು ಸಂತಸದ ವಿಷಯ ಎಂದರು. ನಗರಸಭೆ ಅಧ್ಯಕ್ಷ ಎ.ಗಜೇಂದ್ರ ಮಾತನಾಡಿ ಡಾ.ಪುನೀತ್ ರಾಜ್‌ಕುಮಾರ್ ರವರ ಸಮಾಜಸೇವೆ ಎಲ್ಲರಿಗೂ ಮಾದರಿ ಎಷ್ಟೋ ಕುಟುಂಬಗಳು ಇಂದಿಗೂ ಅವರಿಗೆ ನೆನಪಿಸಿ ಕಣ್ಣೀರು ಹಾಕುತ್ತಾರೆ ಅವರ ಜೀವನ ಇತರರಿಗೆ ಮಾದರಿಯಾಗಿದೆ ಅವರ 50ನೇ ಹುಟ್ಟು ಹಬ್ಬದಂದು ಕರ್ನಾಟಕ ಪುಲಿಕೇಶಿ ಸಂಘದ ವತಿಯಿಂದ ಪುನೀತ್ ರಾಜಕುಮಾರ್ ಪುತ್ಥಳಿ ಅನಾವರಣ ಖುಷಿ ನೀಡಿದೆ ಪ್ರತಿ ವರ್ಷ ಅವರ ನೆನಪಿನಲ್ಲಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸಬೇಕಾಗಿದೆ ಎಂದರು. ಕರ್ನಾಟಕ ಪುಲಿಕೇಶಿ ಸಂಘದ ರಾಜ್ಯಾಧ್ಯಕ್ಷ ಜಿ.ಚಂದ್ರಶೇಖರ್ ಮಾತನಾಡಿ ಡಾ.ಪುನೀತ್ ರಾಜ್‌ಕುಮಾರ್ ರವರ ಸೇವೆ ರಾಜ್ಯಕ್ಕೆ ಅಪಾರವಾದದ್ದು ಅವರು ಜಾತಿ ಭೇದವಿಲ್ಲದೆ ಎಲ್ಲರಿಗೂ ಸಹಾಯ ಮಾಡಿದ್ದರು,ಅವರ ಕಾರ್ಯ ನಮಗೆಲ್ಲ ಸ್ಫೂರ್ತಿ ಹಾಗೂ ಶ್ಲಾಘನೀಯ ಅವರ ಸೇವೆ ಬಹಳಷ್ಟಿದೆ ಇನ್ನುಪುನೀತ್ ಅವರ ಪುತ್ಥಳಿ ಅನಾವರಣಕ್ಕೆ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ತಿಳಿಸುತ್ತೇನೆ ಎಂದರು.

# ಜಿಲ್ಲಾದ್ಯಂತ 9 ವಾತ್ಸಲ್ಯ ಮನೆಗಳ ರಚನೆ

**ಶಿಡ್ಲಘಟ್ಟ :** ಜಿಲ್ಲಾದ್ಯಂತ 9 ವಾತ್ಸಲ್ಯ ಮನೆಗಳನ್ನು ಈ ವರ್ಷದಲ್ಲಿ ರಚನೆ ಮಾಡುತ್ತಿದ್ದು ಮಾತೃಶ್ರೀ ಹೇಮಾವತಿ ಅಮ್ಮನವರ ಮೆಚ್ಚಿನ ಕಾರ್ಯಕ್ರಮ ಇದಾಗಿದ್ದು ಚಿಕ್ಕಮುನಿಪೂಜಪ್ಪ ಅವರು ಈ ವಾತ್ಸಲ್ಯ ಮನೆಯಲ್ಲಿ ನೆಮ್ಮದಿಯ ಜೀವನ ನಡೆಸಬೇಕು ಎಂದುವುದೇ ನಮ್ಮ ಆಶಯ ಎಂದು ಗ್ರಾಮಾಭಿವೃದ್ಧಿ ಯೋಜನೆಯ ಚಿಕ್ಕಬಳ್ಳಾಪುರ ಜಿಲ್ಲಾ ನಿರ್ದೇಶಕರಾದ ಸಿ.ಎಸ್.ಪ್ರಶಾಂತ್ ತಿಳಿಸಿದರು.ತಾಲ್ಲೂಕಿನ ಜಂಗಮಕೋಟೆ ಗ್ರಾಮದಲ್ಲಿ ಮಾತೃಶ್ರೀ ಡಾ. ಹೇಮಾವತಿ ವಿ.ಹೆಗ್ಗಡೆಯವರ ಜ್ಞಾನ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮದ ಮಾಶಾಸನ ಫಲಾನುಭವಿಯವರಾದ ಚಿಕ್ಕಮುನಿಪೂಜಪ್ಪರವರಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ನಿರ್ಮಾಣ ಮಾಡಲಾಗಿದ್ದ ವಾತ್ಸಲ್ಯ ಮನೆ ಹಸ್ತಾಂತರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಾನವ



ತನ್ನ ಜೀವನದಲ್ಲಿ ಮನೆ ಮಾಡಿಕೊಂಡು ಸಂಸಾರ ಸಾಗಿಸುವ ಕನಸನ್ನು ಹೊಂದಿರುರಮತ್ತಾನೆ ಅವಶ್ಯವುಳ್ಳವರಿಗೆ ಅಂತಹ ಕನಸನ್ನು ನೀಗಿಸುವ ಪುಣ್ಯದ ಕೆಲಸವನ್ನು ಧರ್ಮಸ್ಥಳ ಸಂಸ್ಥೆಯು ಮಾಡುತ್ತಿದೆ ಎಂದು ಹೇಳಿದರು. ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಒಟ್ಟು 134 ಮಂದಿ ನಿರ್ಗತಿಕರಿಗೆ ಪ್ರತಿ ತಿಂಗಳು1ಸಾವಿರ ರೂ.ಗಳ ಮಾಶಾಸನ ನೀಡುತ್ತಿದ್ದು ಸಂಸ್ಥೆಯ ವತಿಯಿಂದ ಸಾಮಾಜಿಕ ಕಾರ್ಯಕ್ರಮಗಳು ನಿರಂತರವಾಗಿ ಸಾಗಲಿವೆ ಎಂದು ಹೇಳಿದರು. ಜಂಗಮಕೋಟೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿವಿಧ ಸಮಾಜಮುಖಿ ಕಾರ್ಯಕ್ರಮಗಳು ಸರ್ಕಾರಕ್ಕೆ ಮಾದರಿಯಾಗಿವೆ ಚಿಕ್ಕಮುನಿಪೂಜಪ್ಪ ಅವರಿಗೆ "ವಾತ್ಸಲ್ಯ ಮನೆ" ಕಟ್ಟಿಸಿ ಕೊಟ್ಟಿರುವುದು ಸಂತಸ ತಂದಿದ್ದು ಧರ್ಮಸ್ಥಳ ಸಂಸ್ಥೆಯು ಮಾದರಿ ಸಂಸ್ಥೆಯಾಗಿ ಹಲವು ವಿಭಿನ್ನ ಕಾರ್ಯಕ್ರಮಗಳು ಜನಮನದಲ್ಲಿವೆ ಎಂದರು. ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾಧಿಕಾರಿ ಎಸ್. ಸುರೇಶ್ ಗೌಡ, ಪೋಸ್ಟ್ ಮಾಸ್ಟರ್ ಶ್ರೀಧರ್, ವಲಯ ಮೇಲ್ವಿಚಾರಕರಾದ ಮಂಜುನಾಥ್ ,ಜ್ಞಾನವಿಕಾಸ ಸಮನ್ವಯ ಅಧಿಕಾರಿ ಹೆಚ್.ಅರುಣಾ , ಜಂಗಮಕೋಟೆ ವಲಯದ ಸೇವಾಪ್ರತಿನಿದಿಗಳು,ಗ್ರಾಮಸ್ಥರು ಹಾಜರಿದ್ದರು.

# ಕ್ರೀಡೆಗಳಲ್ಲಿ ಒಗ್ಗಟ್ಟಿದ್ದರೆ ಗೆಲುವು ನಿಶ್ಚಿತ



**ಚಿಕ್ಕಬಳ್ಳಾಪುರ:** ಕ್ರೀಡೆಗಳಲ್ಲಿ ಸೋಲು ಗೆಲುವು ಸಹಜ ಕ್ರೀಡಾ ಪಟುಗಳು ಎಲ್ಲವನ್ನೂ ಸಮಾನವಾಗಿ ಸ್ವೀಕರಿಸಬೇಕು, ಸ್ಪರ್ಧಿ ಪ್ರತಿ ಸ್ಪರ್ಧಿಗಳು ಸೌಹಾರ್ದತೆ ಬೆಳಸಿಕೊಳ್ಳಬೇಕು ಕ್ರೀಡಾ ಸ್ಫೂರ್ತಿ ಯನ್ನು ಪ್ರದರ್ಶಿಸಬೇಕೆಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಕೇಶವರೆಡ್ಡಿ ಹೇಳಿದರು.

ಕೇಶವ ರೆಡ್ಡಿ ಹಾಗೂ ಯುವ ಮುಖಂಡ ಗಿರೀಶ್ ಹರಿಸ್ಥಳ ತಾಲ್ಲೂಕಿನ ಪೇರೆಸಂದ್ರ ಗ್ರಾಮದ ಅಂಜನಾದ್ರಿ ಕಾಲೇಜು ಮೈದಾನದಲ್ಲಿ ವಿಲೇಜ್ ವಾರಿಯರ್ಸ್ ತಂಡದ ವತಿಯಿಂದ ಮಂಡಿಕಲ್ ಹೋಬಳಿ ಮಟ್ಟದ ಕಬ್ಬಡಿ ಪಂದ್ಯಾವಳಿಗಳನ್ನು ಚಾಲನೆ ನೀಡಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕೇಶವ ರೆಡ್ಡಿ ಕಬಡ್ಡಿ ಪಂದ್ಯಾವಳಿ ಆಯೋಜಕರನ್ನು ಅಭಿನಂದಿಸಿ ಮಾತನಾಡಿ ಪ್ರಸ್ತುತ ದಿನಗಳಲ್ಲಿ ಕ್ರಿಕೆಟ್,ಬ್ಯಾಟ್ಮಿಟನ್ ಹಾಗೂ ಹಲವಾರು ಕ್ರೀಡೆಗಳಲ್ಲಿ ಯುವಕರು ಹೆಚ್ಚಾಗಿ ಭಾಗವಹಿಸುತ್ತಿದ್ದಾರೆ ಆದರೂ ಕೂಡ ಇಂದಿಗೂ ಕಬಡ್ಡಿ ತನ್ನದೇ ಆದ ಪ್ರಾಮುಖ್ಯತೆ ಹೊಂದಿದೆ ಇಂದಿಗೂ ಗ್ರಾಮಗಳಲ್ಲಿ ಕಬಡ್ಡಿ ಆಟ ನಡೆಯುತ್ತಿದೆ ಯುವಕರು ಕಬಡ್ಡಿ ಕ್ರೀಡೆಗಳಲ್ಲಿ ತೂಡಗಿಸಿಕೊಳ್ಳಲು ಇಂತಹ ಪಂದ್ಯಾವಳಿಗಳು ಸಹಕಾರಿಯಾಗಲಿದೆ ಎಂದರು. ಯುವಕರು ನಿರಂತರವಾಗಿ ಕ್ರೀಡೆಗಳಲ್ಲಿ ಭಾಗವಹಿಸಿ ಆರೋಗ್ಯಕರ ಜೀವನ ಸಾಗಿಸಿ ಜೊತೆಗೆ ಸಮಾಜಕ್ಕೂ ಏನಾದರೂ ಮಾಡಬೇಕು ಎಂಬ ಸಂಕಲ್ಪದೊಂದಿಗೆ ಮುನ್ನಡೆಯಿರಿ ಇನ್ನು ಕ್ರೀಡೆಗಳಲ್ಲಿ ಒಗ್ಗಟ್ಟು ಇದ್ದರೆ ಗೆಲುವು ನಿಶ್ಚಿತ ಕ್ರೀಡಾ ಪಟುಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯುವ ಮುಖಂಡ ಗಿರೀಶ್ ಹರಿಸ್ಥಳ ಮಾತನಾಡಿ ಪೇರೇಸಂದ್ರ ದಲ್ಲಿ ಮೊದಲಿನಿಂದಲೂ ಕಬಡ್ಡಿ ಕ್ರೀಡೆ ಎಂದರೆ ತುಂಬ ಇಷ್ಟ ಪಡುವಂತಹ ಆಟವಾಗಿದೆ,ಹಿಂದೆ ಕಬಡ್ಡಿಯಲ್ಲಿ ತೂಗಿಸಿಕೊಂಡವರು ಇಂದಿಗೂ ಆರೋಗ್ಯಕರ ಜೀವನ ಸಾಗಿಸುತ್ತಿದ್ದಾರೆ ಯುವಕರು ಕ್ರೀಡಾ ಪಟುಗಳನ್ನ ಸ್ಫೂರ್ತಿಯಾಗಿ ತೆಗೆದುಕೊಳ್ಳಬೇಕು ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ದೈಹಿಕವಾಗಿ ಮಾನಸಿಕವಾಗಿ ಸದೃಢವಾಗಬೇಕು ಪೋಷಕರು ಕೂಡ ತಮ್ಮ ಮಕ್ಕಳನ್ನು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಸಹಕಾರ ನೀಡಬೇಕೆಂದರು.

ಇನ್ನೂ ಪೇರಸಂದ್ರ ಗ್ರಾಮದ ಯುವಕರು ಕ್ರಿಕೆಟ್, ವಾಲಿಬಾಲ್ ಕಬಡ್ಡಿ ಪಂದ್ಯಾವಳಿಗಳನ್ನು ನಡೆಸಿಕೊಂಡು ಬಂದಿದ್ದು ಅದ್ರಂತೆ ಯುವಕರು ಕಬಡ್ಡಿ ಪಂದ್ಯಾವಳಿ ಆಯೋಜನೆ ಮಾಡಿದ್ದಾರೆ. ಹಳೆಯ ಪರಂಪರೆಯನ್ನು ಇಂದಿನ ಯುವ ಪೀಳಿಗೆಗೆ ಮುಂದುವರೆಸುವ ಮತ್ತು ದೈಹಿಕವಾಗಿ ಸದೃಢರಾಗುವ ನಿಟ್ಟಿನಲ್ಲಿ ಪಂದ್ಯಾವಳಿಗಳನ್ನು ಆಯೋಜಿಸಲಾಗಿತ್ತು. ಇನ್ನು ಇದೇ ಸಂದರ್ಭದಲ್ಲಿ ಕಬಡ್ಡಿ ಕ್ರೀಡಾಪಟುಗಳು ಅಖಾಡಕ್ಕಿಳಿದು ತೊಡೆತಟ್ಟಿ ಕಬಡ್ಡಿ ಕಬಡ್ಡಿ ಕಬಡ್ಡಿ ಎಂದು ಅರ್ಭಟಿಸುತ್ತಿದ್ರೆ ಇತ್ತ ಕ್ರೀಡಾಬಿಮಾನಿಗಳು ಚಪ್ಪಾಳೆ,ಶಿಳ್ಳೆ,ಕೆಕೆ ಹಾಕಿ ಪ್ರೋತ್ಸಾಹಿಸಿದರು.ಯುವಕರು, ಮುಖಂಡರು ಮುಖ್ಯ ಅತಿಥಿಗಳನ್ನು ವಿಶೇಷವಾಗಿ ಗೌರವಿಸಿ ಸತ್ಕಾರ ಮಾಡಿದರು.

ಕ್ರೀಡೆ - ಸಿನಿಮಾ
ಮುಸ್ಸಂಜೆ



# ಒಲಿಂಪಿಕ್ಸ್‌ಗೆ ಕ್ರಿಕೆಟ್ ಸೇರ್ಪಡೆ; ಐಪಿಎಲ್ ಮಹತ್ವದ ಪಾತ್ರ

**ಬೆಂಗಳೂರು:** 2028ರಲ್ಲಿ ಲಾಸ್ ಏಂಜೇಲೀಸ್‌ನಲ್ಲಿ ನಡೆಯಲಿರುವ ಒಲಿಂಪಿಕ್ಸ್ ಪಂದ್ಯಾವಳಿಯಲ್ಲಿ ಕ್ರಿಕೆಟ್ ಸೇರ್ಪಡೆಯಾಗಿರುವುದಕ್ಕೆ ಖ್ಯಾತ ಕ್ರಿಕೆಟರ್ ವಿರಾಟ್ ಕೊಹ್ಲಿ ಅತೀವ ಹರ್ಷ ವ್ಯಕ್ತಪಡಿಸಿದ್ದಾರೆ.

ಒಲಿಂಪಿಕ್ಸ್‌ಗೆ ಕ್ರಿಕೆಟ್ ಸೇರ್ಪಡೆಯಾಗಲು ಇಂಡಿಯನ್ ಪ್ರೀಮಿಯರ್ ಲೀಗ್ ಬಹಳ ದೊಡ್ಡ ಕೊಡುಗೆ ನೀಡಿದೆ ಎಂದು ಹೇಳಿದರು. 1900ನೇ ಇಸ್ವಿಯಲ್ಲಿ ಪ್ಯಾರಿಸ್‌ನಲ್ಲಿ ನಡೆದಿದ್ದ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆಯಾಗಿತ್ತು. ಅದರ ನಂತರ 2028ರಲ್ಲಿ ಇದೇ ಮೊದಲ ಬಾರಿಗೆ ಕ್ರಿಕೆಟ್ ಒಲಿಂಪಿಕ್ಸ್‌ಗೆ ಮರಳುತ್ತಿದೆ.

"ಒಲಿಂಪಿಕ್ ಚಾಂಪಿಯನ್ ಆಗುವುದು ತಂಬಾ ಅದ್ಭುತವಾದ ಅನುಭವವಾಗಲಿದೆ. ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆಯಾಗಲು ಐಪಿಎಲ್ ಮಹತ್ವದ ಪಾತ್ರ ವಹಿಸಿದೆ. ಈಗ ನಾವು ಒಲಿಂಪಿಕ್ಸ್‌ನಲ್ಲಿ ಆಡಲಿರುವುದು ಆಟಗಾರರಿಗೆ ಬಹಳ ದೊಡ್ಡ ಅವಕಾಶವಾಗಿದೆ" ಎಂದು ಆರ್‌ಸಿಬಿ ಇನ್ನೋವೇಶನ್ ಲ್ಯಾಬ್ ಟಾಕ್ ಶೋನಲ್ಲಿ ಕೊಹ್ಲಿ ಹೇಳಿದರು. ಇಂಗ್ಲೆಂಡ್‌ನ ಮಾಜಿ ಕ್ರಿಕೆಟಿಗ ಇಸಾ ಗುಹಾ ಈ ಟಾಕ್ ಶೋ ನಿರ್ವಹಿಸಿದ್ದಾರೆ."ಕ್ರೀಡಾಪಟುಗಳು ಇದೇ ಮೊದಲ ಬಾರಿಗೆ ಹೊಸ ರೀತಿಯ ಅನುಭವವನ್ನು ಪಡೆಯಲಿದ್ದಾರೆ. ಪುರುಷ ಮತ್ತು ಮಹಿಳಾ ತಂಡಗಳು ಏಕಕಾಲಕ್ಕೆ ಆಡಲಿರುವ ಒಲಿಂಪಿಕ್ಸ್ ಪದಕ ಗೆಲ್ಲಲು ನಾವು ಸನಿಹದಲ್ಲಿದ್ದೇವೆ ಎಂಬುದು ನನಗೆ ಖಾತ್ರಿಯಿದೆ." ಎಂದು ಅವರು ಹೇಳಿದರು.

2028 ರ ಹೊತ್ತಿಗೆ ಸುಮಾರು 40 ವರ್ಷದವರಾಗಲಿರುವ ಕೊಹ್ಲಿ ಒಲಿಂಪಿಕ್ಸ್‌ನಲ್ಲಿ ಆಡುವ ಸಾಧ್ಯತೆಯಿಲ್ಲ. ಆದರೆ ಒಲಿಂಪಿಕ್ಸ್‌ನಲ್ಲಿ ಆಡುವ ಅನುಭವ ಹೇಗಿರಬಹುದು ಎಂಬ ಬಗ್ಗೆ ತಮ್ಮ ಭಾವನೆಗಳನ್ನು ಹಂಚಿಕೊಂಡರು.

"ಒಲಿಂಪಿಕ್ಸ್ ಹೇಗಿರುತ್ತೋ ಗೊತ್ತಿಲ್ಲ, ಬಹುಶಃ ನಾವು ಚಿನ್ನದ ಪದಕ ಗೆಲ್ಲಲು ಆಟವಾಡುತ್ತಿರಬಹುದು. ಸಾಧ್ಯವಾದರೆ ನಾನು ಒಂದೇ ಒಂದು ಪಂದ್ಯದೊಳಗೆ ನುಸುಳಿ ಪದಕ ಪಡೆದು ಮರಳಿ ಮನೆಗೆ ಬರಲು ಬಯಸುವೆ. ಏನೇ ಆದರೂ ಒಲಿಂಪಿಕ್ಸ್‌ಗೆ ಕ್ರಿಕೆಟ್ ಸೇರ್ಪಡೆಯಾಗಿರುವುದು ಆಟದ ಬೆಳವಣಿಗೆಯ ದೃಷ್ಟಿಯಿಂದ ಮಹತ್ವದ್ದಾಗಿದೆ" ಎಂದು ಕೊಹ್ಲಿ ಹೇಳಿದರು.

ಮಹಿಳಾ ಪ್ರೀಮಿಯರ್ ಲೀಗ್ ದೇಶದ ಮಹಿಳಾ ಕ್ರಿಕೆಟ್‌ನಲ್ಲಿ ಗಮನಾರ್ಹ ಪರಿವರ್ತನೆಯನ್ನು ತಂದಿದೆ ಎಂದು ಕೊಹ್ಲಿ ಹೇಳಿದರು. "ಓಹ್.. ಹೌದು, ಗ್ರಹಿಕೆ ತುಂಬಾ ಬದಲಾಗಿದೆ. ಇತರ ಎಲ್ಲಾ ಕ್ರೀಡೆಗಳಲ್ಲಿಯೂ ಅನೇಕರು ಹಲವಾರು ಅದ್ಭುತ ಕೆಲಸಗಳನ್ನು ಮಾಡಿದ್ದಾರೆ ಎಂದು ನಾನು ಭಾವಿಸುತ್ತೇನೆ." ಎಂದು ಅವರು ತಿಳಿಸಿದರು. "ಅಷ್ಟೇ ಅಲ್ಲ.. ಮಹಿಳಾ ಕ್ರಿಕೆಟಿಗರು ತಮ್ಮ ಸಾಧನೆಗಳಿಗಾಗಿ ಇಡೀ ದೇಶಾದ್ಯಂತ ಮೆಚ್ಚುಗೆ ಪಡೆದುಕೊಂಡಿದ್ದಾರೆ. ಕಳೆದ ಕೆಲವು ವರ್ಷಗಳಲ್ಲಿ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ಸಾಧನೆ ಎಲ್ಲರ ಗಮನ ಸೆಳೆದಿದೆ" ಎಂದು ಅವರು ಹೇಳಿದರು.



# ಮದುವೆಯೇ ಬೇಡ

ಮುಂಬೈನಲ್ಲಿ ಹುಟ್ಟಿ ಬೆಳೆದವರು ನಟಿ ವೇದಿಕಾ. ಮಾಡೆಲಿಂಗ್ ಕ್ಷೇತ್ರದಲ್ಲಿ ಗಮನ ಹರಿಸುತ್ತಿದ್ದ ಇವರನ್ನು ಆಕ್ಷನ್ ಕಿಂಗ್ ಅರ್ಜುನ್, ತಾನು ನಿರ್ದೇಶಿಸಿ ನಟಿಸಿದ ಮದರಾಸಿ ಚಿತ್ರದಲ್ಲಿ ನಾಯಕಿಯಾಗಿ ನಟಿಸುವಂತೆ ಮಾಡಿದರು. ಈ ಚಿತ್ರದಲ್ಲಿ ಅರ್ಜುನ್ ಜೊತೆಯಾಗಿ ನಟಿಸಿದ ವೇದಿಕಾಗೆ ಇದು ಮೊದಲ ಚಿತ್ರವಾಗಿತ್ತು. ಈ ಚಿತ್ರದ ನಂತರ, ರಾಘವಾ ಲಾರೆನ್ಸ್ ಅವರ ಮುನಿ ಚಿತ್ರದಲ್ಲಿ ನಟಿಸುವ ಮೂಲಕ ಮನೆ ಮಾತಾದರು.

ನಂತರ ಸಕ್ಕರಕಟ್ಟಿ, ಮಲೈ ಮಲೈ, ಪರದೇಸಿ, ಕಾವ್ಯ ತಲೈವನ್, ಕಾಂಚನಾ 3, ಪೇಟ ರೇಪ್ ಚಿತ್ರಗಳಲ್ಲಿ ನಟಿಸಿದ್ದಾರೆ. ಇದರಲ್ಲಿ ಮುನಿ ಚಿತ್ರದ ನಂತರ ಹಿಟ್ ನೀಡಿದ ಚಿತ್ರವೆಂದರೆ ಅದು ಪರದೇಸಿ. ತಮಿಳು ಚಿತ್ರಗಳು ಮಾತ್ರವಲ್ಲದೆ ತೆಲುಗು, ಮಲಯಾಳಂ, ಕನ್ನಡ ಭಾಷೆಗಳಲ್ಲೂ ನಾಯಕಿಯಾಗಿ ನಟಿಸಿದ್ದಾರೆ.

ಕೊನೆಯದಾಗಿ ಪ್ರಭು ದೇವ ನಟನೆಯ 'ಪೇಟ ರೇಪ್' ಚಿತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾದರೂ, ತಮಿಳಿನಲ್ಲಿ ಅವರ ಕ್ರೇಜ್ ಇನ್ನೂ ಕಡಿಮೆಯಾಗಿಲ್ಲ. ಹಾಗಾಗಿ, ಮುಂದಿನ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ. ಪ್ರಸ್ತುತ ಇವರ ಕೈಯಲ್ಲಿ ಕನಾ ಎಂಬ ಕನ್ನಡ ಚಿತ್ರ ಮತ್ತು ಗಜಾನಾ ಎಂಬ ತಮಿಳು ಚಿತ್ರವಿದೆ.

ವೇದಿಕಾ ಸಿನಿಮಾ ರಂಗಕ್ಕೆ ಬಂದು 19 ವರ್ಷಗಳಾದರೂ, ಇನ್ನೂ ಮೊದಲ ಚಿತ್ರದಲ್ಲಿ ನೋಡಿದಂತೆಯೇ ಇದ್ದಾರೆ. ಇದರ ಬಗ್ಗೆ ಇತ್ತೀಚೆಗೆ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದ ಅವರಲ್ಲಿ ಕೇಳಿದಾಗ... ಇನ್ನೂ ಮದುವೆಯಾಗಿಲ್ಲ ಎಂದು ಕೂಲ್ ಆಗಿ ಉತ್ತರಿಸಿದ್ದಾರೆ. 37 ವರ್ಷ ವಯಸ್ಸಾದರೂ ಅವರು ಇನ್ನೂ ಮದುವೆಯಾಗಿಲ್ಲ. ಇದು ನನ್ನ ಫಿಟ್ನೆಸ್ ಗುಟ್ಟು.

ಅದೇ ರೀತಿ ಕೊನೆಯವರೆಗೂ ಮದುವೆಯಾಗದೆ ಹೀಗೇ ಇರಲು ಬಯಸುತ್ತೇನೆ ಎಂದು ಹೇಳಿ ಶಾಕ್ ನೀಡಿದ್ದಾರೆ. ಸೌಂದರ್ಯವನ್ನು ಕಾಪಾಡಿಕೊಳ್ಳಲು ಮತ್ತು ಫಿಟ್ನೆಸ್ ಕಾಪಾಡಿಕೊಳ್ಳಲು ಮದುವೆಯೇ ಬೇಡ ಎನ್ನುವುದು ಆಶ್ಚರ್ಯವನ್ನುಂಟು ಮಾಡಿದೆ.

# ವಿಮರ್ಶಕನಿಗೆ ಬೆದರಿಕೆ; ಆರೋಪ

ಬಾಲಿವುಡ್ ನಟ ಸೈಫ್ ಅಲಿ ಖಾನ್ ಅವರ ಪುತ್ರ ಇಬ್ರಾಹಿಂ ಅಲಿ ಖಾನ್ ನಟನೆಯ ಚೊಚ್ಚಲ ಚಿತ್ರ 'ನದಾನಿಯಾನ್' ಇತ್ತೀಚೆಗೆ ಒಟಿಟಿ ಪ್ಲಾಟ್‌ಫಾರ್ಮ್ ಪ್ರವೇಶಿಸಿತು. ಖುಷಿ ಕಪೂರ್ ಜೊತೆ ತೆರೆ ಹಂಚಿಕೊಂಡಿರುವ ಈ ಚಿತ್ರ ಹೆಚ್ಚಿನ ಪ್ರೇಕ್ಷಕರ ಮನ ಮುಟ್ಟುವಲ್ಲಿ ವಿಫಲವಾಗಿದೆ.

ಹೊಸ ಪ್ರತಿಭೆಗಳ ಅಭಿನಯ ಟೀಕೆಗೊಳಗಾಗಿದೆ. ಕೆಲ ಅಭಿಮಾನಿಗಳು ನಟರ ಧ್ವನಿಯನ್ನು ಡಬ್ ಮಾಡಲಾಗಿದೆ ಎಂದು ಊಹಿಸಿದ್ದಾರೆ. ಅಲ್ಲದೇ, ನೋಯ್ಡಾದ ಬಗ್ಗೆ ಅನಗತ್ಯ ದ್ವೇಷಕ್ಕಾಗಿ ಚಿತ್ರ ಹಿನ್ನಡೆ ಎದುರಿಸಿದೆ.



ಈ ಚಿತ್ರದ ಅನೇಕ ವಿಮರ್ಶಕರ ಪೈಕಿ ಪಾಕಿಸ್ತಾನಿ ಚಲನಚಿತ್ರ ವಿಮರ್ಶಕ ತಮೂರ್ ಇಕ್ಬಾಲ್ ಕೂಡಾ ಓರ್ವರು. ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ವಿಮರ್ಶೆ ಹಂಚಿಕೊಂಡಿದ್ದಾರೆ. ನದಾನಿಯನ್ ಚಿತ್ರವನ್ನು ಟೀಕಿಸಿದ್ದಾರೆ. ನಟನ ನೋಟವನ್ನು ಅಣಕಿಸಿದ್ದಾರೆ.

ಇದಕ್ಕೆ ಇಬ್ರಾಹಿಂ ಅಲಿ ಖಾನ್ ಮೆಸೇಜ್ ಮೂಲಕ ಪ್ರತಿಕ್ರಿಯಿಸಿ, ತಮ್ಮ ಆಕ್ರೋಶವನ್ನು ತೀಕ್ಷ್ಣ ಪದಗಳಲ್ಲಿ ವ್ಯಕ್ತಪಡಿಸಿದ್ದಾರೆ ಎಂದು ವರದಿಯಾಗಿದೆ. ಈ ಮೆಸೇಜ್‌ನ ಫೋಟೋ ಇಂಟರ್‌ನೆಟ್‌ನಲ್ಲಿ ವೈರಲ್ ಆಗುತ್ತಿದೆ. ತಮೂರ್ ಇಕ್ಬಾಲ್ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿರುವ ಮೆಸೇಜ್‌ನ ಸ್ಕ್ರೀನ್‌ಶಾಟ್‌ನಲ್ಲಿ ಇಬ್ರಾಹಿಂ ಹೀಗೆ ಬರೆದಿದ್ದಾರೆ – "ತಮೂರ್ ಬಹುತೇಕ ತಮೂನರ್ಂತೆಯೇ. ನೀವು ನನ್ನ ಸಹೋದರನ ಹೆಸರು ಪಡೆದುಕೊಂಡಿದ್ದೀರಿ. ಆದ್ರೆ ನೀವು ಏನನ್ನು ಪಡೆದುಕೊಳ್ಳಲಿಲ್ಲ ಎಂಬುದನ್ನು ಊಹಿಸಿ?. ಅದು ಅವನ ಮುಖ. ನೀವು ಕೊಳಕು. ನಿಮ್ಮ ಮಾತುಗಳನ್ನು ನಿಮ್ಮಲ್ಲಿಯೇ ಇಟ್ಟುಕೊಳ್ಳಲು ಸಾಧ್ಯವಾಗುತ್ತಿಲ್ಲ, ತಲೆಕೆಡಿಸಿಕೊಳ್ಳಬೇಡಿ, ಅವು ನಿಮ್ಮಂತೆಯೇ ಅಪ್ರಸ್ತುತ. ಅಗ್ಲೀ, ಪೀಸ್ ಆಫ್ ಶಿ*.. ನಿಮ್ಮ ಮತ್ತು ನಿಮ್ಮ ಕುಟುಂಬದ ಬಗ್ಗೆ ಬೇಸರವಾಗುತ್ತಿದೆ – ಎಂದಾದರು ನಾನು ನಿಮ್ಮನ್ನು ರಸ್ತೆಯಲ್ಲಿ ನೋಡಿದರೆ, ನಾನು ನಿಮಗಿಂತ ಕೊಳಕಾಗಿ ಬಿಡುತ್ತೇನೆ – ನೀವು ನಡೆದಾಡುವ ಕೊಳಕು".

ತಮೂರ್ ಇಕ್ಬಾಲ್ ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಇಬ್ರಾಹಿಂ ಅವರ ಮೂಗಿನ ಬಗ್ಗೆ ತಾವು ಮಾಡಿದ್ದ ಕಾಮೆಂಟ್ ಕೆಟ್ಟದಾಗಿತ್ತು ಎಂಬುದನ್ನು ಅವರು ಒಪ್ಪಿಕೊಂಡರು. "ಹಹಹಹ ದಟ್ಸ್ ಮೈ ಮ್ಯಾನ್. ನೋಡಿ, ಇವರೇ ನಾನು ಸಿನಿಮಾದಲ್ಲಿ ನೋಡಲು ಬಯಸುವ ವ್ಯಕ್ತಿ. ಆ ನಕಲಿ ಕಾರ್ನೆಟ್ಟೊ ಮಶಿ ಕ್ರಿಂಜಿ ಮನುಷ್ಯನಲ್ಲ. ಹೇ, ಹೌದು ಆ ಮೂಗಿನ ಬಗ್ಗೆ ಮಾಡಿದ್ದ ಕಾಮೆಂಟ್ ಕೆಟ್ಟದಾಗಿತ್ತು. ಉಳಿದದ್ದು ಸರಿಯಾಗಿದೆ. ನಿಮ್ಮ ತಂದೆಯ ದೊಡ್ಡ ಅಭಿಮಾನಿ ನಾನು. ಅವರನ್ನು ನಿರಾಸೆಗೊಳಿಸಬೇಡಿ" ಎಂದು ತಿಳಿಸಿದ್ದಾರೆ.

ಚೊಚ್ಚಲ ಚಿತ್ರಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾದರೂ, ಇಬ್ರಾಹಿಂ ಅಲಿ ಖಾನ್ ಈಗಾಗಲೇ ತಮ್ಮ ಎರಡನೇ ಪ್ರಾಜೆಕ್ಟ್ ಅನ್ನು ಖಚಿತಪಡಿಸಿಕೊಂಡಿದ್ದಾರೆ. ಧರ್ಮ ಪ್ರೊಡಕ್ಷನ್ಸ್ ನಿರ್ಮಾಣದ ಸರ್ಜಮೀನ್ ಚಿತ್ರದಲ್ಲಿ ನಟಿಸಲಿದ್ದಾರೆ. ಈ ಚಿತ್ರದಲ್ಲಿ ಕಾಜೋಲ್ ಮತ್ತು ಪೃಥ್ವಿರಾಜ್ ಸುಕುಮಾರನ್ ಪ್ರಮುಖ ಪಾತ್ರಗಳನ್ನು ನಿರ್ವಹಿಸಲಿದ್ದಾರೆ. ಇದು ಬೋಮನ್ ಇರಾನಿ ಅವರ ಮಗ ಕಾಯೋಜ್ ಇರಾನಿ ನಿರ್ದೇಶನದ ಚೊಚ್ಚಲ ಚಿತ್ರವೂ ಹೌದು.




# ಕಿಸ್ಸಿಂಗ್ ಸೀನ್‌ಗೆ ಹೆದರಿ ಎಷ್ಟು ದಿನ ಓಡಲಿ

ಮೂರ್ನಾಲ್ಕು ಮರಾಠಿ ಸಿನಿಮಾ ಮಾಡಿ ಆನಂತರ ಬಾಲಿವುಡ್ ಅಂಗಳಕ್ಕೆ ಕಾಲಿಟ್ಟ ಸುಂದರಿ ಮೃಣಾಲ್ ಠಾಕೂರ್. ಲವ್ ಯು ಸೋನಿಯಾ, ಸೂಪರ್ 30, ಗೋಸ್ಟ್ ಸ್ಟೋರಿಸ್, ಧಮಾಕಾ, ಜರ್ಸಿ ಸೇರಿದಂತೆ ಹಲವು ಸಿನಿಮಾಗಳಲ್ಲಿ ಅಭಿನಯಿಸಿದ್ದಾರೆ.

ಆದರೆ ಬಿಗ್ ಹಿಟ್ ತಂದುಕೊಟ್ಟಿದ್ದು ತೆಲುಗು ಸೀತಾ ರಾಮಮ್ ಸಿನಿಮಾ. ಎಷ್ಟರ ಮಟ್ಟಕ್ಕೆ ಹಿಟ್ ಆಯ್ತು ಅಂದ್ರೆ ಸಿನಿಮಾ ಡಬ್ ಆದರೂ ಹಕ್ಕು ಪಡೆಯಲು ನಿರ್ಮಾಪಕರು ವಿತರಕರು ಕಾಯುತ್ತಿದ್ದರು. ಇದಾದ ಮೇಲೆ ಮಾಡಿದ 10 ಸಿನಿಮಾಗಳು ಕೂಡ ಸೂಪರ್ ಹಿಟ್. ಆದರೆ ಮೃಣಾಲ್‌ಗೆ ಕಿಸ್ ಸೀನ್ ಮಾಡುವುದು ಭಯ ಆಗುತ್ತಿತಂತೆ.

'ಕಿಸ್ಸಿಂಗ್ ಸೀನ್ ಅಥವಾ ರೊಮ್ಯಾನ್ಸ್ ಸೀನ್‌ಗಳು ಇರುವ ದೃಶ್ಯಗಳನ್ನು ತೆರೆ ಮೇಲೆ ಮಾಡಲು ನಾನು ತುಂಬಾ ಭಯ ಪಡುತ್ತಿದ್ದೆ. ಸೀಸನ್ ಇದ್ದ ಸಿನಿಮಾಗಳಿಂದ ಭಯ ಪಟ್ಟು ಬೇಡ ಬೇಡ ಎಂದು ಹಲವು ಸಿನಿಮಾಗಳನ್ನು ರಿಜೆಕ್ಟ್ ಮಾಡಿದ್ದೀನಿ. ಆದರೆ ಎಷ್ಟು ದಿನಗಳ ಕಾಲ ನಾನು ಇದನ್ನು ಹೇಳಿಕೊಂಡು ಮುಂದುವರೆಸಲಿ? ಒಂದು ಸಮಯ ಎದುರಾಗಿತ್ತು.... ಆಗ ನನ್ನ ಪೋಷಕರನ್ನು ಪಕ್ಕದಲ್ಲಿ ಕೂರಿಸಿಕೊಂಡು ಚರ್ಚೆ ಮಾಡಿದೆ. ಅಪ್ಪ ಸಿನಿಮಾದ ಕಥೆ ಒಪ್ಪಿಕೊಂಡು ನಾನು ಮುಂದುವರೆಯುತ್ತೀನಿ ಆದರೆ ಒಂದೊಂದು ಸೀನ್‌ಗಳನ್ನು ನಾನು ಏನೇ ಮಾಡಿದರೂ ಮಿಸ್ ಮಾಡಲು ಆಗುವುದಿಲ್ಲ. ಸಿನಿಮಾ ಮಾಡಲೇ ಬೇಕು ಆದರೆ ಒಂದು ಸೀನ್‌ನಿಂದ ಸಂಪೂರ್ಣ ಪ್ರಾಜೆಕ್ಟ್ ಕೈ ಬಿಡಲು ಆಗುವುದಿಲ್ಲ. ಸಿನಿಮಾ ಒಪ್ಪಿಕೊಂಡು ಮಾಡಲು ಮುಂದುವರೆದಾಗ ನನ್ನ ಸಂಬಂಧಿಕರು ಕರೆ ಮಾಡಿದರು...ಓ ಈಗ ನೀನು ಈ ವ್ಯಕ್ತಿಯನ್ನು ಡೇಟ್ ಮಾಡುತ್ತಿರುವೆ ಮದುವೆ ಯಾವಾಗ ಎಂದು ಪ್ರಶ್ನೆ ಮಾಡಿದ್ದರು. ಅವರ ಮಾತುಗಳನ್ನು ಕೇಳಿ ಆಶ್ಚರ್ಯ ಆಯ್ತು. ಆದರೆ ನಾವು ಕಲಾವಿದರು ತೆರೆ ಮೇಲೆ ನಮ್ಮ ಕೆಲಸ ಮಾಡುತ್ತೀವಿ ಅಷ್ಟೇ..' ಎಂದು ಈ ಹಿಂದೆ ಸಂದರ್ಶನ ಒಂದರಲ್ಲಿ ಮೃಣಾಲ್ ಮಾತನಾಡಿದ್ದಾರೆ.

ಸದ್ಯ ಮೃಣಾಲ್ ಸಿಂಗಲ್ ಲೈಫ್ ಎಂಜಾಯ್ ಮಾಡುತ್ತಿರುವುದಾಗಿ ಪಬ್ಲಿಕ್‌ನಲ್ಲಿ ಹೇಳಿಕೊಂಡಿದ್ದಾರೆ. ಆದರೂ ಕಿಯಾನ್ ರೀವಿಸ್‌ರನ್ನು ಐಡಿಯಲ್ ಮ್ಯಾನ್ ಆಗಿ ಆದರಿಸುತ್ತೀನಿ ಎಂದಿದ್ದಾರೆ. ಆದರೆ ಹಿಂದಿನ ಬಾಯ್‌ಫ್ರೆಂಡ್ ಬಿಟ್ಟು ಹೋದ ಮೇಲೆ ಜೀವನದ ಪಾಠ ಕಲಿತಿದ್ದೀನಿ ಎಂದಿದ್ದಾರೆ. ಸಾಮಾನ್ಯ ಹುಡುಗಿ ನಟಿಯಾಗುವುದನ್ನು ಮಾಜಿ ಬಾಯ್‌ಫ್ರೆಂಡ್ ಸಹಿಸಿಕೊಳ್ಳಲು ಆಗಲಿಲ್ಲ ಹೀಗಾಗಿ ನಾಯಕಿಯರನ್ನು ಪ್ರೀತಿಸುವುದಿಲ್ಲ ಎಂದು ಬ್ರೇಕಪ್ ಮಾಡಿಕೊಂಡರಂತೆ. ಆದರೆ ಇದುವರೆಗೂ ಭೇಟಿ ಮಾಡಿರುವ ಹುಡುಗರಲ್ಲಿ ಯಾರೂ ಅಷ್ಟು ಅಟ್ರಾಕ್ಟಿವ್ ಆಗಿಲ್ಲ ಆದರೆ ಒಳ್ಳೆಯವರು. ಮುಂದೊಂದು ದಿನ ಪ್ರೀತ ಆದರೆ ಹಂಚಿಕೊಳ್ಳುತ್ತೀನಿ ಎಂದಿದ್ದಾರೆ.



Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878